ಬೆಂಗಳೂರು ಸಂಪುಟ: 16 ಸಂಚಿಕೆ: 58 ಪುಟ: 06 ಶುಕ್ರವಾರ 24-01-2025

Mail:mussanje2010@gmail.com www.mussanjenews.com


# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB) Executive Editor: L P Babu Honourary Editor: Venkatesh




ರಾಜಕೀಯಕ್ಕೆ ನಟಿ ತ್ರಿಷಾ ಎಂಟ್ರಿ ?

ಕುಂಟುತ್ತಾ ನಡೆವ ರಶ್ಮಿಕಾಗೆ ವಿಜಯ್ ಆಸರೆ

ಗೌರವ ಡಾಕ್ಟರೇಟ್ ಬಂದಿರುವುದು ಖುಷಿಯಿದೆ ಪುಟ 6

## ಮೈಕ್ರೋ ಫೈನಾನ್ಸ್ ಹಾಗೂ ಮೀಟರ್‌ಬಡ್ಡಿ ದಂಧೆ ಕಡಿವಾಣಕ್ಕೆ

# ಸುಗ್ರೀವಾಜ್ಞೆ ಅಸ್ತ್ರ!

**ಬೆಂಗಳೂರು:** ಖಾಸಗಿ ಹಣಕಾಸು ಸಂಸ್ಥೆಗಳ(ಮೈಕ್ರೋ ಫೈನಾನ್ಸ್) ಮೀಟರ್ ಬಡ್ಡಿ ದಂಧೆಗೆ ಕಡಿವಾಣ ಹಾಕಲು ಸುಗ್ರೀವಾಜ್ಞೆ ಮೂಲಕ ಕಾನೂನು ರೂಪಿಸಲು ರಾಜ್ಯ ಸರ್ಕಾರ ಮುಂದಾಗಿದೆ.

ಮೈಕ್ರೋ ಫೈನಾನ್ಸ್ ಹಾಗೂ ಮೀಟರ್ ಬಡ್ಡಿ ದಂಧೆಕೋರರ ಹಾವಳಿಯಿಂದಾಗಿ ರಾಜ್ಯದಲ್ಲಿ ಮಧ್ಯಮ ವರ್ಗದ ಜನತೆ ಕಂಗಲಾಗಿ ಊರು ಬಿಡುತ್ತಿರುವುದಲ್ಲದೇ ಮನೆ-ಮಠ ಕಳೆದುಕೊಂಡು ಬೀದಿಪಾಲಾಗುತ್ತಿರುವ ವಿಷಯವನ್ನು ಈ ಬಾರಿ ಸರ್ಕಾರ ಗಂಭೀರವಾಗಿ ಪರಗಣಿಸಿದ್ದು, ಅಂತಹ ದಂಧೆಕೋರರನ್ನು ಮುಲಾಜಿಲ್ಲದೇ ಜೈಲಿಗಟ್ಟಲು ನಿರ್ಧರಿಸಿದೆ.

ಇತ್ತೀಚಿನ ದಿನಗಳಲ್ಲಿ ರಾಜ್ಯದ ಬಹುತೇಕ ಕಡೆ ಇಂತಹ ಕಿರುಕುಳ ಪ್ರಕರಣಗಳು ದಾಖಲಾಗುತ್ತಿದ್ದು, ಸಾಲಗಾರರು ಆತ್ಮಹತ್ಯೆಯ ದಾರಿ ಹಿಡಿಯುತ್ತಿರುವುದು ಸರ್ಕಾರಕ್ಕೆ ದೊಡ್ಡ ತಲೆನೋವಾಗಿದ್ದು, ಇದಕ್ಕೆ ಇಂತಹ ದಂಧೆಗೆ ಶಾಶ್ವತ ಕಡಿವಾಣ ಹಾಕುವ ಸಂಬಂಧ ನಿರ್ಧಾರಕ್ಕೆ ಬಂದಿದೆ.



ಮುಖ್ಯಮಂತ್ರಿಯವರಸೂಚನೆ ಮೇರೆಗೆ ಕಾನೂನು ಸಚಿವರು ಕಾರ್ಯಪ್ರವೃತ್ತರಾಗಿದ್ದು ಕಠಿಣ ಕಾನೂನು ರೂಪಿಸಲು ತೀರ್ಮಾನಿಸಿದ್ದಾರೆ. ಈ ಹಿನ್ನೆಲೆಯಲ್ಲಿ ನಾಳೆ ಸ್ವತಃ ಮುಖ್ಯಮಂತ್ರಿಯವರೇ ಸಭೆ ಕರೆದಿದ್ದು, ನಾಳೆಯ ಸಭೆಯಲ್ಲಿ ಮೈಕ್ರೋ ಫೈನಾನ್ಸ್‌ಗಳಿಗೆ ಮೂಗುದಾರ ಹಾಕುವ ಸಂಬಂಧ ಚರ್ಚೆ ನಡೆಯಲಿದೆ.

ಈ ಕುರಿತು ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದ ಕಾನೂನು ಖಾತೆ ಸಚಿವ ಎಚ್.ಕೆ.ಪಾಟೀಲ್, 'ಮೈಕ್ರೋ ಫೈನಾನ್ಸ್ ಸಂಸ್ಥೆಗಳ ದಂಧೆ ಹಾಗೂ ಮೀಟರ್ ಬಡ್ಡಿ ಮಾಫಿಯಾಕ್ಕೆ ಕಡಿವಾಣ ಹಾಕಲು ಮುಂದಿನ ಅಧಿವೇಶನದಲ್ಲಿಯೇ ಪುಟ 2

## ಸಭೆ ನಡೆಸಿ ಸೂಕ್ತ ನಿರ್ಧಾರ: .ಪರಮೇಶ್ವರ್

**ಬೆಂಗಳೂರು:** "ಮೈಕ್ರೋ ಫೈನಾನ್ಸ್ ಕಿರುಕುಳ ಸಂಬಂಧ ಕಠಿಣ ಕಾನೂನು ತರುವ ಕೆಲಸ ಮಾಡುತ್ತೇವೆ" ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ತಿಳಿಸಿದರು.



ಸದಾಶಿವನಗರ ನಿವಾಸದ ಬಳಿ ಮಾತನಾಡಿದ ಅವರು, "ಈಗಾಗಲೇ ಸಾಕಷ್ಟು ದೂರುಗಳು ಬಂದಿವೆ. ಕಾನೂನು ಇಬ್ಬರಿಗೂ ಇದೆ. ಬ್ಯಾಂಕ್ ನಿಯಮ ಪ್ರಕಾರ ರಿಕವರಿಗೆ ಕಾನೂನು ಇದೆ. ಅವರ ರಕ್ಷಣೆ ಮಾಡೋಕೆ ಕಾನೂನು ಇದೆ. ಕಾನೂನು ಕಠಿಣವಾಗಿಲ್ಲ ಎಂಬ ವರದಿ ಇದೆ. ಕಠಿಣ ಕಾನೂನು ತರುವ ಕೆಲಸ ಮಾಡುತ್ತೇವೆ. ಕಿರುಕುಳ ಆಗುತ್ತಿರುವುದನ್ನು ನಿಲ್ಲಿಸಲಾಗುತ್ತದೆ" ಎಂದು ಭರಸವೆ ನೀಡಿದರು. ಪುಟ 2



ರಾಮನಗರದ ದಾಸೇಗೌಡನದ ದೊಡ್ಡಿ ಗ್ರಾಮದಲ್ಲಿ ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನದ ಮಹಾದ್ವಾರ ಉದ್ಘಾಟನೆ ಕೇಂದ್ರ ಸಚಿವ ಹೆಚ್‌ಡಿ ಕುಮಾರಸ್ವಾಮಿ ಅವರು. ನೆರವೇರಿಸಿದರು.

## ಮುಡಾ ನಾಳೆಯೇ ಐಜಿಪಿಗೆ ವರದಿ ಸಲ್ಲಿಕೆ..!

**ಮೈಸೂರು:** ಸಿಎಂ ಸಿದ್ದರಾಮಯ್ಯ ಅವರ ಮಡದಿ ಪಾರ್ವತಿ ಅವರಿಗೆ ಮಂಜೂರಾದ ನಿವೇಶಗಳ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಚಾರಣೆ ನಡೆಸಿದ್ದು ಅಂತಿಮ ವರದಿ ನಾಳೆಯೇ ಕರ್ನಾಟಕ ಲೋಕಾಯುಕ್ತ ಐಜಿಪಿ ಸುಬ್ರಮಣ್ಣೇಶ್ವರ ರಾವ್ ಅವರಿಗೆ ಸಲ್ಲಿಕೆಯಾಗಲಿದೆ. ಒಟ್ಟು ಅಂದಾಜು ಮೂರು ಸಾವಿರಕ್ಕೂ ಹೆಚ್ಚು ಪುಟಗಳ ವರದಿಯನ್ನು ಮೈಸೂರು ಲೋಕಾಯುಕ್ತ ಎಸ್ಪಿ ಉದೇಶ್ ಅವರು ಸಲ್ಲಿಸಲ್ಲಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಮಾಹಿತಿಗಳ ಪ್ರಕಾರ, ಮುಡಾ ಹಗರಣ ಪ್ರಕರಣಕ್ಕೆ ಸಂಬಂಧಿಸಿದಂತೆ ನಡೆಸಿದ ತನಿಖೆ ಹಾಗೂವಿಚಾರಣೆಯ ವರದಿಯಲ್ಲಿರುವ ಅಂಶಗಳು ನಾಳೆಯೇ ಸಲ್ಲಿಕೆಯಾಗಲಿದೆ.

ನಾಳೆ ಬೆಂಗಳೂರಿನಲ್ಲಿ ಹಿರಿಯ ಅಧಿಕಾರಿಗಳಿಗೆ ವರದಿ ಸಲ್ಲಿಸಲಿರುವ ಮೈಸೂರು ಲೋಕಾಯುಕ್ತ ಎಸ್ಪಿ ಉದೇಶ್. ಬಳಿಕ ಸೋಮವಾರ ಕೋರ್ಟ್ ಎದುರು ವರದಿ ಸಲ್ಲಿಕೆಯಾಗಲಿದೆ.

## ವಿಧೇಯಕ ಅನುಮೋದಿಸದೆ ವಾಪಸ್ಸು ಕಳುಹಿಸಿದ ರಾಜ್ಯಪಾಲರು

**ಬೆಂಗಳೂರು:** ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಮುಜರಾಯಿ ವಿಧೇಯಕ ಸೇರಿದಂತೆ ನಾಲ್ಕು ವಿಧೇಯಕಗಳಿಗೆ ಅನುಮೋದನೆ ನೀಡದೆ ರಾಜ್ಯಪಾಲರು ವಾಪಸ್ ಕಳುಹಿಸಿದ್ದಾರೆ.



ಬೆಳಗಾವಿಯ ಚಳಿಗಾಲದ ಅಧಿವೇಶನದಲ್ಲಿ ಮಂಡನೆಯಾಗಿದ್ದ ಕರ್ನಾಟಕ ಮಿನರಲ್ಸ್ ಹಕ್ಕು ಮತ್ತು ಬೇರಿಂಗ್ ಲ್ಯಾಂಡ್ ಟ್ಯಾಕ್ಸ್ ಬಿಲ್ 2024, ಕರ್ನಾಟಕ ಹಿಂದೂ ಧಾರ್ಮಿಕಸಂಸ್ಥೆಗಳು ಮತ್ತು ಮುಜರಾಯಿ ವಿಧೇಯಕ 2024, ಕರ್ನಾಟಕ ಸಹಕಾರಿ ಸೊಸೈಟಿ ಗಳ ತಿದ್ದುಪಡಿ ವಿಧೇಯಕ 2024 ಮತ್ತು ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತು ಪ್ರದರ್ಶನ ಪ್ರಾಧಿಕಾರ ವಿಧೇಯಕ 2024 ಅಂಗೀಕಾರವಾಗಿತ್ತು. ಅನುಮೋದನೆಗಾಗಿ ರಾಜ್ಯಪಾಲರ ಕಚೇರಿಗೆ ಕಳುಹಿಸಲಾಗಿತ್ತು. ಆದರೆ, ವಿಧೇಯಕದ ಬಗ್ಗೆ ಸ್ಪಷ್ಟನೆ ಕೋರಿ ರಾಜ್ಯಪಾಲರು ರಾಜ್ಯ ಸರ್ಕಾರಕ್ಕೆ ವಾಪಸ್ಸು ಕಳುಹಿಸಿದ್ದಾರೆ ಎಂದು ತಿಳಿದುಬಂದಿದೆ.

ರಾಜ್ಯಪಾಲರ ನಡೆಯಿಂದ ಆಕ್ರೋಶಗೊಂಡಿರುವ ರಾಜ್ಯ ಸರ್ಕಾರ ಕಾನೂನು ಹೋರಾಟ ನಡೆಸಲು ಮುಂದಾಗಿದೆ. ರಾಜ್ಯಪಾಲರ ನಡೆ ವಿರುದ್ಧ ಕಾನೂನು ಕ್ರಮದ ಮೊರೆ ಹೋಗಲು ರಾಜ್ಯ ಸರ್ಕಾರದ ಚಿಂತನೆ ನಡೆಸಿದೆ. ಇನ್ನು ನಾಲ್ಕು ಮಸೂದೆಗಳನ್ನು ಅಂಗೀಕರಿಸಲು ರಾಜ್ಯಪಾಲರು ಬಾಕಿ ಉಳಿಸಿಕೊಂಡಿದೆ.

### ಬಿವೈವಿ ವಿರುದ್ಧ ವರಿಷ್ಠರಿಗೆ
## ದೂರು ನೀಡಿಲ್ಲ



ಬೆಂಗಳೂರು: ಬಿಜೆಪಿ ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ವಿರುದ್ಧ ಪಕ್ಷದ ವರಿಷ್ಠರಿಗೆ ಯಾವುದೇ ದೂರು ನೀಡಿಲ್ಲ. ಆದರೂ ದೂರು ನೀಡಿದ್ದೇನೆ ಎಂದು ಬಿಂಬಿಸಲಾಗಿದೆ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್, ಅಶೋಕ ಇಂದಿಲ್ಲಿ ಹೇಳಿದ್ದಾರೆ.

ಒಕ್ಕಲಿಗರು ಪ್ರತ್ಯೇಕವಾಗಿ ಸಭೆ ಮಾಡಿಲ್ಲ ಅಥವಾ ಗುರುತಿಸಿಕೊಂಡಿಲ್ಲ. ಇದು ಕೂಡ ಸುಳ್ಳು ಸುದ್ದಿ" "ನಮ್ಮಲ್ಲಿ ಯಾವುದೇ ಟೀಮ್ ಇಲ್ಲ ಎಂದು ಹೇಳಿದ್ದಾರೆ

ನಗರದಲ್ಲಿ ಇಂದು ಸುದ್ದಿಗಾರರ ಜೊತೆ ಮಾತನಾಡಿದ ಅವರು, ಬಿಜೆಪಿ ಪಕ್ಷದಲ್ಲಿ ಗೊಂದಲ ಇರುವುದು ನಿಜ. ಪಕ್ಷದ ನಾಯಕರಾದ ಶ್ರೀರಾಮುಲು, ಜನಾರ್ದನರೆಡ್ಡಿ ಜೊತೆ ಚರ್ಚಿಸುತ್ತೇವೆ ಎಂದು ಹೇಳಿದ್ದಾರೆ.

ನಾಯಕರಲ್ಲಿರುವ ಗೊಂದಲ ಸರಿಪಡಿಸುವ ಕೆಲಸ ಮಾಡಲಾಗುವುದು. ಶ್ರೀರಾಮುಲು ಅವರೊಂದಿಗೆ ನಾನು ಹಾಗೂ ಬಸವರಾಜ ಬೊಮ್ಮಾಯಿ ಚರ್ಚಿಸಲಿದ್ದೇವೆ" ಎಂದು ಹೇಳಿದ್ದಾರೆ.

ಲೋಕಾಯುಕ್ತರಿಂದ ಮುಡಾ ಹಗರಣ ಮುಚ್ಚಿಹಾಕುವ ಪ್ರಯತ್ನ ಮಾಡಲಾಗಿದೆ. "ಮುಡಾ ಹಗರಣದಲ್ಲಿ ಜಾರಿ ನಿರ್ದೇಶನಾಲಯ ಆಸ್ತಿಗಳನ್ನು ವಶಪಡಿಸಿಕೊಂಡಿದ್ದರೂ, ಲೋಕಾಯುಕ್ತ ಪೊಲೀಸರು ಯಾವುದೇ ಕ್ರಮ ಕೈಗೊಂಡಿಲ್ಲ.

ಈ ಪ್ರಕರಣ ಮುಚ್ಚಿಹಾಕಲು ಲೋಕಾಯುಕ್ತ ಪೊಲೀಸರು ಪ್ರಯತ್ನ ಮಾಡುತ್ತಿದ್ದಾರೆ ಎಂದು ಆರೋಪಿಸಿದ್ದಾರೆ ಪುಟ 2

## ದರ್ಶನ್ ಸೇರಿ ಏಳು ಆರೋಪಿಗಳಿಗೆ ನೋಟಿಸ್

**ಬೆಂಗಳೂರು:** ರೇಣುಕಾ ಸ್ವಾಮಿ ಕೊಲೆ ಪ್ರಕರಣದಲ್ಲಿ ಜಾಮೀನಿನಲ್ಲಿದ್ದ ನಟ ದರ್ಶನ್ ಸೇರಿದಂತೆ ಏಳು ಮಂದಿ ಆರೋಪಿಗಳಿಗೆ ಸುಪ್ರೀಂ ಕೋರ್ಟ್ ನೋಟಿಸ್ ಜಾರಿ ಮಾಡಿದೆ.



ಹೈಕೋರ್ಟ್ ನೀಡಿದ ಜಾಮೀನನ್ನು ಬೆಂಗಳೂರು ಪೊಲೀಸರು ಪ್ರಶ್ನಿಸಿದ್ದ ಹಿನ್ನೆಲೆಯಲ್ಲಿ ಈ ನೋಟಿಸ್ ಜಾರಿಯಾಗಿದೆ. ಸರ್ಕಾರಿ ವಕೀಲರು ಆರೋಪಿಗಳ ಅಮಾನವೀಯ ನಡವಳಿಕೆಯನ್ನು ಪ್ರಸ್ತಾಪಿಸಿದ್ದು, ಇಂದು ನಡೆದ ವಿಚಾರಣೆಯಲ್ಲಿ ಏಳು ಮಂದಿ ಆರೋಪಿಗಳಿಗೆ ನೋಟಿಸ್ ನೀಡಿ, ವಿಚಾರಣೆ ಮುಂದೂಡಿದೆ. ಕಳೆದ ವರ್ಷ ಕರ್ನಾಟಕ ಹೈಕೋರ್ಟ್ ರೇಣುಕಾ ಸ್ವಾಮಿ ಕೊಲೆ ಕೇಸ್‌ನ ಏಳು ಆರೋಪಿಗಳಿಗೆ ಜಾಮೀನು ನೀಡಿತ್ತು. ಇದನ್ನು ಬೆಂಗಳೂರು ಪೊಲೀಸರು ಸರ್ಕಾರದ ಒಪ್ಪಿಗೆ ಪಡೆದು ಪುಟ 2

# ಗಣರಾಜ್ಯೋತ್ಸವಕ್ಕೆ ಸಕಲ ಸಿದ್ಧತೆ: ಬಿಗಿ ಪೊಲೀಸ್ ಬಂದೋಬಸ್ತ್

**ಬೆಂಗಳೂರು:** ಜ.26 ರ 'ಗಣರಾಜ್ಯೋತ್ಸವಕ್ಕೆ' ಸಕಲ ಸಿದ್ಧತೆ ಮಾಡಿಕೊಳ್ಳಲಾಗುತ್ತಿದ್ದು ಬಿಗಿ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಲಾಗುತ್ತದೆ ಎಂದು ಬೆಂಗಳೂರು ಕಮಿಷನರ್ ಬಿ.ದಯಾನಂದ್ ತಿಳಿಸಿದರು.

ಗಣರಾಜ್ಯೋತ್ಸವಕ್ಕೆ ಸಿದ್ದತೆ ಬಗ್ಗೆ ಮಾತನಾಡಿ ಮಾಹಿತಿ ನೀಡಿದ ಬೆಂಗಳೂರು ಪೊಲೀಸ್ ಆಯುಕ್ತ ಬಿ.ದಯಾನಂದ್, ಗಣರಾಜ್ಯೋತ್ಸವದ ಅಂಗವಾಗಿ ಜ.26ರಂದು ಬೆಂಗಳೂರಿನ ಮಾಣಿಕ್ ಷಾ ಪರೇಡ್ ಮೈದಾನ ಸುತ್ತಲು ಬಿಗಿ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿದೆ. ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಅಂದು ಬೆಳಿಗ್ಗೆ 9 ಗಂಟೆಗೆ ಧ್ವಜಾರೋಹಣ ನೆರವೇರಿಸಲಿದ್ದಾರೆ. ಭದ್ರತೆಗಾಗಿ



ಅಧಿಕಾರಿಗಳ ಜೊತೆಗೆ ಪೊಲೀಸ್ ಸಿಬ್ಬಂದಿಗಳನ್ನು ನಿಯೋಜನೆ ಮಾಡಲಾಗಿದೆ. ಯಾವುದೇ ಸಮಸ್ಯೆಯಾಗದಂತೆ ರಾಜೋತ್ಸವ ಆಚರಣೆಗೆ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ತಿಳಿಸಿದರು. ನಗರದ ಎಲ್ಲಾ ವಿಭಾಗಗಳಿಂದ ಪೊಲೀಸ್ ಭದ್ರತೆ ಒದಗಿಸಲಾಗುತ್ತದೆ.

8 ಡಿಸಿಪಿ, 17ಎಸಿಪಿ, 44 ಪಿಐ, 114 ಪಿಎಸ್ಐ, 185 ಎಎಸ್ಐ, 80 ಮಹಿಳಾ ಸಿಬ್ಬಂದಿ 30 ಕ್ಯಾಮೆರಾ ಸಿಬ್ಬಂದಿಗಳು, 10 ಕೆ.ಎಸ್.ಆರ್.ಪಿ ತುಕಡಿ 2 ಅಗ್ನಿಶಾಮಕ ವಾಹನ, ಕ್ಷಿಪ್ರಕಾರ್ಯ ಪಡೆ, ಭದ್ರತೆಗಾಗಿ ಒಟ್ಟು 1,051 ಅಧಿಕಾರಿಗಳು ಹಾಗೂ ಸಿಬ್ಬಂದಿಗಳನ್ನು ನಿಯೋಜನೆ ಮಾಡಲಾಗಿದೆ. ಮೈದಾನದ ಸುತ್ತಮುತ್ತ 103 ಪುಟ 2

## ಇನ್ನು ಮುಂದೆ ಚಿತ್ರೀಕರಣಕ್ಕೆ ಅನುಮತಿ ಕಡ್ಡಾಯ

**ಬೆಂಗಳೂರು:** ಅರಣ್ಯ ಪ್ರದೇಶದಲ್ಲಿ ಇನ್ನು ಮುಂದೆ ಸಿನಿಮಾ, ಸಾಕ್ಷ್ಯಚಿತ್ರ, ಧಾರಾವಾಹಿ ಸೇರಿದಂತೆ ಯಾವುದೇ ಚಿತ್ರೀಕರಣಕ್ಕೆ ಸರ್ಕಾರದ ಅನುಮತಿ ಪಡೆಯುವುದನ್ನು ಕಡ್ಡಾಯಗೊಳಿಸಿ ಆದೇಶ ಹೊರಡಿಸಲು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ಸೂಚನೆ ನೀಡಿದ್ದಾರೆ.



ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಯವರಿಗೆ ಸ್ಪಷ್ಟ ಸೂಚನೆ ನೀಡಿರುವ ಸಚಿವರು, ಚಲನಚಿತ್ರ, ದೂರದರ್ಶನ ಸಾಕ್ಷ್ಯಚಿತ್ರ, ಧಾರಾವಾಹಿ ಇತ್ಯಾದಿ ಚಿತ್ರೀಕರಣಕ್ಕೆ ಸಂಬಂಧಿತ ಉಪಅರಣ್ಯ ಸಂರಕ್ಷಣಾಧಿಕಾರಿಗಳು ನಿಗದಿತ ಶುಲ್ಕ ಕಟ್ಟಿಸಿಕೊಂಡು ಅನುಮತಿ ನೀಡುತ್ತಿದ್ದಾರೆ ಎಂದರು. ಸ್ಥಳೀಯ ಮಟ್ಟದಲ್ಲೂ ಅಧಿಕಾರಿಗಳು ಅನುಮತಿ ನೀಡುತ್ತಿರುವುದರಿಂದ ಅರಣ್ಯ ಪ್ರದೇಶದ ಗೌಪ್ಯ ಮಾಹಿತಿ ಹೊರ ಜಗತ್ತಿಗೆ ಲಭಿಸುವ ಸಂಭವ ಇರುತ್ತದೆ. ಇದು ಪರಿಸರ ಹಾಗೂ ಜೀವವೈವಿಧ್ಯಕ್ಕೂ ಧಕ್ಕೆ ತರುತ್ತದೆ ಎಂದು ತಿಳಿಸಿದ್ದಾರೆ. ಅರಣ್ಯ ಹಾಗೂ ವನ್ಯ ಜೀವಿಗಳನ್ನು ಸಂರಕ್ಷಿಸಿ ಮುಂದಿನ ಪೀಳಿಗೆಗೆ ಉತ್ತಮ ಪರಿಸರ, ಪ್ರಕೃತಿ ಹಸ್ತಾಂತರಿಸುವ ನಿಟ್ಟಿನಲ್ಲಿ ರಾಜ್ಯದ ಯಾವುದೇ ಅರಣ್ಯ ಪ್ರದೇಶದಲ್ಲಿ ಯಾವುದೇ ಬಗೆಯ ಚಿತ್ರೀಕರಣಕ್ಕೆ ಕಡ್ಡಾಯವಾಗಿ ಸರ್ಕಾರದ ವತಿಯಿಂದ ಅನುಮತಿ ಪಡೆಯಲು ಸೂಕ್ತ ಆದೇಶ ಹೊರಡಿಸುವಂತೆ ಸೂಚಿಸಿದ್ದಾರೆ.

## ಅತ್ಯಾಚಾರಗೈದು ಮಹಿಳೆಯ ಹತ್ಯೆ

**ಬೆಂಗಳೂರು:** ಮಹಿಳೆಯೊಬ್ಬರ ಮೇಲೆ ಅತ್ಯಾಚಾರಗೈದು ಬಳಿಕ ಹತ್ಯೆಗೈದಿರುವ ಘಟನೆ ರಾಮಮೂರ್ತಿ ನಗರ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ. ಕಲ್ಲು ಎತ್ತಿ ಹಾಕಿ ಹತ್ಯೆಗೈದಿರುವ ಸ್ಥಿತಿಯಲ್ಲಿ 28 ವರ್ಷದ ಮಹಿಳೆಯ ಶವ ಕಲ್ಕೆರೆ ಲೇಕ್ ಬಳಿಯ ನಿರ್ಜನ ಪ್ರದೇಶದಲ್ಲಿ ಪತ್ತೆಯಾಗಿದೆ. ಮಹಿಳೆಯ ಮೇಲೆ ಅತ್ಯಾಚಾರ ಎಸಗಿರುವುದು ತಿಳಿದು ಬಂದಿದೆ. ಪತಿಯೊಂದಿಗೆ ವಾಸವಿದ್ದ ಮಹಿಳೆ ನಗರದ ಖಾಸಗಿ ಅಪಾರ್ಟ್‌ಮೆಂಟ್‌ವೊಂದರಲ್ಲಿ ಮನೆಗೆಲಸ ಮಾಡಿಕೊಂಡಿದ್ದರು.

ಘಟನಾ ಸ್ಥಳಕ್ಕೆ ರಾಮಮೂರ್ತಿ ನಗರ ಠಾಣೆ ಪೊಲೀಸರು ಭೇಟಿ ನೀಡಿ ತಪಾಸಣೆ ನಡೆಸುತ್ತಿದ್ದಾರೆ. ಅಲ್ಲದೆ ಪೂರ್ವ ವಿಭಾಗದ ಡಿಸಿಪಿ ಡಿ.ದೇವರಾಜ್ ಭೇಟಿ ನೀಡಿದ್ದು, ಮಾಹಿತಿ ಕಲೆ ಹಾಕುತ್ತಿದ್ದಾರೆ. ಪುಟ 2

## ಕಾರು ಪಲ್ಟಿ: ಮೂವರು ಸಾವು

**ವಿಜಯಪುರ:** ಚಾಲಕನ ನಿಯಂತ್ರಣ ತಪ್ಪಿದ ಕಾರು, ಮರಕ್ಕೆ ಡಿಕ್ಕಿ ಹೊಡೆದು ಪಲ್ಟಿಯಾದ ಪರಿಣಾಮ ಕಾರಿನಲ್ಲಿ ಪ್ರಯಾಣಿಸುತ್ತಿದ್ದ ಮೂವರು ಮೃತಪಟ್ಟ ಘಟನೆ ವಿಜಯಪುರ ತಾಲೂಕಿನ ಕನ್ನಾಳ ಕ್ರಾಸ್ ಬಳಿ ರಾಷ್ಟ್ರೀಯ ಹೆದ್ದಾರಿ 50ರಲ್ಲಿ ನಡೆದಿದೆ. ಅಭಿಷೇಕ್ ಸಾವಂತ್ (34), ವಿಜಯಕುಮಾರ್ ಔರಂಗಾಬಾದ್ (45), ರಾಜು ಗೇಣ್ಣೂರ (30) ಮೃತರು. ಘಟನೆಯಲ್ಲಿ ಇಬ್ಬರು ಗಾಯಗೊಂಡಿದ್ದು, ಅವರನ್ನು ಸ್ಥಳೀಯ ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಪುಟ 2

## ಚೆಕ್ ಬೌನ್ಸ್: ಆರ್‌ಜಿವಿಗೆ ೩ ತಿಂಗಳ ಜೈಲು ಶಿಕ್ಷೆ

**ಮುಂಬೈ:** ಚೆಕ್ ಬೌನ್ಸ್ ಪ್ರಕರಣಕ್ಕೆ ಸಂಬಂಧಿಸಿದಂತೆ ಬಾಲಿವುಡ್ ಚಲನಚಿತ್ರ ನಿರ್ಮಾಪಕ ರಾಮ್ ಗೋಪಾಲ್ ವರ್ಮಾ ಅವರಿಗೆ ಮುಂಬೈನ ನ್ಯಾಯಾಲಯ ಗುರುವಾರ ಮೂರು ತಿಂಗಳ ಜೈಲು ಶಿಕ್ಷೆ ವಿಧಿಸಿದೆ. ಅಂಧೇರಿಯ ನ್ಯಾಯಾಂಗ ಮ್ಯಾಜಿಸ್ಟ್ರೇಟ್ (ಪ್ರಥಮ ದರ್ಜೆ) ವೈ ಪಿ ಪೂಜಾರಿ, ನೆಗೋಷಿಯೇಬಲ್ ಇನ್ಸ್ಟುಮೆಂಟ್ಸ್ ಕಾಯ್ದೆಯಡಿ ನಿಬಂಧನೆಗಳನ್ನು ಉಲ್ಲಂಘಿಸಿದ್ದಕ್ಕಾಗಿ ವರ್ಮಾ ಅವರನ್ನು ದೋಷಿ ಎಂದು ತೀರ್ಪು ನೀಡಿದ್ದಾರೆ. ಜೈಲು ಶಿಕ್ಷೆಯ ಜೊತೆಗೆ, ಆದೇಶದ ದಿನಾಂಕದಿಂದ ಮೂರು ತಿಂಗಳೊಳಗೆ ದೂರುದಾರರಿಗೆ 3,72,219 ರೂ.ಗಳ ಪರಿಹಾರವನ್ನು ಪಾವತಿಸಲು ನ್ಯಾಯಾಲಯವು ವರ್ಮಾಗೆ ಆದೇಶಿಸಿದೆ. ಪುಟ 2




ಇಂದು ಗದಗ ಶಹರದ ಕಳಸಾಪೂರ ರಸ್ತೆಯಲ್ಲಿರುವ ಶ್ರೀ ರಾಕೇಶ ಸಿದ್ದರಾಮಯ್ಯ ಖಾಸಗಿ ಕೈಗಾರಿಕಾ ಸಂಸ್ಥೆಗೆ ಕರ್ನಾಟಕ ಸರ್ಕಾರದ ಮಾಜಿ ಮುಖ್ಯಮಂತ್ರಿಗಳು ಹಾಗೂ ಗದಗ – ಹಾವೇರಿ ಲೋಕಸಭಾ ಕ್ಷೇತ್ರದ ಸಂಸದರಾದ ಶ್ರೀ ಬಸವರಾಜ ಬೊಮ್ಮಾಯಿರವರು ಭೇಟಿ ನೀಡಿ ವಿದ್ಯಾರ್ಥಿಗಳೊಡನೆ ಸಂವಾದ ನಡೆಸಿ ಮಾತನಾಡಿದರು. ಈ ಸಂಧರ್ಭದಲ್ಲಿ ಶಾಸಕರಾದ ಶ್ರೀ ಸಿ.ಸಿ.ಪಾಟೀಲ್, ವಿಧಾನ ಪರಿಷತ್ ಸದಸ್ಯರಾದ ಶ್ರೀ ಎಸ್.ವಿ.ಸಂಕನೂರ, ಸಂಸ್ಥೆಯ ಮುಖ್ಯಸ್ಥರಾದ ಶ್ರೀ ಶಶಿಧರ ರೊಳ್ಳಿ ಸೇರಿದಂತೆ ಪ್ರಮುಖರು ಉಪಸ್ಥಿತರಿದ್ದರು.

# ಪ್ರಜ್ಞಾಪೂರ್ವಕವಾಗಿಯೇ ದಾವೋಸ್ ಶೃಂಗಸಭೆಯಿಂದ ದೂರ: ಎಂ.ಬಿ ಪಾಟೀಲ

**ಬೆಂಗಳೂರು:** ದಾವೋಸ್ ಶೃಂಗಸಭೆಯಲ್ಲಿ ರಾಜ್ಯವು ಈ ಸಲ ಪ್ರಜ್ಞಾಪೂರ್ವಕವಾಗಿಯೇ ಭಾಗವಹಿಸುತ್ತಿಲ್ಲ. ಅಲ್ಲಿಗೂ ಹೋಗಿ ಒಡಂಬಡಿಕೆಗಳಿಗೆ ಸಹಿ ಹಾಕುವುದು ಮತ್ತು ಅವೇ ಕಂಪನಿಗಳನ್ನು ಇಲ್ಲಿಗೂ ಕರೆದು ಮತ್ತೆ ಅದೇ ಒಡಂಬಡಿಕೆಗಳಿಗೆ ಸಹಿ ಹಾಕುವುದರಿಂದ ವೃಥಾ ಗೊಂದಲ ಉಂಟಾಗುತ್ತದೆ. ಇದನ್ನು ತಪ್ಪಿಸಲೆಂದೇ ನಾವು ಈ ಸಲ ದಾವೋಸ್ ಶೃಂಗಸಭೆಯಿಂದ ದೂರ ಉಳಿದಿದ್ದೇವೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಹೇಳಿದ್ದಾರೆ.

ಶುಕ್ರವಾರ ಮಾಧ್ಯಮ ಪ್ರತಿನಿಧಿಗಳ ಜತೆ ಮಾತನಾಡಿದಅವರು, ಫೆ.11ರಿಂದ 14ರವರೆಗೆ ಬೆಂಗಳೂರಿನಲ್ಲಿ ನಡೆಯಲಿರುವ ಜಾಗತಿಕ ಹೂಡಿಕೆದಾರರ ಸಮಾವೇಶದಲ್ಲಿ ಜಾಗತಿಕ ಮಟ್ಟದ ಕಂಪನಿಗಳೆಲ್ಲ ಭಾಗವಹಿಸಲಿವೆ. ಇದರಿಂದ ರಾಜ್ಯಕ್ಕೆ 8ರಿಂದ 10 ಲಕ್ಷ ಕೋಟಿ ರೂಪಾಯಿ ಹೂಡಿಕೆ ಬರುವ ನಿರೀಕ್ಷೆ ಇದೆ ಎಂದು ಅವರು ಭರವಸೆ ವ್ಯಕ್ತಪಡಿಸಿದ್ದಾರೆ.

ಮಾಡಿಕೊಳ್ಳುವ ಒಡಂಬಡಿಕೆಗಳ ಪೈಕಿ ಮುಕ್ಕಾಲು ಪಾಲಾದರೂ ವಾಸ್ತವವಾಗಿ ಬಂಡವಾಳ



ರೂಪದಲ್ಲಿ ನಮಗೆ ಬರಬೇಕು. ಇಲ್ಲದೆ ಹೋದರೆ ಎಲ್ಲವೂ ವ್ಯರ್ಥ. ಆದ್ದರಿಂದ ನಾವು ವಾಸ್ತವಿಕ ದೃಷ್ಟಿಕೋನ ಹೊಂದಿದ್ದೇವೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಕೂಡ ಇದನ್ನೇ ಹೇಳಿದ್ದಾರೆ ಎಂದು ಅವರು ತಿಳಿಸಿದ್ದಾರೆ. 2022ರಲ್ಲಿ ಬಿಜೆಪಿ ಸರಕಾರ ಕೂಡ ಹೂಡಿಕೆದಾರರ ಸಮಾವೇಶ ಮಾಡಿ, 50 ಲಕ್ಷ ಕೋಟಿ ರೂಪಾಯಿ ಬರುತ್ತದೆ ಎಂದಿತು.

ಅದರಲ್ಲೂ ಗ್ರೀನ್ ಎನರ್ಜಿ ವಲಯಕ್ಕೆ 2.40 ಲಕ್ಷ ಕೋಟಿ ರೂಪಾಯಿ ಹೂಡಿಕೆ ಆಗಲಿದೆ ಎಂದಿತು. ಆದರೆ ಒಂದು ರೂಪಾಯಿ ಕೂಡ ಬರಲಿಲ್ಲ ಎಂದು ಅವರು ನೈಜ ಚಿತ್ರಣ ಕೊಟ್ಟಿದ್ದಾರೆ.

ನಮ್ಮಲ್ಲಿ ಗ್ರೀನ್ ಎನರ್ಜಿ ಕ್ಷೇತ್ರಕ್ಕೆ ಅಷ್ಟೊಂದು ಬಂಡವಾಳ ತಡೆದುಕೊಳ್ಳುವ ಧಾರಣಾಶಕ್ತಿಯೇ ಇಲ್ಲ. ಆದರೂ ಬಿಜೆಪಿ ಸರಕಾರ ದೊಡ್ಡದಾಗಿ ಹೇಳಿಕೊಂಡಿತು. ಅಂತಹ ತಪ್ಪು ಈ ಬಾರಿ ಆಗುವುದಿಲ್ಲ ಎಂದು ಪಾಟೀಲ ಸ್ಪಷ್ಟಪಡಿಸಿದ್ದಾರೆ.

ಜಾರಕಿಹೊಳಿಗೆ ಶಕ್ತಿ ಇದೆ

ಕಾಂಗ್ರೆಸ್ ಮುಖಂಡ ಸತೀಶ ಜಾರಕಿಹೊಳಿ ಪಕ್ಷದ ನೇತಾರರು. ಅವರನ್ನು ರಾಜಕೀಯವಾಗಿ ಯಾರೂ ಮುಗಿಸಲಾರರು. ಅಂತಹ ಆಲೋಚನೆ ಕೂಡ ಯಾರಿಗೂ ಇಲ್ಲ. ಈ ವಿಚಾರವಾಗಿ ಬಿಜೆಪಿಯ ಜನಾರ್ದನ ರೆಡ್ಡಿ ಮಾತನಾಡಿರುವುದು ರಾಜಕೀಯಪ್ರೇರಿತ ಎಂದು ಅವರು ಇನ್ನೊಂದು ಪ್ರಶ್ನೆಗೆ ಉತ್ತರಿಸಿದ್ದಾರೆ.

ಶ್ರೀರಾಮುಲು ಮತ್ತು ರೆಡ್ಡಿ ಅವರ ಸಂಬಂಧ ಈಗ ಹಳಸಿದೆ. ಶ್ರೀರಾಮುಲು ನಮ್ಮ ಪಕ್ಷಕ್ಕೆ ಬರುವ ಆಸಕ್ತಿ ವ್ಯಕ್ತಪಡಿಸಿದರೆ, ಅದರ ಬಗ್ಗೆ ಹೈಕಮಾಂಡ್ ತೀರ್ಮಾನಿಸುತ್ತದೆ. ಆದರೆ ರೆಡ್ಡಿ ವಿರುದ್ಧ ನಾವೆಲ್ಲರೂ ಹೋರಾಡಿದ್ದೇವೆ. ಹೀಗಾಗಿಯೇ ಹಿಂದೆ ಅವರು ನಮ್ಮ ಪಕ್ಷಕ್ಕೆ ಸೇರಲು ಬಂದರೂ ನಾವು ಅದನ್ನು ಒಪ್ಪಲಿಲ್ಲ ಎಂದು ಪಾಟೀಲ ಹೇಳಿದ್ದಾರೆ.

# ಶ್ರೀರಾಮುಲು ಕಾಂಗ್ರೆಸ್ ಸೇರ್ಪಡೆ ಬಗ್ಗೆ ಮಾಹಿತಿ ಇಲ್ಲ: ಜಾರಕಿಹೊಳಿ

**ಬೆಳಗಾವಿ:** ಶ್ರೀರಾಮುಲು ಕಾಂಗ್ರೆಸ್ ಸೇರ್ಪಡೆ ವಿಚಾರದ ಬಗ್ಗೆ ಸ್ಪಷ್ಟವಾದ ಮಾಹಿತಿ ಇಲ್ಲ ಎಂದು ಲೋಕೋ ಪಯೋಗಿ ಇಲಾಖೆ ಸಚಿವ ಸತೀಶ ಜಾರಕಿಹೊಳಿ ಹೇಳಿದರು.

ಬೆಳಗಾವಿಯಲ್ಲಿ ಮಾಧ್ಯಮಗಳ ಜೊತೆಗೆ ಮಾತನಾಡಿದ ಅವರು, ಬೆಂಗಳೂರಿಗೆ ಹೋಗಿ ಸಂಪೂರ್ಣ ಮಾಹಿತಿ ಪಡೆಯುವೆ. ಪೂರ್ಣ ಪ್ರಮಾಣದಲ್ಲಿ ಏನು ಬೆಳವಣಿಗೆ ಆಗಿದೆ ಗೊತ್ತಿಲ್ಲ. ಟಿವಿಯಲ್ಲಿ ನೋಡಿದ್ದೇನಷ್ಟೇ. ಪೂರ್ಣ ಮಾಹಿತಿ ಪಡೆದು ಮಾತನಾಡುತ್ತೇನೆ ಎಂದರು.

ರಾಜ್ಯದಲ್ಲಿ ಫೈನಾನ್ಸ್ ಕಿರುಕುಳ ಆರೋಪಕ್ಕೆ ಇದೇ ವೇಳೆ ಪ್ರತಿಕ್ರಿಯಿಸಿದ ಸತೀಶ ಜಾರಕಿಹೊಳಿ ಅವರು, ಸುಮಾರು ಕಡೆ ಕಿರುಕುಳ ಕೊಡುವ ವರದಿಗಳು ಬರುತ್ತಿವೆ. ತೊಂದರೆ ಕೊಟ್ಟರೆ ದೂರು ದಾಖಲು ಮಾಡುವಂತೆ ತಿಳಿಸಿದ್ದೇವೆ. ಫೈನಾನ್ಸ್ ಕಿರುಕುಳದ ಬಗ್ಗೆ ಗೊಂದಲ ಇದೆ.

ಸಾಲ ಪಡೆಯೋದು, ಕಿರುಕುಳ ಕೋಡೊದು ಬೇರೆ ವಿಚಾರ. ಆದರೆ, ಸಬ್ಸಿಡಿ ಹೆಸರಿನಲ್ಲಿ ಸಾವಿರಾರು ಜನರಿಗೆ ಸಾಲ ಕೊಟ್ಟಿದ್ದಾರೆ. ಹಣ ತುಂಬುವ ವಿಚಾರದಲ್ಲಿ ಈಗ ಸಂಘರ್ಷ ಆರಂಭವಾಗಿದೆ. ಈಗಾಗಲೇ ಡಿಸಿ ನೇತೃತ್ವದಲ್ಲಿ ಒಂದು ಸಭೆ ನಡೆಸಿದ್ದೇನೆ.

ಎರಡು ತಿಂಗಳ ಸಮಯ ಕೇಳಿದ್ದೇವೆ, ಏನಾದರೂ ಅದಕ್ಕೆ ಪರಿಹಾರ ಹುಡುಕುತ್ತೇವೆ. ಒಂದು ತಿಂಗಳಲ್ಲಿ ಏನು ಸಾಧ್ಯವೋ ಅದಕ್ಕೆ ಪರಿಹಾರಕ್ಕೆ ಮಾಡುತ್ತೇವೆ. ಶಿರೂರಿನಲ್ಲಿ ಕೂಡ ಮಹಿಳೆ ಆತ್ಮಹತ್ಯೆ ಪ್ರಕರಣ ನಡೆದಿದೆ. ಸಂಬಂಧಪಟ್ಟವರಿಗೆ ಈ ಬಗ್ಗೆ ದೂರು ಕೊಡಲು ತಿಳಿಸಿರುವೆ ಎಂದರು.

ಮಧ್ಯವರ್ತಿಗಳ ಜೊತೆಗೆ ಫೈನಾನ್ಸ್‌ನವರು ಭಾಗಿಯಾಗಿದ್ದಾರೆ ಎಂಬ ಆರೋಪ ಕುರಿತು ಪೊಲೀಸ್ ತನಿಖೆಗೆ ಸೂಚನೆ ಕೊಟ್ಟಿದ್ದೇನೆ. ವರದಿ ಬಂದ ಮೇಲೆ ಕ್ರಮ ಕೈಗೊಳ್ಳುತ್ತೇವೆ ಎಂದು ಸ್ಪಷ್ಟಪಡಿಸಿದರು.

ತಾರಿಹಾಳದಲ್ಲಿ ಹಸುಗೂಸು ಸಮೇತ ಬಾಣಂತಿಯನ್ನು ಮನೆಯಿಂದ ಹೊರಹಾಕಿ ಮನೆ ಹರಾಜಿಗಿಟ್ಟ ಪ್ರಕರಣ ಕುರಿತು ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದ ಸತೀಶ ಜಾರಕಿಹೊಳಿ, ಕುಟುಂಬಸ್ಥರು ದೂರು ಕೊಟ್ಟರೆ ಫೈನಾನ್ಸ್‌ನವರ ಮೇಲೆ ಕ್ರಮ ಕೈಗೊಳ್ಳುತ್ತೇವೆ ಎಂದು ಸತೀಶ ಜಾರಕಿಹೊಳಿ ಹೇಳಿದರು.

## ಮೋದಿ–ಕೇಜ್ರಿ ಒಂದೇ ನಾಣ್ಯದ ಎರಡು ಮುಖ

**ನವದೆಹಲಿ:** ಎಎಪಿ ಮುಖ್ಯಸ್ಥ ಅರವಿಂದ್ ಕೇಜ್ರಿವಾಲ್ ಮತ್ತು ಪ್ರಧಾನಿ ನರೇಂದ್ರ ಮೋದಿ ನಡುವೆ ಹೆಚ್ಚಿನ ವ್ಯತ್ಯಾಸವಿಲ್ಲ ಮತ್ತು ಅವರನ್ನು ಒಂದೇ ಬಟ್ಟೆಯಿಂದ ಕತ್ತರಿಸಲಾಗಿದೆ ಎಂದು ಎಐಎಂಐಎಂ ಅಧ್ಯಕ್ಷ ಅಸಾದುದ್ದೀನ್ ಓವೈಸಿ ಹೇಳಿದ್ದಾರೆ.



ಮೋದಿ ಮತ್ತು ಕೇಜ್ರಿವಾಲ್ ಸಹೋದರರರಂತೆ, ಒಂದೇ ನಾಣ್ಯದ ಎರಡು ಮುಖಗಳು. ಇಬ್ಬರೂ ಆರ್‌ಎಸ್‌ಎಸ್ ಸಿದ್ಧಾಂತದಿಂದ ಹೊರಹೊಮಿದ್ದಾರೆ. ಒಂದು ಅದರ ಶಾಖದಿಂದ ಮತ್ತು ಇನ್ನೊಂದು ಅದರ ಸಂಸ್ಥೆಗಳಿಂದ ಎಂದು ಅವರು ಓಖ್ಲಾ ಕ್ಷೇತ್ರದಿಂದ ಪಕ್ಷದ ಅಭ್ಯರ್ಥಿ ಶಿಫಾ–ಉರ್–ರೆಹಮಾನ್ ಪರ ಪ್ರಚಾರ ಮಾಡುವಾಗ ಹೇಳಿದರು. . ಓವೈಸಿ ಅವರು ಶಾಹೀನ್ ಬಾಗ್‌ನಲ್ಲಿ ಪಾದಯಾತ್ರೆ ನಡೆಸಿದರು ಮತ್ತು ಫೆಬ್ರವರಿ 5 ರಂದು ದೆಹಲಿ ಚುನಾವಣೆಯಲ್ಲಿ ತಮ ಪಕ್ಷದ ಚಿಹ್ನೆಯಾದ ಗಾಳಿಪಟ ಕ್ಕೆ ಮತ ನೀಡುವಂತೆ ಸಾರ್ವಜನಿಕರನ್ನು ಒತ್ತಾಯಿಸಿದರು.



ಮಹಾಕುಂಭ ಮೇಳದಲ್ಲಿ ಪಾಲ್ಗೊಂಡ ವಿಧಾನಸಭಾಧ್ಯಕ್ಷ ಯು.ಟಿ.ಖಾದರ್



ಮಹಾಲಕ್ಷ್ಮಿ ಲೇಔಟ್ ವಿಧಾನಸಭಾ ಕ್ಷೇತ್ರದ ವಿವಿಧ ಕಾಮಗಾರಿಗಳಿಗೆ ಸ್ಥಳೀಯ ಶಾಸಕರಾದ ಕೆ ಗೋಪಾಲಯ್ಯನವರು ಗುದ್ದಲಿ ಪೂಜೆ ನೆರವೇರಿಸಿದರು. ಈ ಸಂದರ್ಭದಲ್ಲಿ ಉತ್ತರ ಜಿಲ್ಲಾ ಘಟಕದ ಬಿಜೆಪಿ ಉಪಾಧ್ಯಕ್ಷ ಜಯರಾಮಯ್ಯ ಮುಖಂಡರುಗಳಾದ ಬಿ ಡಿ ಶ್ರೀನಿವಾಸ್, ನಿಸರ್ಗ ಜಗದೀಶ್, ಗೋವಿಂದರಾಜು, ರಾಘವೇಂದ್ರ, ನರಸಿಂಹ ಸೇರಿದಂತೆ ಸ್ಥಳೀಯ ಮುಖಂಡರುಗಳು ಪಾಲ್ಗೊಂಡಿದ್ದರು.



ಫ್ರಾನ್ಸ್ ಕೌನ್ಸಲ್ ಜನರಲ್ ಮಾರ್ಕ್ ಲಾಮಿ ಅವರು ಡಿಸಿಎಂ ಡಿ ಕೆ ಶಿವಕುಮಾರ್ ಅವರನ್ನು ಸದಾಶಿವನಗರ ನಿವಾಸದಲ್ಲಿ ಶುಕ್ರವಾರ ಭೇಟಿ ಮಾಡಿ ಸಮಾಲೋಚನೆ ನಡೆಸಿದರು. ಖ್ಯಾತ ನಟಿ ಅರುಂಧತಿ ನಾಗ್ ಅವರು ಡಿಸಿಎಂ ಅವರನ್ನು ಶುಕ್ರವಾರ ಭೇಟಿ ಮಾಡಿದ್ದರು.

ಮೊದಲ ಪುಟದಿಂದ

## ಸುಗ್ರೀವಾಜ್ಞೆ ಅಸ್ತ್ರ!

ವಿಧೇಯಕ ಮಂಡಿಸಲಾಗುವುದು. ಈ ಸಂಬಂಧ ಅಗತ್ಯಬಿದ್ದರೆ ಸುಗ್ರೀವಾಜ್ಞೆ ಹೊರಡಿಸಿ ಕಠಿಣ ಕ್ರಮ ಜರುಗಿಸಲಾಗುವುದು ಎಂಬ ಮಾತುಗಳನ್ನಾಡಿದರು.

ಬಡವರ, ಮಧ್ಯಮ ವರ್ಗದವರ ಶೋಷಣೆ ತಡೆಗಟ್ಟುವುದು ಹಾಗೂ ಅವರನ್ನು ಸಂರಕ್ಷಿಸುವುದು ನಮ್ಮ ಸರ್ಕಾರದ ಕರ್ತವ್ಯ'. ಜೊತೆಗೆ, 'ಈಗ ಮೈಕ್ರೋ ಫೈನಾನ್ಸ್ ಬಗ್ಗೆ ಆರ್‌ಬಿಐ ವ್ಯಾಪ್ತಿಯಲ್ಲಿ ದೂರು ನೀಡಲು ಇರುವ ಸಂಸ್ಥೆಗಳನ್ನು ಗುರುತಿಸಬೇಕಿದೆ. ಮೀಟರ್ ಬಡ್ಡಿ, ಆರ್ಥಿಕವಾಗಿ ಜನರ ಶೋಷಣೆ ಮಾಡಿದರೆ ಸರ್ಕಾರ ಸಹಿಸುವುದಿಲ್ಲ. ಅನ್ಯಾಯವಾಗಿ ಬಡ್ಡಿ ಹಾಕಿದ್ದಲ್ಲಿ ಯಾವುದೇ ಕಾರಣಕ್ಕೂ ಸುಮ್ಮನೆ ಕುಳಿತುಕೊಳ್ಳದೇ ದೂರು ನೀಡಿ ಎಂದು ಸಾರ್ವಜನಿಕರಿಗೆ ಕರೆಕೊಟ್ಟಿದ್ದಾರೆ.

ಈ ಸಂಬಂಧದ ದೂರುಗಳನ್ನು ಯಾವುದಾದರೂ ಪೊಲೀಸ್ ಠಾಣೆಗಳಲ್ಲಿ ತೆಗೆದುಕೊಳ್ಳಲು ನಿರಾಕರಿಸಿದರೆ ಅಂತಹವರ ವಿರುದ್ಧವೂ ಸರ್ಕಾರ ಮುಲಾಜಿಲ್ಲದೇ ಕ್ರಮ ಕೈಗೊಳ್ಳುತ್ತದೆ ಎಂಬ ಎಚ್ಚರಿಕೆಯನ್ನು ಕೂಡಾ ಇದೇ ವೇಳೆ ಸಚಿವರು ನೀಡಿದರು.

## ಸಭೆ ನಡೆಸಿ ಸೂಕ್ತ ನಿರ್ಧಾರ:

"ಸಾಲ ವಾಪಸ್ ಕಟ್ಟದೆ ಹೋದರೆ ಹೀಗೆ ಆಗುತ್ತದೆ. ಬ್ಯಾಂಕ್ ಸಾಲ ಪಡೆದಾಗ ಹತ್ತಾರು ಕಡೆ ಸಹಿ ಹಾಕಲಾಗುತ್ತದೆ. ಯಾಕೆ ಸಹಿ ಮಾಡುತ್ತೇವೆ ಅಂತ ಗ್ರಾಹಕರಿಗೆ ಗೊತ್ತಾಗಲ್ಲ. ಅದು ಕಮಿಟ್ಮೆಂಟ್ ಆಗಿರುತ್ತದೆ. ಅದರ ಮೇಲೆ ಮನೆ ರೇಡ್, ಸೀಜ್ ಮಾಡುತ್ತಾರೆ. ಕಾನೂನಿನಲ್ಲಿ ಪರಿಹಾರ ಕಂಡು ಹಿಡಿಯಬೇಕು. ಸಿಎಂ ಸಹ ಹೇಳಿಕೆ ಕೊಟ್ಟಿದ್ದಾರೆ. ಒಂದು ಸಭೆ ಕರೆಯುತ್ತೇವೆ ಅಂದಿದ್ದಾರೆ. ಎಷ್ಟು ಕೇಸ್ ಇದೆ ನೋಡುತ್ತೇವೆ" ಎಂದರು.

## ಮಹಿಳೆಯ ಹತ್ಯೆ

ಇತ್ತೀಚೆಗಷ್ಟೇ ಬಸ್‌ಗಾಗಿ ಕಾಯುತ್ತಿದ್ದ ಮಹಿಳೆಯ ಮೇಲೆ ಇಬ್ಬರು ದುಷ್ಕರ್ಮಿಗಳು ಅತ್ಯಾಚಾರ ಎಸಗಿ ಮೊಬೈಲ್, ನಗದು ಹಾಗೂ ಚಿನ್ನಾಭರಣ ದೋಚಿರುವ ಆರೋಪ ಕೇಳಿ ಬಂದಿತ್ತು. ಜನವರಿ 19ರಂದು ರಾತ್ರಿ 11:30ರ ಸುಮಾರಿಗೆ ಕೆ.ಆರ್.ಮಾರ್ಕೆಟ್ ಬಳಿಯ ಗೋಡೌನ್ ಸ್ಟ್ರೀಟ್‌ನಲ್ಲಿ ಘಟನೆ ನಡೆದಿದೆ ಎಂದು ಆರೋಪಿಸಿ 37 ವರ್ಷದ ಮಹಿಳೆಯೊಬ್ಬರು ಕೇಂದ್ರ ವಿಭಾಗದ ಮಹಿಳಾ ಪೊಲೀಸ್ ಠಾಣೆಗೆ ದೂರು ನೀಡಿದ್ದರು.

## ದೂರು ನೀಡಿಲ್ಲ

"ಕಾಂಗ್ರೆಸ್ ಸರ್ಕಾರದ ಮುಡಾ ಹಗರಣ ಹಾಗೂ ವಾಲ್ಮೀಕಿ ಅಭಿವೃದ್ಧಿ ನಿಗಮದ ವಿರುದ್ಧ ಬಿಜೆಪಿ ತೀವ್ರ ಹೋರಾಟ ಮಾಡಿದೆ. ಮುಡಾ ಹಗರಣದಲ್ಲಿ 4 ರಿಂದ 5 ಸಾವಿರ ಕೋಟಿ ರೂ. ಅಕ್ರಮ ನಡೆದಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ 14 ಸೈಟು ವಾಪಸ್ ನೀಡಿರುವುದರಿಂದ ತಪ್ಪಾಗಿದೆ ಎಂಬುದು ಸಾಬೀತಾಗಿದೆ ಎಂದಿದ್ದಾರೆ.

ಜಾರಿ ನಿರ್ದೇಶನಾಲಯ ಆಸ್ತಿಗಳನ್ನು ವಶಕ್ಕೆ ಪಡೆದಿದ್ದರೂ, ಲೋಕಾಯುಕ್ತ ಪೊಲೀಸರು ಯಾವುದೇ ಕ್ರಮ ಕೈಗೊಳ್ಳದೇ ಪ್ರಕರಣ ಮುಚ್ಚಿಹಾಕುವ ಪ್ರಯತ್ನ ಮಾಡುತ್ತಿದ್ದಾರೆ ಎಂದು ದೂರಿದರಿ "ಹೀಗಾಗಿ ಈ ಪ್ರಕರಣವನ್ನು ಸಿಬಿಐಗೆ ವಹಿಸಬೇಕೆಂದು ಆಗ್ರಹಿಸಲಾಗಿದೆ. ಇದರಲ್ಲಿ ಅಧಿಕಾರಿಗಳ ತಪ್ಪು ಎನ್ನಲಾಗುತ್ತಿದೆ. ಆದರೆ, ಇದರ ಹಿಂದೆ ಸಿಎಂ ಸಿದ್ದರಾಮಯ್ಯ ಇರುವುದನ್ನು ಮುಚ್ಚಿಹಾಕಲಾಗುತ್ತಿದೆ. ಇದರ ವಿರುದ್ಧ ಬಿಜೆಪಿ ಹೋರಾಟ ಮುಂದುವರಿಸಲಿದೆ" ಎಂದು ಹೇಳಿದರು.ಕ್ಲೀನ್ ಚಿಟ್ ಸಿಗುವುದು ಖಚಿತ,ಮೂಡಾ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕ್ಲೀನ್ ಚಿಟ್ ಸಿಗುವದು ಖಚಿತ. ಈ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಬೇಕು ಎಂದು ಒತ್ತಾಯಿಸಿದ್ದಾರೆ.

"ಲೋಕಾಯುಕ್ತ ಪೊಲೀಸರು ರಾಜ್ಯ ಸರ್ಕಾರದ ಅಡಿ ಕೆಲಸ ಮಾಡುತ್ತಾರೆ. ಪೊಲೀಸರಿಗೂ ವರ್ಗಾವಣೆ, ಬಡ್ತಿ ಬೇಕಿರುತ್ತದೆ. ಆದ್ದರಿಂದ ಈ ರೀತಿ ತನಿಖೆ ನಡೆಯುತ್ತಿದೆ. ಪೊಲೀಸರು ವರದಿ ನೀಡಿದರೂ ಅದರಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕ್ಲೀನ್ ಚಿಟ್ ನೀಡುವುದು ಖಚಿತ" ಎಂದು ಹೇಳಿದರು.

"ಈ ಪ್ರಕರಣವನ್ನು ಸಿಬಿಐಗೆ ವಹಿಸಿದರೆ ಮಾತ್ರ ನಿಜಾಂಶ ಹೊರಬರಲಿದೆ. ಮಾಜಿ ಸಚಿವ ಬಿ.ನಾಗೇಂದ್ರ ಅವರಿಗೆ ಎಸ್ಐಟಿ ಕ್ಲೀನ್ ಚಿಟ್ ನೀಡಿರುವಾಗ ಮುಖ್ಯಮಂತ್ರಿಗೆ ಕ್ಲೀನ್ ಚಿಟ್ ನೀಡುವುದು ಖಚಿತ. ಆದ್ದರಿಂದ ಹೋರಾಟವನ್ನು ಮತ್ತೆ ಆರಂಭಿಸುತ್ತೇವೆ. ತನಿಖೆಯನ್ನು ಸಿಬಿಐಗೆ ವಹಿಸುವವರೆಗೂ ಹೋರಾಟ ಮಾಡುತ್ತೇವೆ" ಎಂದು ತಿಳಿಸಿದ್ದಾರೆ.

## ಆರೋಪಿಗಳಿಗೆ ನೋಟಿಸ್

ಸುಪ್ರೀಂ ಕೋರ್ಟ್‌ನಲ್ಲಿ ಪ್ರಶ್ನೆ ಮಾಡಿದ್ದರು. ಇದರ ವಿಚಾರಣೆ ವೇಳೆ ಸರ್ಕಾರಿ ಪರ ವಕೀಲರು ತಮ್ಮ ವಾದ ಮಂಡಿಸಿದ್ದಾರೆ. 'ಆರೋಪಿಗಳು ಅಮಾನವೀಯವಾಗಿ ನಡೆದುಕೊಂಡಿದ್ದಾರೆ. ಹೀಗಾಗಿ, ಹೈಕೋರ್ಟ್ ನೀಡಿರುವ ಜಾಮೀನು ರದ್ದುಗೊಳಿಸಿ' ಎಂದು ಮನವಿ ಮಾಡಿದ್ದಾರೆ.

7 ಆರೋಪಿಗಳಿಗೆ ಸುಪ್ರೀಂಕೋರ್ಟ್ ನೋಟಿಸ್ ಜಾರಿ ಮಾಡಿದೆ. 'ಉಳಿದ ಆರೋಪಿಗಳು ಜಾಮೀನಿಗೆ ಅರ್ಜಿ ಸಲ್ಲಿಸಿದ್ದರೆ ಇದು ಅನ್ವಯಿಸುವುದಿಲ್ಲ. ಹೈಕೋರ್ಟ್ ಫೈಂಡಿಂಗ್ಸ್ ಅನ್ವಯ ಆಗುವುದಿಲ್ಲ' ಎಂದು ಸುಪ್ರೀಕೋರ್ಟ್ ಅಭಿಪ್ರಾಯಪಟ್ಟಿದೆ. ಸದ್ಯ ವಿಚಾರಣೆಯನ್ನು ಕೋರ್ಟ್ ಮುಂದಕ್ಕೆ ಹಾಕಿದೆ. ದರ್ಶನ್ ಅವರು ಸೆಲೆಬ್ರಿಟಿ ಆಗಿದ್ದು, ದೊಡ್ಡ ಅಭಿಮಾನಿ ಬಳಗ ಹೊಂದಿದ್ದಾರೆ. ಅವರು ಪ್ರಭಾವ ಬಳಸಿ ಸಾಕ್ಷಿಗಳನ್ನು ತಿರುಚುವ ಸಾಧ್ಯತೆ ಇದೆ ಎಂದು ಪೊಲೀಸರು ಆತಂಕ ಹೊರಹಾಕಿದ್ದಾರೆ. ಇದಲ್ಲದೆ, ಹೈಕೋರ್ಟ್ ಪರಿಗಣಿಸದ ಹಲವು ಅಂಶಗಳನ್ನು ಇದರಲ್ಲಿ ಹೇಳಲಾಗಿದೆ. ದರ್ಶನ್ ಅವರು ಸದ್ಯ ಜಾಮೀನು ಪಡೆದು ಹೊರಕ್ಕೆ ಬಂದಿದ್ದಾರೆ. ದರ್ಶನ್ ಅವರು ಶೀಘ್ರವೇ 'ಡೆವಿಲ್' ಸಿನಿಮಾ ಕೆಲಸಗಳಲ್ಲಿ ತೊಡಗಿಕೊಳ್ಳಲಿದ್ದಾರೆ. ಒಂದೊಮ್ಮೆ ಅವರ ಜಾಮೀನು ರದ್ದಾದರೆ ಅವರು ಮತ್ತೆ ಜೈಲು ಸೇರಬೇಕಾಗುತ್ತದೆ.

## ಚೆಕ್ ಬೌನ್ಸ್: ಜೈಲು ಶಿಕ್ಷೆ

ತೀರ್ಪು ನೀಡಿದಾಗ ಹಾಜರಿರಲಿಲ್ಲದ ವರ್ಮಾ ಅವರನ್ನು ನ್ಯಾಯಾಲಯಕ್ಕೆ ಹಾಜರಾಗಲು ವಿಫಲವಾದ ಕಾರಣ ಅವರಿಗೆ ಜಾಮೀನು ರಹಿತ ಬಂಧನ ವಾರಂಟ್ ಸಹ ಹೊರಡಿಸಲಾಗಿದೆ. ನ್ಯಾಯಾಲಯದ ನಿರ್ಧಾರವು ಕ್ರಿಮಿನಲ್ ಪ್ರಕ್ರಿಯಾ ಸಂಹಿತೆ (ಅಡಿಕಅ) ಅಡಿಯಲ್ಲಿ ಶಿಕ್ಷೆಯನ್ನು ಜಾರಿಗೊಳಿಸಲು ಅವರನ್ನು ಬಂಧಿಸುವಂತೆ ಆದೇಶಿಸುತ್ತದೆ. ಚೆಕ್ ಬೌನ್ಸ್ ಪ್ರಕರಣವು 2018 ರಲ್ಲಿ ವರ್ಮಾ ಅವರ ಸಂಸ್ಥೆಯ ವಿರುದ್ಧ ಕಂಪನಿಯೊಂದು ಚೆಕ್ ಬೌನ್ಸ್ ದೂರು ದಾಖಲಿಸಿದಾಗಿನಿಂದ ಆರಂಭವಾಗಿದ್ದು, ಏಪ್ರಿಲ್ 2022 ರಲ್ಲಿ ನ್ಯಾಯಾಲಯವು ವರ್ಮಾ ಅವರಿಗೆ 5,000 ರೂ. ನಗದು ಭದ್ರತೆಯೊಂದಿಗೆ ಜಾಮೀನು ನೀಡಿತ್ತು.

ಇತ್ತೀಚಿನ ಬೆಳವಣಿಗೆಯು ವಿವಾದಾತ್ಮಕ ಚಲನಚಿತ್ರಗಳು ಮತ್ತು ನೇರ ನುಡಿಯ ಸ್ವಭಾವಕ್ಕೆ ಹೆಸರುವಾಸಿಯಾದ ಚಲನಚಿತ್ರ ನಿರ್ಮಾಪಕಗೆ ಕಾನೂನು ಹಿನ್ನಡೆಯಾದಂತಾಗಿದೆ.

## ಬಿಗಿ ಪೊಲೀಸ್ ಬಂದೋಬಸ್ತ್

ಸಿಸಿಟಿವಿ ಕ್ಯಾಮೆರಾ ಗಳನ್ನು ಅಳವಡಿಕೆ ಮಾಡಲಾಗಿದೆ ಎಂದು ಬಿ.ದಯಾನಂದ್ ಮಾಹಿತಿ ನೀಡಿದರು.

ಕಲರ್ ಕೋಡ್ ಮೂಲಕ ಪಾಸ್ ವಿತರಿಸಿ ಪ್ರವೇಶಕ್ಕೆ ಅವಕಾಶ ಕಲ್ಪಿಸಲಾಗಿದೆ. ಕಾರ್ಯಕ್ರಮಕ್ಕೆ ಆಗಮಿಸುವ ವರಿಗೆ ಪಿಂಕ್ ಬಣ್ಣದ ಪಾಸ್ ವಿತರಣೆ ಮಾಡಲಾಗುತ್ತದೆ. ಕಾರ್ಯಕ್ರಮಕ್ಕೆ ಬರುವ ಸಾರ್ವಜನಿಕರಿಗೆ ವಿಐಪಿ ಗೇಟ್ 2ರಲ್ಲಿ ಪ್ರವೇಶಕ್ಕೆ ಅವಕಾಶ ಕಲ್ಪಿಸಲಾಗಿದೆ. ಪಿಂಕ್ ಬಣ್ಣದ ಸೇರುವವರಿಗೆ ವಿಐಪಿ ಗೇಟ್ 2ರಲ್ಲಿ ಪ್ರವೇಶ ಕಲ್ಪಿಸಲಾಗುತ್ತದೆ. ಮುಖ್ಯ ಅತಿಥಿ ಗಣ್ಯರಿಗೆ ಗೇಟ್ 3ರಲ್ಲಿ ಪ್ರವೇಶಕ್ಕೆ ಅವಕಾಶ ಮಾಡಿಕೊಡಲಾಗುತ್ತದೆ. ವೈಟ್ ಪಾಸ್ ಮಾಧ್ಯಮ ಪ್ರತಿನಿಧಿಗಳಿಗೆ ಗೇಟ್ 4ರಲ್ಲಿ ಪ್ರವೇಶ ಕಲ್ಪಿಸಲಾಗಿದೆ ದಯಾನಂದ್ ತಿಳಿಸಿದರು.

## ಪಲ್ಟಿ: ಮೂವರು ಸಾವು

ಕಾರ್ಯ ನಿಮಿತ್ತ ಕಾರಿನಲ್ಲಿ ಐವರು ಸೊಲ್ಲಾಪುರಕ್ಕೆ ಹೋಗಿದ್ದು, ವಾಪಸ್ ಬರುವಾಗ ಈ ದುರ್ಘಟನೆ ಸಂಭವಿಸಿದೆ. ಸುದ್ದಿ ತಿಳಿದು ಸ್ಥಳಕ್ಕೆ ವಿಜಯಪುರ ಗ್ರಾಮೀಣ ಠಾಣೆ ಪೊಲೀಸರು ಭೇಟಿ ಪರಿಶೀಲನೆ ನಡೆಸಿದರು. ಸದ್ಯ ಮೂವರ ಮೃತದೇಹಗಳನ್ನು ವಿಜಯಪುರ ಜಿಲ್ಲಾಸ್ಪತ್ರೆಗೆ ರವಾನೆ ಮಾಡಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ವಿಜಯಪುರ ಗ್ರಾಮೀಣ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ.

# ಎಸ್ಎಸ್ಎಲ್ಸಿ ವಿದ್ಯಾರ್ಥಿಗಳಿಗೆ ಕಲಿಕಾ ಕಾರ್ಯಾಗಾರ



**ಕುಕನೂರು:** ಸ್ಫೂರ್ತಿದಾಯಕ, ಪ್ರೇರಣಾತ್ಮಕ ವಾತಾವರಣ ನಿರ್ಮಿಸಿ ಶಿಕ್ಷಣದ ಗುಣಮಟ್ಟ ಮತ್ತು ಫಲಿತಾಂಶ ಹೆಚ್ಚಿಸುವ ನಿಟ್ಟಿನಲ್ಲಿ ಶಿಕ್ಷಣ ಇಲಾಖೆಯಿಂದ ಇಂದು ಪಟ್ಟಣದ ನವೋದಯ ಶಾಲೆಯಲ್ಲಿ ಎಸ್ ಎಸ್ ಎಲ್ ಸಿ ವಿದ್ಯಾರ್ಥಿಗಳಿಗೆ ವಿಶೇಷ ಕಾರ್ಯಾಗಾರ ಹಮ್ಮಿಕೊಳ್ಳಲಾಗಿತ್ತು.

ಯೂನಿವರ್ಸಲ್ ನಾಲೆಜ್ ಟ್ರಸ್ಟ್ ಮತ್ತು ಗ್ರಾಮ ವಿಕಾಸ ಸೊಸೈಟಿ ಹಾಗೂ ಶಿಕ್ಷಣ ಇಲಾಖೆಯ ಸಹಯೋಗದಲ್ಲಿ ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ಎಸ್ ಎಸ್ ಎಲ್ ಸಿ ಓದುತ್ತಿರುವ ವಿದ್ಯಾರ್ಥಿಗಳಿಗೆ ಸಾಕಾರಾತ್ಮಕ ಮನೋಭಾವದೊಂದಿಗೆ ಸುಲಭ ಕಲಿಕೆ ಎಂಬ ಹೆಸರಲ್ಲಿ ವಿಶೇಷ ಕಾರ್ಯಾಗಾರವನ್ನು ಪರಿಣಿತ ಶಿಕ್ಷಕ ವೃಂದ ನಡೆಸಿಕೊಟ್ಟಿತು. ಕಳೆದ ಶೈಕ್ಷಣಿಕ ವರ್ಷದಲ್ಲಿ ಎಸ್ ಎಸ್ ಎಲ್ ಸಿ ಫಲಿತಾಂಶ ಗಣನೀಯ ಪ್ರಮಾಣದಲ್ಲಿ ಇಳಿಕೆ ಕಂಡ ಹಿನ್ನೆಲೆ ತಾಲೂಕಿನಲ್ಲಿ ಫಲಿತಾಂಶ ಮತ್ತು ಶಿಕ್ಷಣದ ಗುಣಮಟ್ಟ ಹೆಚ್ಚಿಸುವ ನಿಟ್ಟಿನಲ್ಲಿ ಶಿಕ್ಷಣ ಇಲಾಖೆ ಮುಂದಾಗಿದ್ದು ಅದರಲ್ಲೂ ವಿಶೇಷವಾಗಿ ಕ್ಷೇತ್ರ ಶಿಕ್ಷಣಾಧಿಕಾರಿಗಳಾಗಿರುವ ಸೋಮಶೇಖರ್ ಪಾಟೀಲ್ ಅವರು ಹೆಚ್ಚಿನ ಮುತುವರ್ಜಿ ವಹಿಸಿದ್ದು ಅದರಂತೆ ತಾಲೂಕಿನ 22 ಶಾಲೆಯ ಎಸ್ಎಸ್ಎಲ್ಸಿ ಓದುತ್ತಿರುವ ವಿದ್ಯಾರ್ಥಿಗಳಿಗೆ ವಿಶೇಷ ಕಾರ್ಯಾಗಾರ ನಡೆಸಲಾಯಿತು.

ಕಾರ್ಯಾಗಾರದಲ್ಲಿ 969 ವಿದ್ಯಾರ್ಥಿಗಳು 75 ಶಿಕ್ಷಕ ವೃಂದ ಭಾಗವಹಿಸದ್ದರು. ಕಾರ್ಯಾಗಾರವನ್ನು ಉದ್ಘಾಟನೆ ಮಾಡಿ ನವೋದಯ ವಿದ್ಯಾಲಯದ ಪ್ರಚಾರ್ಯೆ ಜಯಾ ಅವರು ಮಾತನಾಡಿ, ರಾಜ್ಯ ಪಠ್ಯಕ್ರಮದ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಗುಣಮಟ್ಟ ಎತ್ತರಿಸುವ ಅವಶ್ಯಕತೆ ಕಂಡು ಬಂದ ಹಿನ್ನೆಲೆ ಶಿಕ್ಷಣ ಇಲಾಖೆ ವಿಶೇಷ ಆಸಕ್ತಿ ವಹಿಸಿ ಕಾರ್ಯಾಗಾರ ಮಾಡುತ್ತಿದ್ದು ವಿದ್ಯಾರ್ಥಿಗಳು ಪ್ರಯೋಜನ ಪಡೆದುಕೊಂಡು ಉತ್ತಮ ಫಲಿತಾಂಶದೊಂದಿಗೆ ಉಜ್ವಲ ಭವಿಷ್ಯ ರೂಪಿಸಿಕೊಳ್ಳುವ ಅಗತ್ಯವಿದೆ ಎಂದು ಹೇಳಿದರು. ಗ್ರಾಮ ವಿಕಾಸ ಸೊಸೈಟಿಯ ಕಾರ್ಯದರ್ಶಿ ತರಬೇತುದಾರ ಸುಬ್ರಮಣ್ಯ, ಸಂಯೋಜ ಮಾಧವ ಬಂಡಾರಿ ಅವರಿಂದ ಸಾಕಾರಾತ್ಮಕ ಮನೋಭಾವದ ಸುಲಭ ಕಲಿಕೆಯ ಪಠ್ಯಕ್ರಮದ ವಿವಿಧ ಪ್ರಕಾರಗಳ ಅಭ್ಯಾಸಗಳನ್ನು ವಿದ್ಯಾರ್ಥಿಗಳಿಗೆ ಹೇಳಿಕೊಡಲಾಯಿತು.

ಈ ಸಂದರ್ಭದಲ್ಲಿ ಶಿಕ್ಷಕ ವೃಂದದ ವಿ.ಎಸ್ ಬೇಣಕಲ್, ಸೋಮಶೇಖರ್ ಹರ್ತಿ, ಸುರೇಶ್ ಅಬ್ಬಿಗೇರಿ, ಮುತ್ತಣ್ಣ ಎಚ್, ಮಂಜುನಾಥ್ ಹಳ್ಳಿ, ಬಿಆರ್‌ಪಿ ಬಸವರಾಜ್ ಅಂಗಡಿ, ಸಿಆರ್‌ಪಿ ಗಳಾದ ಪೀರ್ ಸಾಬ್ ದಫೆದಾರ್, ಮಂಜುನಾಥಯ್ಯ ತೆಗ್ಗಿನಮಠ. ಇತರರು ಉಪಸ್ಥಿತರಿದ್ದರು.

# ಶ್ರೀಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ನಿಲಯಕ್ಕೆ ಅನು ಭೇಟಿ



**ಶಿಡ್ಲಘಟ್ಟ:** ಸರ್ಕಾರಿ ಶಾಲೆಗಳನ್ನು ಉಳಿಸಲು ಮತ್ತು ಅಭಿದ್ಧಿಪಡಿಸಲು ಅವಿರಹಿತ ಸೇವೆ ಮಾಡುತ್ತಿರುವ ಅಕ್ಕ ಅನು, ತಮ್ಮ ತಂಡದೊಂದಿಗೆ ಇಲ್ಲಿನ ಶಾಲೆಗೆ ಸುಣ್ಣ ಬಣ್ಣ ಬಳಿಯಲು ಶಾಸಕರಾದ ಬಿ.ಎನ್.ರವಿಕುಮಾರ್ ಅವರ ಅನುಮತಿ ಮೇರೆಗೆ ಸಜ್ಜಾಗಿದ್ದಾರೆ.

ಬಣ್ಣ ನೋಡದ ಸರ್ಕಾರಿ ಶಾಲೆಗಳಿಗೆ ಸುಣ್ಣ-ಬಣ್ಣ ಬಳಿಯುವ ಕೆಲಸಗಳ ಮೂಲಕ ತಮ್ಮ ತಂಡದೊಂದಿಗೆ ನಿಸ್ವಾರ್ಥ ಸೇವೆ ಸಲ್ಲಿಸುತ್ತಿರುವ ಅನು ಅಕ್ಕ ಎಂದೇ ಹೆಸರುವಾಸಿಯಾಗಿರುವ ಅನು ಎಂಬುವವರು ಸದ್ಯ ಸೋಷಿಯಲ್ ಮೀಡಿಯಾದಲ್ಲಿ ಎಲ್ಲರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ ಇವರ ತಂಡ ದಿಬ್ಬೂರಹಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಬಚ್ಚನಹಳ್ಳಿ ಗ್ರಾಮದ ಶ್ರೀಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ನಿಲಯಕ್ಕೆ ಸಾಮಾಜಿಕ ಹೋರಾಟಗಾರ್ತಿ ಕನ್ನಡತಿ ಅಕ್ಕ ಅನು ಭೇಟಿ ನೀಡಿದ್ದಾರೆ.

ಶಾಸಕರಾದ ಬಿ.ಎನ್.ರವಿಕುಮಾರ್ ಅವರು ಭೇಟಿ ನೀಡಿ ಮಾತನಾಡಿ, ಕನ್ನಡತಿ ಅನು ಅಕ್ಕ ಅವರು ರಾಜ್ಯದಾದ್ಯಂತ ಸರ್ಕಾರಿ ಶಾಲೆಗಳನ್ನು ಉಳಿಸುವ ನಿಟ್ಟಿನಲ್ಲಿ, ಹಾಗೂ ಖಾಸಗಿ ಶಾಲೆಗಳಿಗೆ ಪ್ರಾಮಾಣಿಕ ಸೆಡ್ಡು ಹೊಡೆಯುವಂತೆ ಸರ್ಕಾರಿ ಶಾಲೆಗಳನ್ನ ಅಭಿವೃದ್ಧಿ ಮಾಡುತ್ತಿರುವುದು ಸಂತಸ ತಂದಿದೆ. ಅದೇ ರೀತಿ ನಮ್ಮ ತಾಲ್ಲೂಕಿನ ದಿಬ್ಬೂರಹಳ್ಳಿ ಗ್ರಾಮ ಪಂಚಾಯತಿಯ ಬಚ್ಚನಹಳ್ಳಿ ಗ್ರಾಮದ ವಸತಿ ಶಾಲೆಗೆ ಅಗತ್ಯವಿರುವ ಪೇಯಿಂಟಿಂಗ್ ಸೇವೆಗೆ ತಕ್ಷಣ ನೆರವು ನೀಡುವುದಾಗಿ ಭರವಸೆ ನೀಡಿದರು. ಶ್ರೀಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ನಿಲಯಕ್ಕೆ ಭೇಟಿ ನೀಡಿ, ಕನ್ನಡತಿ ಅನು ಅಕ್ಕ ಅವರ ಸಮಾಜ ಸೇವೆಯನ್ನು ಮೆಚ್ಚುಗೆ ವ್ಯಕ್ತಪಡಿಸಿದ್ದರು.

ತಹಶೀಲ್ದಾರ್ ಬಿ.ಎನ್. ಸ್ವಾಮಿ ಮಾತನಾಡಿ ಕನ್ನಡತಿ ಅನು ಅಕ್ಕ ಅವರ ಸಾಮಾಜಿಕ ಸೇವೆಗಳು ನಮ್ಮ ಜಿಲ್ಲೆಗೆ ಮಾದರಿಯಾಗಿದೆ ಎಂದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯಿತಿ ಇಒ. ಆರ್. ಹೇಮಾವತಿ,ಕರ್ನಾಟಕ ರಾಜ್ಯ ವಾಲ್ಮೀಕಿ ಸಂಘದ ಉಪಾಧ್ಯಕ್ಷ ಬಂಕ್ ಮುನಿಯಪ್ಪ,ಮುಖಂಡರಾದ ತಾದೂರುರಘು, ಬಚ್ಚನಹಳ್ಳಿ ನಾರಾಯಣಸ್ವಾಮಿ,ಡಿ. ಎಚ್.ನಾಗರಾಜ್, ನಲ್ಲೋಜನಹಳ್ಳಿ ಶಿವಕುಮಾರ್, ತಿಮ್ಮನಾಯಕನಹಳ್ಳಿ ಮುನಿಯಪ್ಪ ಹಾಗು ಸ್ಥಳೀಯ ಮುಖಂಡರು ಭಾಗವಹಿಸಿದ್ದರು.

ಕನ್ನಡತಿ ಅನು ಅಕ್ಕ ಮಾತನಾಡಿ ಸರ್ಕಾರಿ ಶಾಲೆ ಉಳಿಸಿ ಅಭಿಯಾನದಡಿ ಸುಮಾರು 6 ವರ್ಷಗಳಿಂದ 25 ಜಿಲ್ಲೆಯನ್ನು ಭೇಟಿ ಮಾಡಿ 145 ಶಾಲೆಗಳಿಗೆ ಸುಣ್ಣ ಬಣ್ಣದ ವ್ಯವಸ್ಥೆಯನ್ನು ನಾನು ಹಾಗೂ ನಮ್ಮ ತಂಡದೊಂದಿಗೆ ಮಾಡುತ್ತಿದ್ದೇವೆ.

ಈಗ ನಾವು ತಾಲ್ಲೂಕಿನ ವಾಲ್ಮೀಕಿ ಮಹರ್ಷಿ ವಸತಿ ಶಾಲೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದೇವೆ, ಈ ಶಾಲೆಯ ದುರಸ್ತಿ ಬಗ್ಗೆ ಗಮನಿಸಿ ಶಾಸಕರಾದ ಬಿ.ಎನ್.ರವಿಕುಮಾರ್ ಅವರ ಬಳಿ ಮನವಿ ಸಲ್ಲಿಸಿದಾಗ ಅವರು ತಕ್ಷಣ ಶಾಲೆಗೆ ಭೇಟಿ ನೀಡಿ ನಮ್ಮ ಮನವಿಗೆ ಸ್ಪಂದಿಸಿದ ಶಾಸಕರಿಗೆ ಹಾಗೂ ಅವರ ತಂಡಕ್ಕೆ ಅಭಿನಂದನೆಗಳನ್ನ ತಿಳಿಸುತ್ತೇನೆ ಎಂದರು.

# ಅನುಮೋದನೆಯಾದ ಸಾಗುವಳಿ ಚೀಟಿಗಳ ವಿತರಣೆಗೆ ಕ್ರಮ

**ಚಾಮರಾಜನಗರ:** ನಗರದ ತಾಲೂಕು ಕಚೇರಿ ಸಭಾಂಗಣದಲಿ ಗುರುವಾರಎಂಎಸ್ಐಎಲ್ಅಧ್ಯಕ್ಷ, ಶಾಸಕ ಸಿ.ಪುಟ್ಟರಂಗಶೆಟ್ಟಿ ಅವರಅಧ್ಯಕ್ಷತೆಯಲ್ಲಿ ಬಗರ್ ಹುಕುಂ ಸಾಗುವಳಿ ಬಗರ್ ಹುಕುಂ ಸಾಗುವಳಿ ಸಕ್ರಮೀಕರಣ ಸಮಿತಿ ಸಭೆನಡೆಯಿತು.

ಕಡತ ಪರಿಶೀಲಿಸಿದ ಶಾಸಕ ಸಿ.ಪುಟ್ಟರಂಗಶೆಟ್ಟಿ ಮಾತನಾಡಿ, ಕಳೆದ ವರ್ಷ ನ.28ರಂದು ನಡೆದ ಬಗರ್ ಹುಕುಂ ಸಾಗುವಳಿ ಸಮಿತಿ ಸಭೆಯಲ್ಲಿ 9 ಅರ್ಜಿಗಳ ಪೈಕಿ 7, ಜ.6ರಂದು ನಡೆದ 2ನೇಹಂತದ ಸಭೆಯಲ್ಲಿ16 ಅರ್ಜಿಗಳಿಗೆ 13, ಇಂದಿನ ಸಭೆಯಲ್ಲಿ ಹರವೆ ಹಾಗೂ ಹರದನಹಳ್ಳಿ ಹೋಬಳಿ ವ್ಯಾಪ್ತಿಯ ಗ್ರಾಮಗಳ ಫಲಾನುಭವಿಗಳ 15 ಅರ್ಜಿ ಸಲ್ಲಿಕೆಯಾಗಿದ್ದು, ಅವುಗಳಲ್ಲಿ 1ತಿರಸ್ಕೃತ, 2 ಅರ್ಜಿಗಳು ಪರಿಶೀಲನೆಗೆ ಹೋಗಿವೆ. ಮುಂದಿನ ಸಭೆಯಲ್ಲಿಅನುಮೋದನೆಯಾಗಿರುವ ಸಾಗುವಳಿಚೀಟಿಗಳನ್ನು ಫಲಾನುಭವಿಗಳಿಗೆ ಸಾಗುವಳಿಚೀಟಿ ವಿತರಿಸಲುಕ್ರಮವಹಿಸಲಾಗುವುದುಎಂದರು.

ಬಗರ್ ಹುಕುಂ ಸಾಗುವಳಿ ಸಕ್ರಮೀಕರಣಸಮಿತಿ ಸದಸ್ಯರಾದಬಿಸಲವಾಡಿರವಿ, ಅರಕಲವಾಡಿಮಲ್ಲಿಕಾಚನ್ನೇಗೌಡ, ಬೋಗಾಪುರಮಹಾಲಿಂಗ, ತಹಸೀಲ್ದಾರ್ ಗಿರಿಜಾ, ವಿಷಯ ನಿರ್ವಾಹಕಅವಿನಾಶ್, ಜಿಲ್ಲಾ ಭೂಮಿಸಮಾಲೋಚಕರಾಜೇಂದ್ರ, ಶಿರಸ್ತೇದಾರ್ ಬಿ.ಎನ್.ವಿನು, ರಾಜಸ್ವನಿರೀಕ್ಷಕರು, ಗ್ರಾಮಾಡಳಿತಾಧಿಕಾರಿಗಳು ಹಾಜರಿದ್ದರು.



# ಸರ್ಕಾರಿ ಶಾಲೆಗಳ ಬಲವರ್ಧನೆಗೆ ದಾನಿಗಳ ನೆರವು ಅಗತ್ಯ




**ಕೆ.ಆರ್.ಪೇಟೆ.:** ಸರ್ಕಾರಿ ಶಾಲೆಗಳ ಬಲವರ್ಧನೆಗೆ ದಾನಿಗಳ ಹಾಗೂ ಹಳೆಯ ವಿದ್ಯಾರ್ಥಿಗಳ ನೆರವು ಅಗತ್ಯವಾಗಿದೆ ಎಂದು ಕ್ಷೇತ್ರಶಿಕ್ಷಣಾಧಿಕಾರಿ ವೈ.ಕೆ.ತಿಮ್ಮೇಗೌಡ ತಿಳಿಸಿದರು.

ಅವರು ಪಟ್ಟಣದ ಹೇಮಾವತಿ ಬಡಾವಣೆಯ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ದಾನಿಗಳ ನೆರವಿನಿಂದ 1.15 ಲಕ್ಷ ಬೆಲೆಬಾಳುವ ಸಾಮಗ್ರಿಗಳನ್ನು ಸ್ವೀಕರಿಸಿ ಮಾತನಾಡಿದರು.

ಸ್ಪರ್ಧಾತ್ಮಕ ಯುಗವಾಗಿರುವ ಈ ಸಂದರ್ಭದಲ್ಲಿ ಮಕ್ಕಳನ್ನು ಸ್ಪರ್ದೆಗೆ ತಯಾರು ಮಾಡುವುದು ಶಿಕ್ಷಕರಿಗೆ ಸವಾಲಿನ ಕೆಲಸವಾಗಿದ್ದು ಈ ನಿಟ್ಟಿನಲ್ಲಿ ಶಾಲೆಗೆ ಅಗತ್ಯವಾಗಿರುವ ಕಲಿಕಾ ಸಾಮಗ್ರಿಗಳನ್ನು. ಕ್ರೀಡಾ ಸಾಮಗ್ರಿಗಳನ್ನು ಮತ್ತು ಪಾಠೋಪಕರಣಗಳನ್ನು ಪೂರೈಸಿಕೊಂಡು ಅವುಗಳನ್ನು ಸಮರ್ಪಕವಾಗಿ ಕಲಿಕೆಗೆ ಬಳಸಿಕೊಳ್ಳುವ ಮೂಲಕ ನೀಡಿದ ದಾನಿಗಳಿಗೂ ಹೆಸರು ಬರುವಂತೆ ಮಕ್ಕಳನ್ನು ಶೈಕ್ಷಣಿಕವಾಗಿ ಸಿದ್ದಪಡಿಸಬೇಕು. ಪಟ್ಟಣದ ಐಡಿಬಿಐ ಬ್ಯಾಂಕ್ ಈ ನಿಟ್ಟಿನಲ್ಲಿ ಸರ್ಕಾರಿ ಶಾಲೆಗಳಲ್ಲಿ ಕಲಿಯುತ್ತಿರುವ ಮಕ್ಕಳ ನೆರವಿಗೆ ಬಂದಿದ್ದು ಎರಡು ಕಂಪ್ಯೂಟರ್, ಸಿಪಿಯು, ಮೌಸ್, ಎರಡು ಛೇರ್, ಎರಡು ಟೇಬಲ್, ಕೀಬೋರ್ಡ್, ಮುಂತಾದುವುಗಳನ್ನು ಶಾಲೆಗೆ ನೀಡಿದ ಬ್ಯಾಂಕ್ ಸಿಬ್ಬಂದಿಗಳಿಗೆ ಶಿಕ್ಷಣ ಇಲಾಖೆಯ ಪರವಾಗಿ ಧನ್ಯವಾದಗಳನ್ನು ಅರ್ಪಿಸಿದರು. ಹಳೆಯ ವಿದ್ಯಾರ್ಥಿಗಳು ನೀವು ಓದಿದ ಶಾಲೆಗೆ ನಿಮ್ಮ ಕೈಲಾದಷ್ಟು ನೆರವು ನೀಡುವ ಮೂಲಕ ನಿಮ್ಮ ಗ್ರಾಮದ ಶಾಲೆಯ ಅಭಿವೃದ್ದಿಗೆ ಕೈ ಜೋಡಿಸಬೇಕು ಎಂದರು.

ಇದೇ ಸಂದರ್ಭದಲ್ಲಿ ಐಡಿಬಿಐ ಬ್ಯಾಂಕ್‌ನ ಮ್ಯಾನೇಜರ್ ಬಿಸ್ವರಂಜನ್‌ರಾಯ್. ಹಾಗೂ ಕೀರ್ತಿವರ್ಧನ್ ಮತ್ತು ಸಿಬ್ಬಂದಿಗಳು ಮತ್ತು ಕ್ಷೇತ್ರ ಸಮನ್ವಯಾಧಿಕಾರಿ ಹೆಚ್. ಕೆ.ಮಂಜುನಾಥ್ ಅವರು ಮುಖ್ಯ ಶಿಕ್ಷಕ ಎಸ್ ಶಿವಕುಮಾರ. ಇಸಿಓ ನವೀನಕುಮಾರ್, ಬಿ.ಕೆ.ಹರೀಶ್ ಸಿ.ಆರ್.ಪಿ ಕೇಶವಮೂರ್ತಿ, ಎಸ್‌ಡಿಎಂಸಿ ಅಧ್ಯಕ್ಷ ಸೈಯದ್ ಸಿದ್ದಿಕ್, ಶಿಕ್ಷಕಿ ಇಂದ್ರಮ್ಮ ಹಾಗೂ ರಾಜಶೇಖರ್ ಹಾಗೂ ಎಸ್‌ಡಿಎಂಸಿ ಸದಸ್ಯರು ಹಾಜರಿದ್ದರು.

# ಅಧ್ಯಕ್ಷ–ಉಪಾಧ್ಯಕ್ಷ ಅವಿರೋಧ ಆಯ್ಕೆ



**ಆನೇಕಲ್:** ತಾಲ್ಲೂಕಿನ ಪ್ರಾಥಮಿಕ ಸಹಕಾರಿ ಕೃಷಿ ಮತ್ತು ಗ್ರಾಮಿಣಾಭಿವೃದ್ಧಿ ಬ್ಯಾಂಕ್‌ಗೆ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಚುನಾವಣೆಗೆ ತಲಾ ಒಂದೊಂದೆ ನಾಮಪತ್ರ ಸಲ್ಲಿಸಿದ ಹಿನ್ನೆಲೆಯಲ್ಲಿ ಅಧ್ಯಕ್ಷರಾಗಿ ಮುನಿರಾಜು ಗೌಡ ಹಾಗೂ ಉಪಾಧ್ಯಕ್ಷ ಸತೀಶ್ ಅವರು ಅವಿರೋಧವಾಗಿ ಆಯ್ಕೆಯಾದರು.

ಈ ವೇಳೆ ಕೇಂದ್ರದ ಮಾಜಿ ಸಚಿವ ಎ.ನಾರಾಯಣಸ್ವಾಮಿ ಮಾತನಾಡಿ, ಕಳೆದ 15ವರ್ಷದಿಂದ ಪಿಎಲ್‌ಡಿ ಬ್ಯಾಂಕ್ ಬಿಜೆಪಿ ತೆಕ್ಕೆಯಲ್ಲಿದೆ. ಹಿಂದಿನ ಅಧ್ಯಕ್ಷರುಗಳ ಪರಿಶ್ರಮದಿಂದ ಬ್ಯಾಂಕ್ ಜಿಲ್ಲೆಯಲ್ಲೆ ಪ್ರಥಮ ಸ್ಥಾನದಲ್ಲಿದೆ. ಈಗಿನ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರು ಎಲ್ಲರನ್ನು ವಿಶ್ವಾಸದಲ್ಲಿಟ್ಟುಕೊಂಡು ಬ್ಯಾಂಕ್‌ನ ಅಭಿವೃದ್ಧಿಗೆ ಶ್ರಮಿಸಬೇಕೆಂದು ಶುಭ ಹಾರೈಸಿದರು.

ನೂತನ ಅಧ್ಯಕ್ಷ ನಾಯನಹಳ್ಳಿ ಮುನಿರಾಜು ಗೌಡ ಮಾತನಾಡಿ, ಎಲ್ಲ ನಿರ್ದೇಶಕರ ಸಹಕಾರದಿಂದ ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್‌ಗೆ ಅಧ್ಯಕ್ಷರನ್ನಾಗಿ ಆಯ್ಕೆಗೆ ಸಹಕಾರಿಸಿದ ಕೇಂದ್ರದ ಮಾಜಿ ಸಚಿವ ಎ.ನಾರಾಯಸ್ವಾಮಿ ಸೇರಿದಂತೆ ಎಲ್ಲ ನಾಯಕರಿಗೆ ಕೃತಜ್ಞತೆ ಸಲ್ಲಿಸುತ್ತೇನೆ ಎಂದರು.

ಸರಕಾರದಿಂದ ದೊರೆಯುವಂತಹ ರೈತ ಯೋಜನೆಗಳನ್ನು ಪ್ರಾಮಾಣಿಕವಾಗಿ ರೈತರ ಬಾಗಿಲಿಗೆ ತಲುಪಿಸುವಂತಹ ಕಾರ್ಯದಲ್ಲಿ ತೊಡಗುತ್ತೇನೆ. ಹಾಗೆಯೇ ಬ್ಯಾಂಕ್‌ನ್ನು ರಾಜ್ಯದಲ್ಲಿ ಮಾದರಿ ಬ್ಯಾಂಕ್ ನ್ನು ಮಾಡಲು ಶ್ರಮಿಸಲಾಗುವುದು ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಈ ವೇಳೆ ನೂತನ ಅಧ್ಯಕ್ಷ, ಉಪಾಧ್ಯಕ್ಷರನ್ನು ಬಿಜೆಪಿ ಮುಖಂಡರಾದ ಯಂಗಾರೆಡ್ಡಿ, ಬಿ.ಜಿ.ಆಂಜಿನಪ್ಪ, ನರಸಿಂಹರೆಡ್ಡಿ, ಮುಗಳೂರು ಆಂಜಿನಪ್ಪ, ಸೋಮಶೇಖರ್‌ರೆಡ್ಡಿ, ಸತೀಶ್, ವೆಂಕಟೇಶ್‌ರೆಡ್ಡಿ, ನಾಗೇಶ್, ಮುನಿರಾಜು, ಸತೀಶ್, ಅತ್ತಿಬೆಲೆ ಬಸವರಾಜು, ಅನಿಲ್‌ರೆಡ್ಡಿ, ಮರಸೂರು ರಮೇಶ್‌ರೆಡ್ಡಿ, ಬಂಡಾಪುರ ರಾಮಚಂದ್ರ, ಶ್ರೀನಾಥ್ ಮತ್ತಿರರಿದ್ದರು.

# ಉತ್ತಮ ಗುಣಮಟ್ಟದ ಹುಳುಗಳನ್ನು ಆಯ್ಕೆ ಮಾಡಲು ಸಲಹೆ



**ಶಿಡ್ಲಘಟ್ಟ:** ರೇಷ್ಮೆ ಹುಳು ಸಾಕಣೆ ಮನೆಯನ್ನು ಸ್ವಚ್ಛವಾಗಿ ನಿರ್ವಹಿಸುವುದು ಮೊದಲನೆಯ ಮೆಟ್ಟಿಲಾಗಿದ್ದು, ಉತ್ತಮ ಗುಣಮಟ್ಟದ ಚಾಕಿ ಹುಳುಗಳನ್ನು ಆಯ್ಕೆ ಮಾಡುವುದು ಅತ್ಯವಶ್ಯಕ ಎಂದು ರೇಷ್ಮೆ ಉಪ ನಿರ್ದೇಶಕ ಎಸ್. ಬೋಜಣ್ಣ ತಿಳಿಸಿದರು.

ತಾಲ್ಲೂಕಿನ ಅಬ್ಲೂಡು ಗ್ರಾಮದಲ್ಲಿ ಆಯೋಜಿಸಿದ್ದ ದ್ವಿತಳಿ ರೇಷ್ಮೆ ಬೆಳೆ ಸಾಕಣೆಯಲ್ಲಿ ತಾಂತ್ರಿಕತೆಯ ಬಲವರ್ಧನೆ ಕುರಿತ ತರಬೇತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಚಳಿಗಾಲ, ಬೇಸಿಗೆ ಮತ್ತು ಮಳೆಗಾಲದಲ್ಲಿ ರೇಷ್ಮೆ ಹುಳು ಮತ್ತು ಹಿಪ್ಪುನೇರಳೆ ಸೊಪ್ಪಿಗೆ ತೊಂದರೆ ನೀಡುವ ರೋಗಗಳು ಹಾಗೂ ಕೀಟಗಳ ಹತೋಟಿ ಕ್ರಮಗಳ ಕುರಿತು ರೈತರಿಗೆ ಮನವರಿಕೆ ಮಾಡಿದರು.

ರೇಷ್ಮೆ ಕೃಷಿ ಹಾಗೂ ರೇಷ್ಮೆ ಉದ್ದಿಮೆಯಲ್ಲಿಯೂ ಸಮಸ್ಯೆಗಳು ಸಾಮಾನ್ಯವಾಗಿದ್ದು, ಅವುಗಳನ್ನು ಯಶಸ್ವಿಯಾಗಿ ಎದುರಿಸಲು ಪ್ರಯತ್ನಿಸುವುದು ಮಾತ್ರವೇ ಯಶಸ್ಸಿಗೆ ದಾರಿ ಎಂದರು.

ಕೊಟ್ಟಿಗೆ ಗೊಬ್ಬರ ಮತ್ತು ರಸಗೊಬ್ಬರವನ್ನು ಶ್ರೇಷ್ಠ ರೀತಿಯಲ್ಲಿ ಬಳಸಿಕೊಂಡು ಉತ್ತಮ ಹಿಪ್ಪುನೇರಳೆ ಬೆಳೆಯುವಂತೆ ಸಲಹೆ ನೀಡಿದರು.

ರೇಷ್ಮೆ ಕೃಷಿ ಸಹಾಯಕ ನಿರ್ದೇಶಕ ಅಲ್ಮಲ್ ಪಾಷ ಮಾತನಾಡಿ ಹಣ್ಣಾದ ರೇಷ್ಮೆ ಹುಳಿಗಳಿಗೆ ಸಮರ್ಪಕ ಆರೈಕೆ ನೀಡದ ಕಾರಣ, ಉತ್ತಮ ಗುಣಮಟ್ಟದ ಗೂಡನ್ನು ಕೈಗೆಟುಕಿಸದ ಪರಿಸ್ಥಿತಿ ಉಂಟಾಗುತ್ತಿದೆ ಐದು ಅಥವಾ ಆರು ದಿನಗಳ ನಂತರ ಮಾತ್ರ ಗೂಡನ್ನು ಚಂದ್ರಿಕೆಯಿಂದ ಬಿಡಿಸುವುದರ ಮಹತ್ವವನ್ನು ಅವರು ವಿವರಿಸಿದರು.

ಚಂದ್ರಿಕೆಯಿಂದ ಗೂಡನ್ನು ಬೇಗ ಬಿಡಿಸುವುದರಿಂದ ಪ್ಯೂಪಾ ಸಾಯುವ ಸಮಸ್ಯೆ ಉಂಟಾಗಿ ಗುಣಮಟ್ಟ ಕುಸಿಯುತ್ತದೆ,ಐದು ದಿನಗಳ ನಂತರ ಮಾತ್ರ ಗೂಡನ್ನು ಬಿಡಿಸಿ, ಮಾರುಕಟ್ಟೆಗೆ ಗುಣಮಟ್ಟದ ಆಧಾರದಲ್ಲಿ ಗ್ರೇಡಿಂಗ್ ಮಾಡಿರುವ ಗೂಡನ್ನು ಮಾತ್ರ ಕಳುಹಿಸುವಂತೆ ಮನವಿ ಮಾಡಿದರು.

ಮಾರುಕಟ್ಟೆಯಲ್ಲಿ ಗುಣಮಟ್ಟದ ಆಧಾರದಲ್ಲಿ ಬೆಲೆ ನಿರ್ಧಾರವಾಗುತ್ತಿದ್ದು, ಪ್ರತಿಯೊಂದು ಗೂಡಿಗೆ ಗರಿಷ್ಠ ಬೆಲೆ ದೊರೆಯುವ ವ್ಯವಸ್ಥೆಯನ್ನು ಜಾರಿಗೊಳಿಸಲಾಗಿದೆ, ಜಲ್ಲಿಗೂಡು, ಗಂಟುಗೂಡು ಮತ್ತು ಉತ್ತಮ ಗುಣಮಟ್ಟದ ಗೂಡನ್ನು ಪ್ರತ್ಯೇಕವಾಗಿ ಗ್ರೇಡಿಂಗ್ ಮಾಡಬೇಕು ಎಂದರು.

ಈ ಸಂದರ್ಭದಲ್ಲಿ ತಲಘಟ್ಟಪುರದ ರೇಷ್ಮೆ ಸಂಶೋಧನಾ ಸಂಸ್ಥೆಯ ವಿಜ್ಞಾನಿ ಡಾ.ಅರುಣ, ಡಾ. ಬಿ.ಕೆ. ಪ್ರಕಾಶ್, ರೇಷ್ಮೆ ವಿಸ್ತರಣಾಧಿಕಾರಿ ಎಚ್.ಟಿ.ತಿಮ್ಮಪ್ಪ ಭಾಗವಹಿಸಿದ್ದರು.

# ರೈತರ ಭೂ ಸ್ವಾಧೀನ; ಉಗ್ರ ಹೋರಾಟ: ಕರವೇ

**ಆನೇಕಲ್:** ಕರ್ನಾಟಕ ರಾಜ್ಯ ಸರ್ಕಾರ ಭೂಮಾಫಿಯಾ ಹಾಗೂ ದಲ್ಲಾಳಿಗಳ ಜೊತೆ ಕೈಜೋಡಿಸಿ ಅವೈಜ್ಞಾನಿಕವಾಗಿ ಫಲವತ್ತಾದ ರೈತರ ಭೂಸ್ವಾಧೀನಕ್ಕೆ ಮುಂದಾಗಿರುವ ನೀತಿ ಖಂಡಿಸಿ ಭೂಸ್ವಾಧೀನ ಪ್ರಕ್ರಿಯೆ ಕೈಬಿಡದೆ ಹೋದರೆ ಉಗ್ರ ಹೋರಾಟ ನಡೆಸಲಾಗುವುದು ಎಂದು ಕರವೇ ರಾಜ್ಯಾಧ್ಯಕ್ಷ ಪ್ರವೀಣ್ ಶೆಟ್ಟಿ ಖಡಕ್ ಎಚ್ಚರಿಕೆ ನೀಡಿದರು.

ಅವರು ಆನೇಕಲ್ ತಾಲೂಕಿನ ವ್ಯಾಪ್ತಿಯಲ್ಲಿ ಜಿಗಣಿಯಲ್ಲಿ ಪ್ರತಿಭಟನೆ ಪೂರ್ವಭಾವಿ ಸಭೆ ಹಾಗೂ ಡಾ.ಶ್ರೀಶಿವಕುಮಾರ ಸ್ವಾಮೀಜಿಗಳ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದರು

ಪೆರಿಪೆರಲ್ ರಸ್ತೆ, ಬಿಡಿಎ, ಕೈಗಾರಿಕಾ ವಲಯ ಸ್ಥಾಪನೆ ಅಭಿವೃದ್ಧಿ ಹೆಸರಿನಲ್ಲಿ ಫಲವತ್ತಾದ ಭೂಮಿ ಭೂಸ್ವಾಧೀನ ಮಾಡುವ ಅಗತ್ಯ ಏನಿದೆ.ಕೇವಲ ಒಂದು ಅಥವಾ ಎರಡು ಎಕರೆ ಜಮೀನಿನಲ್ಲಿ ತಲಾತಲಾಂತರಗಳಿಂದ ಉಳುಮೆ ಮಾಡಿಕೊಂಡಿರುವ ರೈತರನ್ನು ಒಕ್ಕಲೆಬ್ಬಿಸುವ ಹುನ್ನಾರ ನಡೆದಿದೆ.ಜಮೀನು ಬೆಲೆ ಗಗನಕ್ಕೇರುತ್ತಿದೆ.ಕೋಟ್ಯಾಂತರ ರೂಪಾಯಿ ಬೆಲೆ ಬಾಳುವ ಜಮೀನನ್ನು ಸ್ವಾಧೀನಪಡಿಸಿಕೊಂಡು ಭೂಮಾಫಿಯಾ ನಡೆಸಲಾಗುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ನೆಲದ ಮಕ್ಕಳಿಗೆ ಕೆಲಸ ನೀಡುತ್ತಿಲ್ಲ, ಕಡ್ಡಾಯ ಕನ್ನಡ ನಾಮಫಲಕ ಜಾರಿಗೊಂಡಿಲ್ಲ,ಇರುವ ರಸ್ತೆಗಳಲ್ಲಾ ಗುಂಡಿಗಳಾಗಿವೆ.ಐಟಿಬಿಟಿಗಳನ್ನು ಉತ್ತರ ಕರ್ನಾಟಕದಲ್ಲಿ ಮಾಡಿ,ನಾಡಿನ ನೆಲ,ಜಲ, ಭಾಷೆ,ರೈತರು, ಕಾರ್ಮಿಕರು ಹಾಗೂ ಶೋಷಿತರ ಪರ ಕರವೇ ಹೋರಾಟ ನಡೆಸುತ್ತಿದೆ.ರೈತರು, ಕನ್ನಡ ಸಂಘಟನೆಗಳ ಜೊತೆಗೂಡಿ ಬೃಹತ್ ಜಾಥಾ ನಡೆಸುವ ಮೂಲಕ ಸರ್ಕಾರವನ್ನು ಎಚ್ಚರಿಸುವ ಕೆಲಸ ಮಾಡಲಾಗುವುದು ಎಂದು ತಿಳಿಸಿದರು.

ಕರವೇ ಪ್ರವೀಣ್ ಶೆಟ್ಟಿ ಬಳಗದ ರಾಜ್ಯ ಉಪಾಧ್ಯಕ್ಷ ಜಿಗಣಿ ಆರ್.ಪುನೀತ್ ಮಾತನಾಡಿ ತಾಲ್ಲೂಕಿನಲ್ಲಿ ಕೆಐಎಡಿಬಿ ಹೆಸರಿನಲ್ಲಿ 600ಕ್ಕೂ ಹೆಚ್ಚು ಎಕರೆ ಸ್ವಾಧೀನಕ್ಕೆ ಮುಂದಾಗಿರುವುದು ಖಂಡನೀಯ ಕರವೇ ರೈತರು ಪರವಾಗಿ ನಿಲ್ಲಲಿದೆ.ಅಭಿವೃದ್ಧಿ ಹೆಸರಿನಲ್ಲಿ ರೈತರಿಗೆ ದ್ರೋಹವೆಸಗಲು ಬಿಡುವುದಿಲ್ಲ ಎಂದು ಕಿಡಿಕಾರಿದರು.

ಬೆಂಗಳೂರು ಅಭಿವೃದ್ದಿ ಪ್ರಾದಿಕಾರ ಅಬಿವೃದ್ದಿ ಹೆಸರಿನಲ್ಲಿ ಪೆರಿಪೆರಲ್ ರಸ್ತೆ ಹೆಸರಿನಲ್ಲಿ ಭೂಸ್ವಾದೀನ ಮಾಡಿ 15 ವರ್ಷಕ್ಕೂ ಮೇಲ್ಪಟ್ಟಿದೆ ಅದೇ ಕಾರ್ಯರೂಪಕ್ಕೆ ಬಂದಿಲ್ಲ, ಮತ್ತೆ ಪಿ.ಪಿ.ಆರ್ ಎರಡನೇ ಹಂತದ ಭೂಸ್ವಾದೀನ ಎಂದು ಮಾಡುತ್ತಿದ್ದು,ಮೊದಲ ರಸ್ತೆಯೇ ಆಗದೇ ಎರಡನೇ ರಸ್ತೆ ಎಂಲ್ಲಿಂದ ಮಾಡುಉತ್ತೀರಾ ಎಂದು ಹುಲ್ಲಳ್ಳಿ, ಮಾರಗೊಂಡನಹಲ್ಲಿ, ಹುಲಿಮಂಗಲ, ಪೋಡು, ನಂಜಾಪುರ ಬಾಗದಲ್ಲಿ ವ್ಯವಸಾಯ ಭೂಮಿ ಹಾಗೂ ಮನೆಗಳ ನಿರ್ಮಾಣ ಮಾಡಿಕೊಂಡಿದ್ದು ಇಲ್ಲಿನ ರೈತರು ಭಯ್ಬೀತರಾಗಿದ್ದು ರಾವಾತ ರಾತ್ರೋ ರಾತ್ರಿ ಮನೆಗಳು ಹೋಗುತ್ತವೋ ಎನ್ನುವ ಆತಂಕದಲ್ಲಿದ್ದಾರೆ, ಬಿ.ಡಿ.ಎ ಸಮರ್ಪಕವಾದ ತೀರ್ಮಾನವನನ್ನು ತೆಗೆದುಕೊಳ್ಳದೇ ಹೋದರೆ ಹೋರಾಟ ಅನಿವಾರ್ಯ ಎಂದು ಎಚ್ಚರಿಸಿದರು.

ತಾಲ್ಲೂಕಿನಾದ್ಯಂತ ಎಕರೆಗಟ್ಟಲೆ ಸರ್ಕಾರಿ ಜಾಗವಿದೆ.ಅದನ್ನು ನಿವೇಶನಗಳನ್ನಾಗಿ ಮಾರ್ಪಡಿಸಿ ಬಡವರು, ಕಾರ್ಮಿಕರು ಹಾಗೂ ರೈತರಿಗೆ ಹಂಚಿಕೆ ಮಾಡಬೇಕು.ರಾಜ್ಯ ಸರ್ಕಾರದ ರೈತ ವಿರೋಧಿ ಧೋರಣೆ ಸಹಿಸಲು ಸಾಧ್ಯವಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಸರ್ಜಾಪುರ ಸಮೀಪ ಐ ಟಿ ಪಾರ್ಕ್ ನಿರ್ಮಾಣ ಮಾಡಲು ನೂರಾರು ಎಕರೆ ರೈತರ ಭೂಮಿಯನ್ನು ವಶಪಡಿಸಿಕೊಳ್ಳಲು ಮುಂದಾಗಿರುವ ಸರ್ಕಾರದ ಧೋರಣೆ ಖಂಡಿಸಿ ಮುಂದಿನ ವಾರ ಸರ್ಜಾಪುರ ಮುಖ್ಯ ರಸ್ತೆಯ ಸೋಂಪುರದಿಂದ ಸರ್ಜಾಪುರ ಮುಖ್ಯ ರಸ್ತೆವರೆಗೆ ಬೃಹತ್ ರ್ಯಾಲಿಂ ಮನ್ನು ಹಮ್ಮಿಕೊಂಡು ಸರ್ಕಾರಕ್ಕೆ ಎಚ್ಚರಿಕೆ ನೀಡಿ ಬಳಿಕ ರೈತರಿಗೆ ನಾವು ನಿಮ್ಮೊಂದಿಗೆ ಇದ್ದೇವೆ ಎನ್ನುವ ಮನವಿಯನ್ನು ಕೂಡ ಸಲ್ಲಿಸುತ್ತೇವೆ ಎಂದು ಹೇಳಿದರು. ಆನೇಕಲ್ ತಾಲ್ಲೂಕು ಕರವೇ ಅಧ್ಯಕ್ಷ, ಕಬ್ಬಡಿ ಮಂಜು,ಡಾ.ಮುರಳಿ,ಸಾಹಿತಿ ನಾಗಲೇಖ, ಮರಿಯಪ್ಪ, ಸಯ್ಯದ್, ಸದ್ದಾಂ, ಸೊಪ್ಪಳ್ಳಿ ಸತೀಶ್, ಹೇಮಂತ್, ಸಂಪಂಗಿ, ಶಕಿರಣ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.



# ಮುನ್ನೆಚ್ಚರಿಕೆ ವಹಿಸಿದರೆ ಆಸ್ಪತ್ರೆ ಮತ್ತು ಮಾತ್ರೆಗಳಿಂದ ದೂರವಿರಬಹುದು



**ಮುಳಬಾಗಿಲು:** ನಗರದ ತಾಲ್ಲೂಕು ಆಡಳಿತ ಕಚೇರಿಯಲ್ಲಿ ರೋಟರಿ ಮುಳಬಾಗಿಲು ಸೆಂಟ್ರಲ್ ಗ್ರಾಮ ಭಾರತಿ ಟ್ರಸ್ಟ್ ಹಾಗೂ ಜಾಲಪ್ಪ ಆಸ್ಪತ್ರೆಯಿಂದ ಆಯೋಜಿಸಿದ್ದ ಉಚಿತ ಆರೋಗ್ಯ ತಪಾಸಣೆ ಶಿಬಿರ ಉದ್ಘಾಟಿಸಿ ರೋಟರಿ ಅಧ್ಯಕ್ಷರಾದ ನಗವಾರ ಸತ್ಯಣ್ಣ ಮಾತನಾಡಿದರು.

ಆರೋಗ್ಯವಾಗಿದ್ದರೆ, ಸುಖವಾಗಿ ಬಾಳಬಹುದು. ಇಲ್ಲವಾದರೆ ದುಡಿದ ಹಣವನ್ನು ಆಸ್ಪತ್ರೆಗೆ ಖರ್ಚುಮಾಡಬೇಕಾಗುತ್ತದೆ. ಆದ್ದರಿಂದ ರೋಗದ ಲಕ್ಷಣ ಕಾಣುವ ಮುನ್ನವೇ ಆಗ್ಗಾಗ್ಗೆ ಆರೋಗ್ಯ ತಪಾಸಣೆ ಮಾಡಿಸಿಕೊಂಡು ವೈದ್ಯರು ನೀಡುವ ಸಲಹೆ ಪಾಲಿಸಬೇಕು ಎಂದು ಗ್ರಾಮ ಭಾರತಿ ಟ್ರಸ್ಟ್ ಅಧ್ಯಕ್ಷ ಎಂ.ಬಿ .ಕೃಷ್ಣಮೂರ್ತಿ ತಿಳಿಸಿದರು.

ಆರೋಗ್ಯ ಶಿಬಿರಗಳಿಂದ ಬಡವರಿಗೆ ಸಾಕಷ್ಟು ಅನುಕೂಲವಾಗುತ್ತದೆ. ಇಂತಹ ಶಿಬಿರಗಳು ಗ್ರಾಮೀಣ ಪ್ರದೇಶಗಳಲ್ಲಿ ಹೆಚ್ಚಾಗಿ ಆಯೋಜಿಸಬೇಕು ಎಂದು ತಿಳಿಸಿದರು.

200ಕ್ಕೂ ಹೆಚ್ಚು ರೋಗಿಗಳ ಆರೋಗ್ಯ ತಪಾಸಣೆ ನಡೆಸಲಾಯಿತು. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ನಿರ್ದೇಶಕರು ಅರ್ ಗೀತಾ ರವರು ತಾಲ್ಲೂಕು ಕಚೇರಿಯ ಶಿರೇಸ್ಥಾದಾರ್ ಗಳಾದ ಕೊಂಡಪ್ಪ ಸುಬ್ರಮಣಿ. ಹಾಗೂ ಸಿಬ್ಬಂದಿ ಜಾಲಪ್ಪ ಸಿಬ್ಬಂದಿ ವರ್ಗ ಇದ್ದರು.

# ಮಹಿಳೆಯರು ಸ್ವಾವಲಂಬಿಗಳಾಗಲು ಕಳಂಜಿಯಂ ಸಂಸ್ಥೆಯ ಸಹಾಯ ಹಸ್ತ

**ಕೊರಟಗೆರೆ:** ಪಟ್ಟಣದ ಕೆಎಸ್‌ಆರ್‌ಟಿಸಿ ವೃತದಿಂದ ಕಳಸುಗಳನ್ನು ಹೊತ್ತ ಮಹಿಳೆಯರು ಪ್ರಮುಖರಸ್ತೆಯಲ್ಲಿ ಮೆರವಣಿಗೆ ಮುಖಾಂತರ ಸಾಗಿ ಮಾರುತಿ ಕಲ್ಯಾಣ ಮಂಟಪದಲ್ಲಿ ಆಯೋಜಿಸಲಾಗಿದ್ದ ಕಟ್ಟೆ ಗಣಪತಿ ಮಹಿಳಾ ಕಳಂಜಿಯಂ ರಜತ ಮಹೋತ್ಸವದಲ್ಲಿ ಪಾಲ್ಗೊಂಡ ಸಾವಿರಾರು ಮಹಿಳೆಯರು...

2004ರಲ್ಲಿ ಆರಂಭಗೊಂಡ ಈ ಕಳಂಜಿಯಂ ಒಕ್ಕೂಟವು ಇಂದಿಗೆ 20 ವರ್ಷಗಳನ್ನು ಪೂರೈಸಿ ಅತಿ ಹೆಚ್ಚು ಮಹಿಳಾ ಸದಸ್ಯರನ್ನು ಒಳಗೊಂಡಂತಹ ಸಂಘ ಸಂಸ್ಥೆ ಇದಾಗಿದೆ ತಾಲೂಕಿನಲ್ಲಿವೆ 400ಕ್ಕೂ ಹೆಚ್ಚು ಮಹಿಳಾ ಸಂಘಗಳು ನಡೆಯುತ್ತಿದ್ದು 6500 ಕ್ಕೂ ಹೆಚ್ಚು ಸದಸ್ಯರನ್ನ ಒಳಗೊಂಡಿರುವ ಧಾನ್ ಫೌಂಡೇಶನ್ ಸಂಸ್ಥೆಯು ಸುಮಾರು 28 ಕೋಟಿಗೂ ಅಧಿಕ ಸಾಲವನ್ನು ನೀಡಿದೆ ಮಹಿಳೆಯರಿಗಾಗಿ ಅದೇ ರೀತಿ ಮರುಪಾವತಿಯು ಕೂಡ ನಡೆಯುತ್ತಿದೆ ಕಳಂಜಿಯಂ ಒಕ್ಕೂಟದ ಮಹಿಳೆಯರಿಂದ ಸುಮಾರು 9.83 ಕೋಟಿ ಉಳಿತಾಯವಾಗಿದೆ. ಮಹಿಳಾ ಸಂಘದಿಂದ 11.50 ಕೋಟಿ ಉಳಿತಾಯ ಕಳಂಜಿಯಂ ಮಹಿಳಾ ಸಂಘಗಳಿಗೆ ಒಟ್ಟು 28.55ಕೋಟಿ ಸಾಲ ನೀಡಲಾಗಿದೆ.ಸಂಘದ ಪ್ರತಿಯೊಬ್ಬ ಮಹಿಳಾ ಸದಸ್ಯರಿಗೂ ಹಾಗೂ ಅವರ ಯಜಮಾನರಿಗೆ ಪ್ರತ್ಯೇಕ ಸುಮಾರು 10ಸಾವಿರ ಜನರಿಗೆ ಇನ್ಸೂರೆನ್ಸ್ ಕಲ್ಪಿಸಲಾಗಿದೆ ಇದಷ್ಟೇ ಅಲ್ಲದೆ ಪ್ರತಿಯೊಬ್ಬರಿಗೂ ಆರೋಗ್ಯ ವಿಮೆ ಮಾಡಲಾಗಿದೆ ಇದೆಲ್ಲವೂ ಮಹಿಳೆಯರಿಂದ ಮಹಿಳೆಯರಾಗಿ ಮಹಿಳೆಯರಿಗೋಸ್ಕರ ಇರುವ ಸಂಸ್ಥೆ ನಮ್ಮ ಕಳಂಜಿಯಂ ಒಕ್ಕೂಟ ಎಂದರೆ ತಪ್ಪಾಗಲಾರದು ಎಂದು ಮಹಿಳಾ ಕಾಳಂಜಿಂ ಒಕ್ಕೂಟದ ಸದಸ್ಯೆ ರಂಗಲಕ್ಷ್ಮಿ ತಿಳಿಸಿದರು..



ಕಳಂಜಿಯಂ ಸಂಘದ ರೂವಾರಿ ಉಮೇಶ್ ಮಾತನಾಡಿ: ನಮ್ಮ ಕಳರಂಜಿಂ ಸಂಸ್ಥೆ ಇಂದಿಗೆ 20 ವರ್ಷಗಳನ್ನು ಪೂರೈಸಿದೆ ಪ್ರಾರಂಭದಲ್ಲಿ 5 ರಿಂದ 10 ಸಂಘಗಳನ್ನ ಹೊಂದಿದ್ದ ಈ ಸಂಸ್ಥೆಯು ಇಂದು ತಾಲೂಕಿನಲ್ಲಿ 400ಕ್ಕೂ ಹೆಚ್ಚು ಸಂಘಗಳನ್ನ ಹೊಂದಿದ್ದು ಕೋಟಿಗಟ್ಟಲೆ ಹಣದ ವ್ಯವಹಾರವನ್ನ ಮಾಡುತ್ತಿದ್ದಾರೆ ಮಹಿಳೆಯರು ಸ್ವಾವಲಂಬಿ ಜೀವನಕ್ಕೆ ಅಡಿಪಾಯವಾಗಿದೆ ಕಳಂಜಿಯಂ ಒಕ್ಕೂಟ ಮಹಿಳೆಯರೆಲ್ಲರೂ ಒಗ್ಗಟ್ಟಿನಿಂದ ತಾವು ಬೆಳೆಯುತ್ತಾ ಕರಂಜಿಯಂ ಒಕ್ಕೂಟವನ್ನು ಬೆಳೆಸಿದ್ದಾರೆ ಎಲ್ಲರಿಗೂ ಹೃದಯಪೂರ್ವಕ ಧನ್ಯವಾದಗಳು ಎಂದು ತಿಳಿಸಿದರು..

ಪಟ್ಟಣ ಪಂಚಾಯಿತಿ ಸದಸ್ಯ ನಟರಾಜ್ ಮಾತನಾಡಿ ತಾಲೂಕಿನಲ್ಲಿ ಮೈಕ್ರೋ ಫೈನಾನ್ಸ್‌ಅವಳಿ ಜಾಸ್ತಿಯಾಗಿದೆ ಬಹಳಷ್ಟು ಮಹಿಳೆಯರು ಅದರಲ್ಲಿ ಸಾಲವನ್ನು ಪಡೆದು ಬಡ್ಡಿಯನ್ನು ಕಟ್ಟಲಾಗದೆ ಗ್ರಾಮವನ್ನೇ ತೊರೆಯುತ್ತಿದ್ದಾರೆ ಇಂತಹ ಘಟನೆಗಳು ಮರುಕಳಿಸದಂತೆ ಸರ್ಕಾರ ಎತ್ತುಕೊಳ್ಳಬೇಕು ಕಳಂಜಿಯಂ ಸಂಘದಲ್ಲಿ ಗುಂಪು ಒಣಗಾರಿಕೆ ಇರುತ್ತದೆ ಮಹಿಳೆಯರು ಉಳಿತಾಯದ ಜೊತೆ ಸಾಲವನ್ನು ಪಡೆದು ತಮ್ಮ ಜೀವನವನ್ನು ಉನ್ನತ ಮಟ್ಟಕ್ಕೆ ಸಾಧಿಸುತ್ತಿದ್ದಾರೆ ಆದರೆ ಕೆಲವು ಭಾಗಗಳಲ್ಲಿ ಮೈಕ್ರೋ ಫೈನಾನ್ಸ್ ಅವಳಿಯಿಂದ ಬಹಳಷ್ಟು ಕುಟುಂಬಗಳು ಬೀದಿಗೆ ಬಂದಿವೆ ಸರ್ಕಾರವು ಕೂಡಲೇ ಎಚ್ಚೆತ್ತುಕೊಂಡು ಇಂತಹ ಮೈಕ್ರೋ ಫೈನಾನ್ಸ್ ಗಳಿಗೆ ಕಡಿವಾಣ ಹಾಕಬೇಕು ಎಂದು ತಿಳಿಸಿದರು.

ಕಾರ್ಯಕ್ರಮದ ಸಂದರ್ಭದಲ್ಲಿ ತಾಲೂಕಿನ ಕಳಂಜಿಯಂ ಒಕ್ಕೂಟದ ಮುಖ್ಯಸ್ಥರಾದ ಕುಮಾರಿ ಮಾನಮ್ಮ ಎಫ್ ಡಿ ಓ ಉಮೇಶ್ ಡಿ ಆರ್ ಸಿ ಶೈಲಜಾ ನಳಿನ ರಾಜೇಶ್ವರಿ ಪುಷ್ಪಲತಾ ರಂಗಲಕ್ಷ್ಮಿ, ಯೂನಿಯನ್ ಬ್ಯಾಂಕ್ ಮ್ಯಾನೇಜರ್ ತೇಜಸ್ವಿನ್, ಪಟ್ಟಣ ಪಂಚಾಯತಿ ಸದಸ್ಯರಾದ ನಟರಾಜು, ವಕೀಲರ ಸಂಘದ ಅಧ್ಯಕ್ಷ ನಾಗರಾಜು,

ಕಾರ್ಯಕ್ರಮವನ್ನು ಉದ್ಘಾಟಿಸಿದ ತಾಲೂಕು ವಕೀಲರ ಸಂಘದ ಅಧ್ಯಕ್ಷ ನಾಗರಾಜು ಮಾತನಾಡಿ:– ಮಹಿಳೆಯರು ಕಾನೂನಿನ ಅರಿವನ್ನು ತಿಳಿದುಕೊಳ್ಳಬೇಕು ಮಹಿಳೆಯರಿಗೂ ಹಾಗೂ ಪುರುಷರಿಗೂ ಸಮಾನ ಆದ್ಯತೆ ನೀಡಿದೆ ಸರ್ಕಾರ ಈಗ ಪುರುಷರಿಗಿಂತ ಮಹಿಳೆಯರೇ ಕುಟುಂಬ ನಿರ್ವಹಣೆಯಲ್ಲಿ ಮೇಲುಗೈ ಕುಟುಂಬ ನಿರ್ವಹಣೆ ಮಾಡಲು ಮಹಿಳೆಯರ ಪತ್ರ ಬಹುದೊಡ್ಡದು ಸಣ್ಣ ಪುಟ್ಟ ಸಮಸ್ಯೆಗಳು ಬಂದಾಗ ಅದನ್ನು ಬಗೆರಿಸಿಕೊಂಡು ಹೋಗುವುದು ಪ್ರತಿ ಕುಟುಂಬದ ಮುಖ್ಯಸ್ಥರ ಜವಾಬ್ದಾರಿಯಾಗಿರುತ್ತದೆ ಅದನ್ನು ಮಹಿಳೆಯರು ಬಹಳ ಜವಾಬ್ದಾರಿಯಿಂದ ನಿವಹಿಸುತ್ತಾರೆ ಗ್ರಾಮೀಣ ಭಾಗದ ಮಹಿಳೆಯರು ಸಂಘ ಸಂಸ್ಥೆಗಳಲ್ಲಿ ತೊಡಗಿಸಿಕೊಂಡು ಮುಂದುವರಿಯುತ್ತಿದ್ದಾರೆ ಮಹಿಳೆಯರಿಂದಲೇ ಕುಡಿಯುವ ಈ ಸಂಸ್ಥೆಯು ಬಹಳ ಎತ್ತರಕ್ಕೆ ಬೆಳೆಯಲಿ ಎಂದು ಆಶಿಸುತ್ತೇನೆ ಎಂದು ತಿಳಿಸಿದರು.

ಕೃಷ್ಣಮೂರ್ತಿ, ಒಕ್ಕೂಟದ ಅಧ್ಯಕ್ಷರಾದ ರಾಧಮ್ಮ ಹಾಗೂ ಕೊರಟಗೆರೆ ಮಹಿಳಾ ಕಾಳಂಜಿಯಂ ಒಕ್ಕೂಟ, ಮಹಿಳಾ ಕಳಂಜಿಯಂ ಮ್ಯೂಚುಯಲ್ ಫೌಂಡೇಶನ್, ಮಹಿಳಾ ಸುಹಮ್ ಒಕ್ಕೂಟ, ಸಮೃದ್ಧಿ ಮಹಿಳಾ ಕಳಂಜಿಯಂ ಸಮೂಹದ ಸಾವಿರಾರು ಮಹಿಳಾ ಸದಸ್ಯರು ಪದಾಧಿಕಾರಿಗಳು ಹಾಜರಿದ್ದರು..



# ಶುಲ್ಕ ವಸೂಲಿ; ಭಕ್ತರಿಗೆ ಹೊರೆಯಾಗದಂತೆ ಮುಂಜಾಗ್ರತೆ ವಹಿಸಿ

**ಶಿಡ್ಲಘಟ್ಟ:** ದನಗಳ ಜಾತ್ರೆಯಲ್ಲಿ ಹಾಗೂ ವಾಹನಗಳ ಪಾರ್ಕಿಂಗ್‌ನ ಶುಲ್ಕ ವಸೂಲಿ ಮಾಡುವವರು ಹೆಚ್ಚು ಶುಲ್ಕ ವಸೂಲಿ ಮಾಡದಂತೆ ಬರುವ ಭಕ್ತರಿಗೆ ಶುಲ್ಕದ ಹೊರೆ ಆಗದಂತೆ ಸಂಬಂಧಿಸಿದ ಅಧಿಕಾರಿಗಳು ಮುಂಜಾಗ್ರತೆ ವಹಿಸಬೇಕು ಶಾಸಕರಾದ ಬಿ.ಎನ್.ರವಿಕುಮಾರ್ ಮನವಿ ಮಾಡಿದರು.

ತಾಲ್ಲೂಕಿನ ಪುರಾತನ ಪ್ರಸಿದ್ಧ ತಲಕಾಯಲಬೆಟ್ಟದ ಶ್ರೀ ವೆಂಕಟರಮಣ ದೇವಾಲಯದಲ್ಲಿ ರಥೋತ್ಸವದ ಹಿನ್ನೆಲೆಯಲ್ಲಿ ನಡೆದ ದೇವಸ್ಥಾನದ ವ್ಯವಸ್ಥಾಪನಾ ಸಮಿತಿ, ಇಲಾಖೆ ಅಧಿಕಾರಿಗಳು ಹಾಗೂ ಮುಖಂಡರ ಸಭೆಯಲ್ಲಿ ಅವರು ಮಾತನಾಡಿದರು.

ರಥೋತ್ಸವಕ್ಕೆ ವ್ಯಾಪಾರಕ್ಕೆ ಬರುವವರು ಅಂಗಡಿ ಹಾಕುವ ಮೊದಲು ಮುಖ್ಯ ರಸ್ತೆಯ ಮಧ್ಯದಿಂದ ಎರಡೂ ಬದಿಯಲ್ಲಿ 20 ಅಡಿ ಬಿಟ್ಟು ಅಂಗಡಿ ಹಾಕುವಂತೆ ಕ್ರಮವಹಿಸಿ ಎಂದು ಪೊಲೀಸರಿಗೆ ಸೂಚಿಸಿದರು.



ರಥೋತ್ಸವದ ಸಮಯದಲ್ಲಿ ಯಾವುದೇ ಚ್ಯುತಿ ಬರದಂತೆ ಸುಸೂತ್ರವಾಗಿ ನಡೆಸಬೇಕು ಅದಕ್ಕೆ ದೇವಾಲಯದ ವ್ಯವಸ್ಥಾಪನಾ ಸಮಿತಿ, ಅಧಿಕಾರಿಗಳು, ಭಕ್ತರು ಸಹಕರಿಸಬೇಕು ಎಂದರು.

ತಹಶೀಲ್ದಾರ್ ಬಿ.ಎನ್.ಸ್ವಾಮಿ ಮಾತನಾಡಿ,ಈ ಬಾರಿ ದನಗಳ ಜಾತ್ರೆ ಎಂದಿನಂತೆ ನಡೆಯಲಿದೆ ದನಗಳ ಜಾತ್ರೆ ಮತ್ತು ವಾಹನಗಳ ಪಾರ್ಕಿಂಗ್‌ನ ಶುಲ್ಕ ವಸೂಲಿ ಹರಾಜು ಮಾಡಲಿದೆ ಎಂದರು.

ಭಕ್ತರಿಗೆ ಮೂಲ ಸೌಕರ್ಯ ಗಳನ್ನು ಕಲ್ಪಿಸಲು ತಾಲ್ಲೂಕು ಆಡಳಿತ ಬದ್ಧವಾಗಿದ್ದು ಅನ್ನದಾಸೋಹ ಹಮ್ಮಿಕೊಳ್ಳುವವರು ಕಡ್ಡಾಯವಾಗಿ ಗ್ರಾ.ಪಂ.ಅನುಮತಿ ಪಡೆದುಕೊಳ್ಳಬೇಕು ಎಂದು ಸೂಚನೆ ನೀಡಿದರು.

ವ್ಯವಸ್ಥಾಪನಾ ಸಮಿತಿ ಅಧ್ಯಕ್ಷ ಡಿ.ಪಿ.ನಾಗರಾಜ್ ಮಾತನಾಡಿ, ದೇವಾಲಯದ ರಾಜಗೋಪುರ, ಮಹಾದ್ವಾರ, ಬೆಟ್ಟದ ಮೇಲೆ ರಸ್ತೆ, ಕಾಂಪೌಂಡ್ ಕಾಮಗಾರಿ ನಡೆಸಲು 6.5 ಕೋಟಿ ರೂ.ಗಳ ಕ್ರಿಯಾ ಯೋಜನೆ ರೂಪಿಸಲಾಗಿದೆ, ಮುಜರಾಯಿ ಇಲಾಖೆ ಸಚಿವ ರಾಮಲಿಂಗಾರೆಡ್ಡಿಗೆ ಪ್ರಸ್ತಾವ ಸಲ್ಲಿಸಲಾಗಿದೆ ಎಂದರು.

ಈ ವೇಳೆ ಸಾರ್ವಜನಿಕರು ಅಭಿಪ್ರಾಯವನ್ನು ತಿಳಿಸಿ ದೇವಾಲಯದ ಆವರಣ ಸೇರಿದಂತೆ ಸುತ್ತಮುತ್ತಲಲ್ಲಿ ರಾಜಕೀಯ ವ್ಯಕ್ತಿಗಳ ಪ್ಲೆಕ್ಸ್ ಕಟ್ಟುವುದು ಬೇಡ ಇದಕ್ಕೆ ಕಡಿವಾಣ ಹಾಕಬೇಕು ಎಂದು ಸಭೆಯಲ್ಲಿ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ತಾಲ್ಲೂಕು ಪಂಚಾಯಿತಿ ಇಒ. ಹೇಮಾವತಿ,ಮುಜರಾಯಿ ಇಲಾಖೆ ತಹಶೀಲ್ದಾರ್ ಪೂರ್ಣಿಮಾ ಮುಖಂಡರಾದ ಬಂಕ್ ಮುನಿಯಪ್ಪ, ತಾದೂರು ರಘು, ರಾಯಪ್ಪಲ್ಲಿ ಅಶ್ವತ್ಥನಾರಾಯಣರೆಡ್ಡಿ,ಶ್ರೀನಿವಾಸ್ ರಡ್ಡಿ, ಮಾದೇನಹಳ್ಳಿ ರವಿ, ಶಿವಣ್ಣ,ವೆಂಕಟರೋಣಪ್ಪ, ಪಿಡಿಒ ಶ್ರೀನಿವಾಸ್ ಹಾಗು ಪಶು ವೈದ್ಯಕೀಯ ಇಲಾಖೆ ಅಧಿಕಾರಿಗಳು ಹಾಜರಿದ್ದರು.

# ಅಕ್ರಮವಾಗಿ ದಂತ ಸಾಗಾಣಿಕೆ: ಆರೋಪಿಗಳ ಬಂಧನ

**ಕೊಳ್ಳೇಗಾಲ:** ಬೈಕ್ ನಲ್ಲಿ ಅಕ್ರಮವಾಗಿ ಸುಮಾರು 13 ಕೆಜಿ. 500 ಗ್ರಾಂ. ತೂಕದ ಆನೆಯ ಎರಡು ದಂತಗಳನ್ನು ಸಾಗಾಣಿಕೆ ಮಾಡುತ್ತಿದ್ದ ಇಬ್ಬರೂ ಆರೋಪಿಗಳನ್ನು ಕೊಳ್ಳೇಗಾಲ ಪಟ್ಟಣದ ರಿಂಗ್ ರೋಡ್ ಹತ್ತಿರ ಅರಣ್ಯ ಸಂಚಾರಿದಳ ಸಿ.ಐ.ಡಿ ಪೋಲಿಸ್ ಅಧಿಕಾರಿಗಳು ಬಂದಿಸಿದ್ದಾರೆ.

ಕೊಳ್ಳೇಗಾಲ ಪಟ್ಟಣ ಮೋಳೆ ಗ್ರಾಮದ ನಿವಾಸಿಗಳಾದ ಚಂದ್ರಶೇಖರ.ಪಿ (27), ಎನ್.ಬಸವರಾಜು (36), ಇಬ್ಬರು ಬಂದಿತ ಆರೋಪಿಗಳು. ಮತ್ತೋರ್ವ ಪುಟ್ಟಸ್ವಾಮಿ (55) ಎಂಬ ಆರೋಪಿ ತಲೆಮರಿಸಿಕೊಂಡಿದ್ದಾನೆ. ಆರೋಪಿಗಳ ಮೇಲೆ ವನ್ಯಜೀವಿ ಸಂರಕ್ಷಾಣಾ ಕಾಯ್ದೆಯಡಿ ಪ್ರಕರಣ ದಾಖಲಾಗಿದೆ.

ಘಟನೆ ವಿವರ: ದಿನಾಂಕ:– 21–01–2025ರಂದು ಕೊಳ್ಳೇಗಾಲ ಮೋಳೆಯ ರಿಂಗ್ ರೋಡ್ ಹತ್ತಿರ ಕೊಳ್ಳೇಗಾಲ ಪಟ್ಟಣ ಮೋಳೆ ಗ್ರಾಮದ ನಿವಾಸಿಗಳಾದ ಚಂದ್ರಶೇಖರ ಪಿ. ಬಿನ್ ಪುಟ್ಟಸ್ವಾಮಿ ಮತ್ತು ಎನ್.ಬಸವರಾಜು ಬಿನ್ ಲೇಟ್ ನಂಜಪ್ಪಸ್ವಾಮಿ.ಡಿ ಇವರು ತಮ್ಮ ಬೈಕ್ (ಏಂ–10 ಇಂ–8701) ನಲ್ಲಿ ಗೋಣಿಚೀಲದಲ್ಲಿ ಸುಮಾರು 13. ಕೆ.ಜಿ 500 ಗ್ರಾಂ ತೂಕದ ಎರಡು ಆನೆಯ ದಂತಗಳನ್ನು ಸಾಗಾಣಿಕೆ ಮಾಡುತ್ತಿರುವ ಬಗ್ಗೆ ದೊರೆತ ಮಾಹಿತಿಗೆ ಅರಣ್ಯ ಸಂಚಾರಿ ದಳದ ಪೊಲೀಸ್ ಅಧಿಕಾರಿಗಳು ದಾಳಿ ನಡೆಸಿದ್ದಾರೆ.



ಇಬ್ಬರು ಆರೋಪಿಗಳನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದ್ದು ಎರಡು ಆನೆ ದಂತಗಳು ಹಾಗೂ ಸಾಗಾಣಿಕೆಗೆ ಬಳಸಲಾಗಿದ್ದ ಬೈಕ್ ಅನ್ನು ವಶಕ್ಕೆ ಪಡೆದುಕೊಂಡಿದ್ದು ವನ್ಯಜೀವಿ ಸಂರಕ್ಷಣಾ ಕಾಯ್ದೆಯಡಿ ಪ್ರಕರಣ ದಾಖಲಾಗಿದೆ. ಹಾಗೂ ಕೊಳ್ಳೇಗಾಲ ಪಟ್ಟಣದ ಮೋಳೆ ಗ್ರಾಮದ ನಿವಾಸಿ ಪುಟ್ಟಸ್ವಾಮಿ ಬಿನ್ ಲೇಟ್. ಜವರಶೆಟ್ಟಿ ಎಂಬ ಆರೋಪಿ ತಲೆಮರಿಸಿಕೊಂಡಿದ್ದು ಪತ್ತೆಗಾಗಿ ಮುಂದಿನ ಕ್ರಮ ಕೈಗೊಳ್ಳಲಾಗಿದೆ.

ಬೆಂಗಳೂರು ಸಿಐಡಿ ಪೊಲೀಸ್ ಅರಣ್ಯ ಘಟಕದ ಪೊಲೀಸ್ ಉಪದೀಕ್ಷಕರಾದ ವೆಂಕಟೇಶ್ ರವರ ಮಾರ್ಗದರ್ಶನದಲ್ಲಿ ನಡೆದ ಕಾರ್ಯಾಚರಣೆಯಲ್ಲಿ ಕೊಳ್ಳೇಗಾಲ ಸಿಐಡಿ ಅರಣ್ಯ ಸಂಚಾರಿ ದಳದ ಪಿ.ಎಸ್.ಐ ವಿಜಯರಾಜ್, ಹೆಡ್ ಕಾನ್ಸೇಬಲ್ಗಳಾದ ಬಸವರಾಜು, ರಾಮಚಂದ್ರ, ಜಮೀಲ್ , ಸ್ವಾಮಿ, ಲತಾ ಕಾನ್ಸೇಬಲ್ ಬಸವರಾಜು ಚಾಲಕ ಪ್ರಭಾಕರ್ ಭಾಗವಹಿಸಿದ್ದರು.

# ಗೃಹರಕ್ಷಕರು ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಿ: ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ

**ಚಾಮರಾಜನಗರ:** ಸಾರ್ವಜನಿಕ ರಕ್ಷಣೆ, ಕಾನೂನು ಸುವ್ಯವಸ್ಥೆಗೆ ಸಂಬಂಧಿಸಿದಂತೆ ಎಂತಹುದೇ ಕಠಿಣ ಪರಿಸ್ಥಿತಿಯಲ್ಲಿ ಪೊಲೀಸರಿಗೆ ನೆರವಾಗುವ ಗೃಹರಕ್ಷಕರು ತಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತ ಅವರು ತಿಳಿಸಿದರು.

ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಜಿಲ್ಲಾ ಗೃಹರಕ್ಷಕರ ದಳ ಆಯೋಜಿಸಿದ್ದ ಅಖಿಲ ಭಾರತ ಗೃಹರಕ್ಷಕ ದಳ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಯಾವುದೇ ಉತ್ಸವ, ಬಂದೋಬಸ್ತ್ ಸೇರಿದಂತೆ ಇತರೆ ಸಂದರ್ಭಗಳಲ್ಲಿ ಪೊಲೀಸರ ಮಾದರಿಯಲ್ಲಿ ಸಮವಸ್ತ್ರ ಧರಿಸಿ ಶಿಸ್ತುಬದ್ಧವಾಗಿ ಶ್ರದ್ಧೆಯಿಂದ ಕೆಲಸ ನಿರ್ವಹಿಸುವ ಗೃಹರಕ್ಷಕ ದಳವನ್ನು ಪೊಲೀಸ್ ಇಲಾಖೆಯ ಒಂದು ಭಾಗವಾಗಿ ಪರಿಗಣಿಸಲಾಗಿದೆ. ದೇಶದ ಗಡಿ ಭದ್ರತಾ ಪಡೆಯು ಅಗತ್ಯ ಸಮಯದಲ್ಲಿ ಗೃಹರಕ್ಷಕರ ಸಹಾಯ ಪಡೆಯಲಿದೆ. ಇಂತಹ ಮಹತ್ವದ ಕಾರ್ಯಗಳಲ್ಲಿ ತೊಡಗುವ ಗೃಹರಕ್ಷಕರು ಉತ್ತಮ ಆರೋಗ್ಯ ಕಾಪಾಡಿಕೊಳ್ಳಲು ಗಮನ ಹರಿಸಬೇಕು ಎಂದರು.

ಪೊಲೀಸರಂತೆ ಗೃಹರಕ್ಷಕರಿಗೂ ಒತ್ತಡಗಳಿವೆ. ಒತ್ತಡದ ಜೀವನಕ್ರಮದಿಂದ ಗೃಹರಕ್ಷಕರು ಎದೆಗುಂದದೇ ಉತ್ತಮ ಜೀವನಶೈಲಿಯನ್ನು ರೂಢಿಸಿಕೊಳ್ಳಬೇಕು. ಸದೃಢ ದೇಹದಲ್ಲಿ ಸದೃಢ ಮನಸ್ಸಿರುತ್ತದೆ. ಅದಕ್ಕಾಗಿ ದೈಹಿಕ ಆರೋಗ್ಯವನ್ನು ಸದೃಢಗೊಳಿಸಿ ದೃಢಕಾಯರಾಗಬೇಕು. ಜೊತೆಗೆ ತಮ್ಮಲ್ಲಿರುವ ಕೌಶಲ್ಯಗಳನ್ನು ವೃದ್ದಿಸಿಕೊಳ್ಳಬೇಕು. ರಾಜ್ಯದಲ್ಲಿಯೇ ಉತ್ತಮ ಕಾರ್ಯನಿರ್ವಹಣೆ ಮಾಡುವ ಮೂಲಕ ಜಿಲ್ಲೆಗೆ ಹೆಮ್ಮೆ ತರಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಬಿ.ಟಿ. ಕವಿತ ಅವರು ಗೃಹರಕ್ಷಕರಿಗೆ ಕಿವಿಮಾತು ಹೇಳಿದರು. ಗೃಹರಕ್ಷಕ ದಳ ದಿನಾಚರಣೆಯ ಪ್ರತಿಜ್ಞಾವಿಧಿ ಬೋಧಿಸಿ ಮಾತನಾಡಿದ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಎನ್. ಶಶಿಧರ್ ಅವರು ಗೃಹರಕ್ಷಕರು ಸಾರ್ವಜನಿಕ ಸೇವೆಗೆ ತಮ್ಮನ್ನು ಅರ್ಪಿಸಿಕೊಳ್ಳುವ ನಿಟ್ಟಿನಲ್ಲಿ ಪೊಲೀಸರಿಗೆ ಸಹಾಯಹಸ್ತ ಚಾಚಬೇಕು. ಕೌಟುಂಬಿಕ ಜೀವನ ಹಾಗೂ ವೈಯಕ್ತಿಕ ಆರೋಗ್ಯದ ಬಗ್ಗೆಯೂ ನಿಗಾ ವಹಿಸಬೇಕು. ಪೊಲೀಸ್ ಮಾದರಿಯಲ್ಲಿ ಉತ್ತಮ ಸೇವೆಯನ್ನು ಪರಿಗಣಿಸಿ ಗೃಹರಕ್ಷಕರಿಗೂ ವಾರ್ಷಿಕ ಪ್ರಶಸ್ತಿ ದೊರೆಯುವಂತಾಗಬೇಕು ಎಂದರು.

ಉಪವಿಭಾಗಾಧಿಕಾರಿ ಬಿ.ಆರ್. ಮಹೇಶ್ ಅವರು ಮಾತನಾಡಿ ಶಿಸ್ತುಬದ್ಧ ಸೇವಾಕಾರ್ಯಕ್ಕೆ ಹೆಸರಾಗಿರುವ ಗೃಹರಕ್ಷಕರನ್ನು ಪೊಲೀಸರಂತೆ ಗೌರವಿಸಲಾಗುತ್ತಿದೆ. ಇದಕ್ಕೆ ಗೃಹರಕ್ಷಕರ ಸಮವಸ್ತ್ರವೇ ಕಾರಣವಾಗಿದೆ. ಬಂದೋಬಸ್ತ್ ಹಾಗೂ ಪ್ರಕೃತಿ ವಿಕೋಪ ಸಮಯದಲ್ಲಿ ಗೃಹರಕ್ಷಕರ ಸೇವೆ ಅನನ್ಯವಾಗಿದೆ. ಯಾವುದೇ ಸಂದರ್ಭದಲ್ಲಿ ಎದುರಾಗುವ ಒತ್ತಡವನ್ನು ಬದಿಗೊತ್ತಿ ಕರ್ತವ್ಯನಿಷ್ಠೆ ಮೆರೆಯುವ ಗೃಹರಕ್ಷಕರ ಸಾಮಾಜಿಕ ಕಳಕಳಿ ಮಾದರಿಯಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಗೃಹರಕ್ಷಕರ ದಳ ಜಿಲ್ಲಾ ಸಮಾದೇಷ್ಟರಾದ ಎಸ್.ಜಿ. ಮಹಾಲಿಂಗಸ್ವಾಮಿ ಮಾತನಾಡಿ ಜಿಲ್ಲೆಯಲ್ಲಿ ಗೃಹರಕ್ಷಕ ದಳದ 9 ಘಟಕಗಳು ಸಾರ್ವಜನಿಕ ಸೇವಾಕಾರ್ಯದಲ್ಲಿ ಅವಿರತವಾಗಿ ಕಾರ್ಯನಿರ್ವಹಿಸುತ್ತಿವೆ. ಮುಂದಿನ ದಿನಗಳಲ್ಲಿ ಗೃಹರಕ್ಷಕ ದಳದ ಘಟಕಗಳನ್ನು ಹೆಚ್ಚು ಸುಸಜ್ಜಿತಗೊಳಿಸಲು ಶ್ರಮಿಸಲಾಗುವುದು ಎಂದರು. ಇದೇ ವೇಳೆ ನಿವೃತ್ತ ಗೃಹರಕ್ಷಕರನ್ನು ಹಾಗೂ ಗೃಹರಕ್ಷಕರ ವೃತ್ತಿಯಲ್ಲಿ ಸಾಧನೆಗೈದವರನ್ನು ಸನ್ಮಾನಿಸಲಾಯಿತು.

ಗೃಹರಕ್ಷಕ ದಳದ ಎಲ್ಲಾ ಘಟಕಾಧಿಕಾರಿಗಳು, ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.



# ರಾಮಾಪುರ ಸರ್ಕಾರಿ ಆಸ್ಪತ್ರೆ ಅಸಮರ್ಪಕ ವೈದ್ಯಕೀಯ ಸೇವೆ

**ಹನೂರು:** ತಾಲೂಕಿನ ರಾಮಪುರ ಸರ್ಕಾರಿ ಆಸ್ಪತ್ರೆಯಲ್ಲಿ ಅಸಮರ್ಪಕ ವೈದ್ಯಕೀಯ ಸೇವೆ ವೈದ್ಯರ ಕೊರತೆಯನ್ನು ಖಂಡಿಸಿ ಕರ್ನಾಟಕ ರಾಜ್ಯ ರೈತ ಸಂಘಟನೆ ಪ್ರತಿಭಟನೆ ನಡೆಸಿದರು.

ರಾಮಪುರದ ಅಡ್ಡ ರಸ್ತೆಯಿಂದ ಪ್ರತಿಭಟನಾ ಮೆರವಣಿಗೆ ಹೊರಟು ಸರ್ಕಾರಿ ಉಪ ವಿಭಾಗ ಆಸ್ಪತ್ರೆ ಮುಂದೆ ಪ್ರತಿಭಟನಾಕಾರರು ಆಗಮಿಸಿ ಸ್ಥಳಕ್ಕೆ ಜಿಲ್ಲಾ ಅರೋಗ್ಯಧಿಕಾರಿ ಬರಬೇಕು ಎಂದು ಪಟ್ಟು ಹಿಡಿದು ಪ್ರತಿಭಟಿಸಿದರು.

ಜಿಲ್ಲಾ ಉಪಾಧ್ಯಕ್ಷ ಗೌಡೇಗೌಡ ಮಾತನಾಡಿ ರಾಮಾಪುರ ಹೋಬಳಿ ಹಿಂದುಳಿದಿದ್ದು, ಅತೀ ಹೆಚ್ಚು ಗ್ರಾಮೀಣ ಪ್ರದೇಶವನ್ನ ಹೊಂದಿದ್ದು, ಸುತ್ತ ಹತ್ತೂರಿಗೆ ಒಂದೇ ಸರ್ಕಾರಿ ಆಸ್ಪತ್ರೆ ಇದ್ದು, ವೈದ್ಯರು ಒಬ್ಬರೇ ಇದ್ದಾರೆ. ಆ ವೈದ್ಯರ ಮೇಲೆ ಭ್ರಷ್ಟಾಚಾರದ ಆರೋಪ ಕೇಳಿ ಬರುತ್ತಿದ್ದು ಸಾರ್ವಜನಿಕರಿಗೆ ಸರಿಯಾದ ಆರೋಗ್ಯ ಸೇವೆ ಸಿಗುತ್ತಿಲ್ಲ ಎಂದು ಆರೋಪ ಮಾಡಿದರು.

ಬಡ ಜನರು ಹೆಚ್ಚಿನ ಚಿಕಿತ್ಸೆಗಾಗಿ ಕೊಳ್ಳೇಗಾಲ, ಚಾಮರಾಜನಗರ, ಮೈಸೂರು ಹಾಗೂ ಬೆಂಗಳೂರಿಗೆ ಹೋಗುವಂತಹ ಪರಿಸ್ಥಿತಿ ನಿರ್ಮಾಣ ವಾಗಿದೆ. ಆದ್ದರಿಂದ ರಾಜ್ಯ ಅರೋಗ್ಯ ಸಚಿವರಾದ ದಿನೇಶ್ ಗುಂಡೂರಾವ್ ರವರಿಗೆ ಜಿಲ್ಲಾ ಅರೋಗ್ಯಧಿಕಾರಿ ಮುಖಾಂತರ ಮನವಿ ಸಲ್ಲಿಸಿ, ಮನವಿಯಲ್ಲಿರುವ ಬೇಡಿಕೆಯನ್ನ ತಕ್ಷಣ ಈಡೇರಿಸ ಬೇಕೆಂದು ಕರ್ನಾಟಕ ರಾಜ್ಯ ರೈತ ಸಂಘಟನೆ ಆಗ್ರಹಿಸುತ್ತದೆ ಎಂದರು.




**ರೈತರ ಬೇಡಿಕೆಗಳು:** ಹನೂರು ತಾಲೂಕಿನ ರಾಮಾಪುರ ಸರ್ಕಾರಿ ಆಸ್ಪತ್ರೆಯನ್ನ ಮೇಲ್ದರ್ಜೆಗೇರಿಸಬೇಕು. ಸ್ತ್ರೀ ರೋಗ ತಜ್ಞರು, ಮಕ್ಕಳ ತಜ್ಞರು, ಹಾಗೂ ಸಾಮಾನ್ಯ ಕಾಯಿಲೆಯ ತಜ್ಞರನ್ನ ನೇಮಿಸಬೇಕು. ಇಅಉ ಹಾಗೂ ಫಿ ಖಚಿಥಿ ಘಟಕಗಳನ್ನ ಸ್ಥಾಪಿಸಬೇಕು. ಮಕ್ಕಳ ನಿಗಾ ಘಟಕ ಸ್ಥಾಪಿಸಬೇಕು. ಸರ್ಕಾರಿ ಆಂಬುಲೆನ್ಸ್ ವ್ಯವಸ್ಥೆ ಕಲ್ಪಿಸಬೇಕು ಎಂದು ಮನವಿ ಸಲ್ಲಿಸಿದರು.

ಸ್ಥಳಕ್ಕಾಗಮಿಸಿದ ಜಿಲ್ಲಾ ಅರೋಗ್ಯಧಿಕಾರಿ ಚಿದಂಬರ ರವರಿಗೆ ಮನವಿ ಸಲ್ಲಿಸಿ ಈ ಐದು ಬೇಡಿಕೆಯನ್ನ ಶೀಘ್ರದಲ್ಲಿ ಈಡೇರಿಸಬೇಕೆಂದು ಮನವಿ ಮಾಡಿದರು. ಅಲ್ಲದೆ ಫೆ. 15 ರಂದು ತಾಲೂಕಿನ ಮಲೆ ಮಹದೇಶ್ವರ ಬೆಟ್ಟದಲ್ಲಿ ನಡೆಯುವ ಸಚಿವ ಸಂಪುಟ ಸಭೆಯಲ್ಲಿ ಹನೂರು ತಾಲೂಕಿನ ಅಭಿವೃದ್ಧಿಗೆ ಕ್ರಮ ವಹಿಸಬೇಕು. ಇಲ್ಲದಿದ್ದಲ್ಲಿ ಮುಂದಿನ ದಿನಗಳಲ್ಲಿ ಪ್ರತಿಭಟನೆ ನಡೆಸ ಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.ಇದೇ ಸಂದರ್ಭದಲ್ಲಿ ಲೋಕೇಶ್ ಗೌಡ, ಜಿಲ್ಲಾ ಸಂಘಟನಾ ಕಾರ್ಯದರ್ಶಿ ಶಕ್ತಿವೇಲು, ಜಿಲ್ಲಾ ಸದಸ್ಯ ರವಿ ನಾಯ್ದು, ತಾಲೂಕು ಅಧ್ಯಕ್ಷ ಅಮ್ಜದ್ ಖಾನ್, ಉಪಾಧ್ಯಕ್ಷ ಪಳನಿಸ್ವಾಮಿ, ಮಹಿಳಾ ಘಟಕದ ಅಧ್ಯಕ್ಷೆ ರಾಜಮಣಿ, ಪುಂಗೋಡಿ,ಯುವ ಘಟಕದ ಅಧ್ಯಕ್ಷ ಸೂರ್ಯ, ಶಿವ ಕುಮಾರ್, ಬಸವರಾಜು, ಗೋಪಾಲ್, ವೆಂಕಟರಾಜು, ಶಿವಲಿಂಗ ಸೇರಿದಂತೆ ವಿವಿಧ ಗ್ರಾಮ ಘಟಕದ ಪದಾಧಿಕಾರಿಗಳು ಹಾಜರಿದ್ದರು.

# ವರ್ಷದಿಂದ ವರ್ಷಕ್ಕೆ ಮಳೆ ಪ್ರಮಾಣ ಕಡಿಮೆ

**ಮಾಲೂರು:** ರಾಷ್ಟ್ರದ ಅದರಲ್ಲೂ ದಕ್ಷಿಣ ಭಾರತದ ಎಲ್ಲಾ ರಾಜ್ಯಗಳಲ್ಲೂ ವರ್ಷದಿಂದ ವರ್ಷಕ್ಕೆ ಮಳೆ ಪ್ರಮಾಣ ಕಡಿಮೆಯಾಗುತ್ತಿದ್ದು, ನೀರಿಗೆ ಆಹಾಕಾರವಾಗಿದೆ. ದೇಶದ ಕನಿಷ್ಠ 550ದಶಲಕ್ಷ ಮಂದಿ ಬರದ ಪರಿಣಾಮ ಅನುಭವಿಸುತ್ತಿದ್ದಾರೆ ಎಂದು ಜನಜಾಗೃತಿವೇದಿಕೆ ಸಂಚಾಲಕ ತ್ಯಾವನಹಳ್ಳಿ ಡಾ.ಎಂ. ಗೋಪಾಲಗೌಡ ಆಗ್ರಹಿಸಿದರು.

ಪಟ್ಟಣದ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ತಹಶೀಲ್ದಾರ್ ಎಂ.ವಿ.ರೂಪ ಅವರ ಮೂಲಕ ಪ್ರದಾನಮಂತ್ರಿ ಮೋದಿ ಅವರಿಗೆ ಮನವಿ ಪತ್ರ ಸಲ್ಲಿಸುವಂತೆ ಮನವಿ ಸಲ್ಲಿಸಿದರು.

ಬರದಿಂದ ಇಡೀ ದೇಶದಲ್ಲಿ ವಾತಾವರಣ ಉಷ್ಣಾಂಶವು ಅಧಿಕವಾಗಿದೆ. ಕೃಷಿಗೆ ನೀರಿಲ್ಲದೆ ತುಂಬಾ ತೊಂದರೆಯಾಗಿದೆ. ಮುಂದಿನ ವರ್ಷಗಳಲ್ಲಿ ಹೀಗಾಗುತ್ತೆಂದು ಹಿಂದೆಯೇ ಅರಿತಿದ್ದ ಕೇಂದ್ರ ಸರ್ಕಾರದ ಮಾಜಿ ಪ್ರಧಾನಿಗಳಾದ ಮಾನ್ಯಶ್ರೀ ಅಟಲ್ ಬಿಹಾರಿ ವಾಜಪೇಯಿಯವರು ಆಗಲೇ ಆಂತರಿಕ ನದಿಗಳ – ಜೋಡಣೆ – ಗಂಗಾ – ಕಾವೇರಿ – ಬ್ರಹ್ಮಪುತ್ರ – ಕೆನ್ – ಬೇತ್ವಾದಿ ಇತ್ಯಾದಿ ನದಿಗಳ ಜೋಡಣೆ ಮಾಡಲು – ಆಗಿನ ಕೇಂದ್ರ ರೈಲ್ವೆ ಮಂತ್ರಿಗಳಾದ ಶ್ರೀ ಸುರೇಶ್ ಪ್ರಭು ರವರ ನೇತೃತ್ವದಲ್ಲಿ ಒಂದು ಸಮಿತಿ ಮಾಡಿ ಇದರ ಸಾಧಕ – ಬಾಧಕಗಳನ್ನು ಅಧ್ಯಯನ ಮಾಡಲು ನಿರ್ಧರಿಸಿತ್ತು.

ಆದರೆ ಕೆಲವೇ ವರ್ಷಗಳಲ್ಲಿ ಶ್ರೀ ವಾಜಪೇಯಿ ಸರ್ಕಾರ ಅಧಿಕಾರ ಕಳೆದುಕೊಂಡಿತು, ಈ ಕಾರ್ಯವೂ ನೆನೆಗುದಿಗೆ ಬಿದ್ದಿತು. ಈಗಿನ ತಮ್ಮ ಘನ ಸರ್ಕಾರದ ಚುನಾವಣಾ ಪ್ರಣಾಳಿಕೆಯಲ್ಲಿ ನದಿಗಳ ಜೋಡಣೆಯು ಪ್ರಮುಖ ವಿಷಯವಾಗಿತ್ತು.

ಆದುದರಿಂದ ಈ ಯೋಜನೆಯನ್ನು ತಾವು ಕೈಗೆತ್ತಿಕೊಂಡು ಆದಷ್ಟು ಬೇಗ ಕಾರ್ಯರೂಪಕ್ಕೆ ತರುವಿರೆಂಬ ಆತ್ಮವಿಶ್ವಾಸದಿಂದ ತಮ್ಮಲ್ಲಿ ಭಿನ್ನವಿಸಿಕೊಳ್ಳುತ್ತೇನೆ. ಇದರಿಂದ ದೇಶಕ್ಕೆಲ್ಲಾ ನೀರು ಹರಿದು ಮುಂದಿನ ಪೀಳಿಗೆಯ ದೇಶದ ಕೋಟ್ಯಾಂತರ ಮಂದಿಗೆ ಮತ್ತು ಜೀವರಾಶಿಗಳಿಗೆ ಜೀವ ಕೊಟ್ಟಂತ್ತಾಗುತ್ತದೆ.

ದೇಶ ಸುಭಿಕ್ಷವಾಗುವುದರಲ್ಲಿ ಸಂದೇಹವಿಲ್ಲ ಪರಿಸರ ಮಾಲಿನ್ಯವೂ ಕಡಿಮೆಯಾಗುತ್ತದೆ. ಜಾಗತಿಕ ತಾಪಮಾನವನ್ನು ಕಡಿಮೆ ಮಾಡಬಹುದು.

ಹಲವು ದಶಕಗಳಿಂದ ಇತ್ಯರ್ಥವಾಗದ ಕಾವೇರಿ ಜಲವಿವಾದ – ಮಹದಾಯಿ ಜಲವಿವಾದಗಳಿಂದಾಗುತ್ತಿರುವ ತೊಂದರೆಗಳನ್ನು ಶಾಶ್ವತವಾಗಿ ತೊಡೆದು ಹಾಕಬಹುದಲವೇ ಆತ್ಮವಿಶ್ವಾಸದಿಂದ ಮನವಿ ಸಲ್ಲಿಸುತ್ತಿರುವುದಾಗಿ ಹೇಳಿದರು.



# ಶಹಜಹಾನ್ ಉರುಸ್: ಪ್ರವಾಸಿಗರಿಗೆ ಉಚಿತ ಪ್ರವೇಶ, ಬಿಗಿ ಭದ್ರತೆ

**ಆಗ್ರಾ:** ಜನವರಿ 26, 27 ಮತ್ತು 28ರಂದು ಶಹಜಹಾನ್‌ನ ಉರುಸ್ ನಡೆಯಲಿರುವುದರಿಂದ ಈ ವೇಳೆ ಪ್ರವಾಸಿಗರಿಗೆ ತಾಜ್ ಮಹಲ್‌ಗೆ ಉಚಿತ ಪ್ರವೇಶವಿರುತ್ತದೆ. ಉಚಿತ ಅಷ್ಟೇ ಅಲ್ಲ, ಪ್ರವಾಸಿಗರು ಚಕ್ರವರ್ತಿ ಷಹಜಹಾನ್ ಮತ್ತು ಬೇಗಂ ಮುಮ್ತಾಜ್ ಅವರ ನಿಜವಾದ ಸಮಾಧಿಗಳನ್ನು ವೀಕ್ಷಿಸಬಹುದಾಗಿದೆ.

ಮೂರನೇ ದಿನ ಎಲ್ಲರಿಗೂ ಮುಕ್ತ ಪ್ರವೇಶ: ಷಹಜಹಾನ್‌ರ 3 – ದಿನದ 370ನೇ ಉರುಸ್ ಜನವರಿ 26 ರಿಂದ ಪ್ರಾರಂಭವಾಗುತ್ತದೆ. ತಾಜ್ ಮಹಲ್?ನ ನೆಲಮಾಳಿಗೆಯಲ್ಲಿರುವ ಮೊಘಲ್ ಚಕ್ರವರ್ತಿ ಷಹಜಹಾನ್ ಮತ್ತು ಅವರ ಪತ್ನಿ ಮುಮ್ತಾಜ್ ಅವರ ನಿಜವಾದ ಸಮಾಧಿಯಲ್ಲಿ ಉರುಸ್ ಆಚರಣೆಗಳು ನಡೆಯುತ್ತವೆ. ಹೂವು ಮತ್ತು ಹಿಂದೂಸ್ತಾನಿ ಬಣ್ಣದ ಬೆಡ್?ಶೀಟ್?ಗಳನ್ನ ಸಹ ಅಲ್ಲಿ ಹಾಕಲಾಗುತ್ತದೆ. ಉರುಸ್‌ನ ಮೊದಲ ಮತ್ತು ಎರಡನೇ ದಿನದಂದು, ಮಧ್ಯಾಹ್ನದಿಂದ ಯಾತ್ರಾರ್ಥಿಗಳು ಮತ್ತು ಪ್ರವಾಸಿಗರಿಗೆ ಉಚಿತ ಪ್ರವೇಶವಿದ್ದರೆ, ಮೂರನೇ ದಿನ ಸೂರ್ಯೋದಯದಿಂದ ಸೂರ್ಯಾಸ್ತದವರೆಗೆ ತಾಜ್ ಮಹಲ್‌ಗೆ ಎಲ್ಲರೂ ಮುಕ್ತವಾಗಿ ಪ್ರವೇಶಿಸಬಹುದು.

ತಾಜ್ ಮಹಲ್‌ನಲ್ಲಿ ಉರುಸ್ ಆಚರಿಸುವುದನ್ನು ಹಿಂದೂ ಮುಖಂಡರು ವಿರೋಧಿಸುತ್ತಿದ್ದಾರೆ. ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆ (ಎಎಸ್‌ಐ), ಚಕ್ರವರ್ತಿ ಶಹಜಹಾನ್ ಉರುಸ್ ಆಚರಣೆ ಸಮಿತಿ, ತಾಜ್ ಸೆಕ್ಯುರಿಟಿ ಪೊಲೀಸ್ ಮತ್ತು ಸಿಐಎಸ್‌ಎಫ್‌ನ ಅಧಿಕಾರಿಗಳು ಸಭೆ ನಡೆಸಿ ಅಲ್ಲಿ ಭದ್ರತೆ ಕೈಗೊಳ್ಳಲು ನಿರ್ಧರಿಸಿದ್ದಾರೆ.

370ನೇ ಉರುಸ್: ಮೊಘಲ್ ಚಕ್ರವರ್ತಿ ಷಹಜಹಾನ್‌ನ ಉರುಸ್ ಅನ್ನು ಪ್ರತಿ ವರ್ಷ ಹಿಜ್ರಿ ಕ್ಯಾಲೆಂಡರ್‌ನ ರಜಬ್ ತಿಂಗಳ 25, 26 ಮತ್ತು 27 ರಂದು ಆಚರಿಸಲಾಗುತ್ತದೆ. ಈ ವರ್ಷ ಉರುಸ್ ಜನವರಿ 26, 27 ಮತ್ತು 28 ರಂದು ಬಂದಿದೆ. ಈ ಅವಧಿಯಲ್ಲಿ ಚಕ್ರವರ್ತಿ ಷಹಜಹಾನ್ ಅವರ 370



ನೇ ಉರುಸ್ ಅನ್ನು ಆಚರಿಸಲಾಗುತ್ತದೆ. ಜನವರಿ 28ರಂದು ಶಹಜಹಾನ್‌ನ ಉರುಸ್‌ನ ಕೊನೆಯ ದಿನದಂದು ಕುರಾನ್ ಖ್ವಾನಿ, ಫಾತಿಹಾ ಮತ್ತು ಚಾದರ್ ಪೋಷಿಯೊಂದಿಗೆ ಕುಲ್ ಸಿಡಿಸಲಾಗುತ್ತದೆ.

ಮೊಘಲ್ ಚಕ್ರವರ್ತಿ ಷಹಜಹಾನ್‌ನ ಆಚರಣಾ ಸಮಿತಿ ಮತ್ತು ಇತರ ಸಮಿತಿಗಳು ಮತ್ತು ಎಎಸ್‌ಐ ನೌಕರರು ಮೊದಲ ದಿನದ ಮಧ್ಯಾಹ್ನ ತಾಜ್ ಮಹಲ್‌ನ ಮುಖ್ಯ ಸಮಾಧಿಯ ನೆಲಮಾಳಿಗೆಯಲ್ಲಿ ಉರುಸ್‌ನ ಎಲ್ಲ ವಿಧಿವಿಧಾನಗಳನ್ನು ನೆರವೇರಿಸಲಿದ್ದಾರೆ. ಚಕ್ರವರ್ತಿ ಶಹಜಹಾನ್ ಉರುಸ್ ಆಚರಣಾ ಸಮಿತಿ ಅಧ್ಯಕ್ಷ ಇಬ್ರಾಹಿಂ ಜೈದಿ ಮಾತನಾಡಿ, ಉರುಸ್ ಕುರಿತು ಎಎಸ್‌ಐ, ಸಿಐಎಸ್‌ಎಫ್ ಜತೆ ಸಭೆ ನಡೆಸಲಾಗಿದೆ. ಇಂದು ಸಂಜೆಯೂ ಸಭೆ ಇದೆ. ಉರುಸ್ ಸಮಯದಲ್ಲಿ ಭದ್ರತಾ ವ್ಯವಸ್ಥೆಗಳು ಉತ್ತಮವಾಗಿರಬೇಕು. ಉರುಸ್ ಸಮಯದಲ್ಲಿ ಯಾವುದೇ ಅವಘಡಗಳು ಸಂಭವಿಸದಂತೆ ಖಚಿತಪಡಿಸಿಕೊಳ್ಳಲು ಉತ್ತಮ ಭದ್ರತಾ ವ್ಯವಸ್ಥೆ ಇರುತ್ತದೆ ಎಂದು ಹೇಳಿದರು.

ಉರುಸ್‌ಗಾಗಿ ಭಾರಿ ಬಿಗಿ ಭದ್ರತೆ: 'ಷಹಜಹಾನ್ ಅವರ ಮೂರು ದಿನಗಳ ಉರುಸ್‌ಗಾಗಿ ತಾಜ್ ಮಹಲ್‌ನಲ್ಲಿ ಉತ್ತಮ ಭದ್ರತಾ ವ್ಯವಸ್ಥೆಗಳಿವೆ' ಎಂದು ಕೇಂದ್ರ ಕೈಗಾರಿಕಾ ಭದ್ರತಾ ಪಡೆಯ (ಸಿಐಎಸ್‌ಎಫ್) ಹಿರಿಯ ಕಮಾಂಡೆಂಟ್ ವಿಕೆ ದುಬೆ ಹೇಳಿದ್ದಾರೆ.

ಡ್ಯೂಟಿ ಪಾಯಿಂಟ್‌ಗಳನ್ನು ನಿಗದಿಪಡಿಸಲಾಗಿದೆ. ಪ್ರತಿ ಹಂತದಲ್ಲೂ ಹೆಚ್ಚುವರಿ ಸೈನಿಕರನ್ನು ನಿಯೋಜಿಸಲಾಗುವುದು. ಇದರೊಂದಿಗೆ ತಾಜ್ ಮಹಲ್ ಕಾಂಪ್ಲೆಕ್ಸ್‌ಗೆ ಬರುವ ಪ್ರವಾಸಿಗರು ಮತ್ತು ಯಾತ್ರಾರ್ಥಿಗಳ ಮೇಲೂ ಸಿಸಿಟಿವಿ ಕ್ಯಾಮೆರಾಗಳ ಮೂಲಕ ನಿಗಾ ಇಡಲಾಗುವುದು ಎಂದಿದ್ದಾರೆ.

ಉರುಸ್ ಸಮಯದಲ್ಲಿ ಈ ವಸ್ತುಗಳಿಗೆ ನಿಷೇಧ : ಸಿಗರೇಟ್, ಬೀಡಿ, ಗುಟ್ಕಾ, ತಂಬಾಕು, ಪಾನ್ ಮಸಾಲಾ, ಯಾವುದೇ ರೀತಿಯ ಧ್ವಜ, ಬ್ಯಾನರ್, ಪೋಸ್ಟರ್, ಬ್ಯಾಂಡ್, ಸ್ಕ್ರೂಡ್ರೈವರ್, ಲೈಟರ್, ಚಾಕು ಇತ್ಯಾದಿ ವಸ್ತುಗಳಿಗೆ ನಿಷೇಧವಿದೆ.

## ಮಹಾರಾಷ್ಟ್ರದ ಶಸ್ತ್ರಾಸ್ತ್ರ ತಯಾರಿಕಾ ಕಾರ್ಖಾನೆಯಲ್ಲಿ ಸ್ಫೋಟ: ಓರ್ವ ಸಾವು




**ಭಂಡಾರಾ:** ಮಹಾರಾಷ್ಟ್ರ ಭಂಡಾರಾದ ಶಸ್ತ್ರಾಸ್ತ್ರ ತಯಾರಿಕಾ ಕಾರ್ಖಾನೆಯಲ್ಲಿ ಸ್ಫೋಟ ಸಂಭವಿಸಿದ್ದು, ಓರ್ವ ಸಾವನ್ನಪ್ಪಿರುವ ಬಗ್ಗೆ ವರದಿಯಾಗಿದೆ. ಇಲ್ಲಿನ ಜವಾಹರ್ ನಗರ ಪ್ರದೇಶದಲ್ಲಿರು ಕಾರ್ಖಾನೆಯಲ್ಲಿ ಶುಕ್ರವಾರ ಬೆಳಗ್ಗೆ 10.30ರ ಸಮಾರಿಗೆ ಎಲ್‌ಟಿಪಿ ವಿಭಾಗದಲ್ಲಿ ಈ ಸ್ಫೋಟ ಸಂಭವಿಸಿದೆ ಎಂದು ಜಿಲ್ಲಾಧಿಕಾರಿ ಸಂಜಯ್ ಕೊಲ್ಟೆ ತಿಳಿಸಿದ್ದಾರೆ.

ಸದ್ಯ ರಕ್ಷಣಾ ಕಾರ್ಯ ಸಾಗಿದ್ದು, 10 ಮಂದಿಯನ್ನು ರಕ್ಷಿಸಲಾಗಿದೆ. ಈ ಸ್ಫೋಟ ಸಂಭವಿಸಿದ ಸಂದರ್ಭದಲ್ಲಿ 14 ಉದ್ಯೋಗಿಗಳು ಕಾರ್ಯ ನಿರ್ವಹಿಸುತ್ತಿದ್ದರು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ಜೈಪುರ: ಮತ್ತೆರಡು ಹೆಚ್‌ಎಂಪಿವಿ ಪ್ರಕರಣ ಪತ್ತೆ

**ಜೈಪುರ:** ದೇಶದಲ್ಲಿ ಹೆಚ್‌ಎಂಪಿವಿ ಪ್ರಕರಣಗಳು ಮತ್ತಷ್ಟು ಹೆಚ್ಚುತ್ತಿವೆ. ರಾಜಸ್ಥಾನದ ರಾಜಧಾನಿ ಜೈಪುರದ ಸವಾಯಿ ಮಾನ್ಸಿಂಗ್ ಆಸ್ಪತ್ರೆಯಲ್ಲಿ ಗುರುವಾರ ಎರಡು ಹೊಸ ಪ್ರಕರಣಗಳು ವರದಿಯಾಗಿವೆ. ಇಬ್ಬರೂ ರೋಗಿಗಳನ್ನು ವೈದ್ಯಕೀಯ ನಿಗಾದಲ್ಲಿ ಇರಿಸಲಾಗಿದೆ.

ಈ ವಿಷಯಕ್ಕೆ ಸಂಬಂಧಿಸಿದಂತೆ ಸವಾಯಿ ಮಾನ್ಸಿಂಗ್ ವೈದ್ಯಕೀಯ ಕಾಲೇಜಿನ ಪ್ರಾಂಶುಪಾಲ ಡಾ. ದೀಪಕ್ ಮಹೇಶ್ವರಿ ಅವರು ಮಾಹಿತಿ ನೀಡಿದ್ದು, ಊಒಕಗಿ ಲಕ್ಷಣಗಳುಳ್ಳ ಎರಡು ಪ್ರಕರಣಗಳು ಪತ್ತೆಯಾಗಿವೆ. ಇಬ್ಬರನ್ನೂ ನಿಗಾ ಘಟಕದಲ್ಲಿ ಇರಿಸಲಾಗಿದೆ. ಸದ್ಯ ಅವರ ಸ್ಥಿತಿ ಸ್ಥಿರವಾಗಿದೆ. ಇದೇ ಮೊದಲ ಬಾರಿಗೆ ವಯಸ್ಕರಲ್ಲಿ ಊಒಕಗಿ ಲಕ್ಷಣಗಳು ಕಂಡುಬಂದಿದೆ. ಇದಕ್ಕೂ ಮೊದಲು, ಈ ವೈರಸ್‌ನ ಲಕ್ಷಣಗಳು ಇಬ್ಬರು ಮಕ್ಕಳಲ್ಲಿ ಕಂಡುಬಂದಿತ್ತು ಎಂದು ಹೇಳಿದ್ದಾರೆ.



ಕೇಂದ್ರ ಆರೋಗ್ಯ ಸಚಿವಾಲಯವು ಊಒಕಗಿ ಕುರಿತು ಮಾರ್ಗಸೂಚಿ ಬಿಡುಗಡೆ ಮಾಡಿತ್ತು. ಅದರ ನಂತರ ರಾಜ್ಯದ ವೈದ್ಯಕೀಯ ಇಲಾಖೆಯೂ ಎಚ್ಚರಿಕೆ ವಹಿಸಿತ್ತು. ಚಿಕಿತ್ಸೆಗೆ ಯಾವುದೇ ನಿರ್ದಿಷ್ಟ ಔಷಧ ಲಭ್ಯವಿಲ್ಲ. ರೋಗಿಗಳ ಲಭ್ಯವಿರುವ ಚಿಕಿತ್ಸೆ ನೀಡಲಾಗುತ್ತಿದೆ ಎಂದು ವೈದ್ಯರು ತಿಳಿಸಿದ್ದಾರೆ.

ಕೋವಿಡ್ ಮಾದರಿ ಲಕ್ಷಣಗಳು: ಊಒಕಗಿ ವೈರಸ್ ಮಕ್ಕಳಿಂದ ಹಿಡಿದು 60 ವರ್ಷಕ್ಕಿಂತ ಮೇಲ್ಪಟ್ಟ ಜನರ ಮೇಲೂ ಪರಿಣಾಮ ಬೀರುತ್ತಿದೆ. ಈ ವೈರಸ್ ಸೋಂಕಿಗೆ ಒಳಗಾದ ನಂತರ, ರೋಗಿಯು ಕೋವಿಡ್ ಮಾದರಿಯ ಲಕ್ಷಣಗಳಿವೆ. ವೈರಸ್ ಸೋಕಿದ ಬಳಿಕ ಶೀತ, ಕೆಮ್ಮು, ಜ್ವರ ಮತ್ತು ಗಂಟಲು ನೋವು, ಉಸಿರಾಟದ ತೊಂದರೆ, ನ್ಯುಮೋನಿಯಾ, ದೇಹದ ಮೇಲೆ ದದ್ದುಗಳು ಕಾಣಿಸಿಕೊಳ್ಳುತ್ತವೆ ಎಂದು ವೈದ್ಯರು ಹೇಳಿದ್ದಾರೆ.

ವೈರಸ್ ತಡೆಯುವುದು ಹೇಗೆ: ಕೊರೊನಾ ಸಮಯದಲ್ಲಿ ಅನುಸರಿಸಿದ ನಿಯಮಗಳನ್ನು ಈ ವೈರಸ್‌ಗೂ ಪಾಲಿಸಬೇಕು ಎಂದು ವೈದ್ಯರು ಸಲಹೆ ನೀಡುತ್ತಾರೆ. ಮಾಸ್ಕ್ ಮತ್ತು ಸ್ಯಾನಿಟೈಸರ್ ಬಳಸಿ. ಅನಾರೋಗ್ಯಕ್ಕೀಡಾದರೆ, ಇತರರ ಜೊತೆ ಬೆರೆಯಬೇಡಿ. ಸಾರ್ವಜನಿಕ ಸ್ಥಳಗಳಲ್ಲಿ ಮಾಸ್ಕ್ ಬಳಸಿ. ಜನದಟ್ಟಣೆ ಸ್ಥಳಗಳಿಂದ ದೂರವಿರಿ. ಶೀತ ಬಂದರೆ ಶೀತ ಮತ್ತು ಜ್ವರದ ಲಕ್ಷಣಗಳು ಕಂಡುಬಂದರೆ ತಕ್ಷಣ ವೈದ್ಯರನ್ನು ಸಂಪರ್ಕಿಸಿ.

# ಜ.26, 27ರಂದು ವಿದೇಶಾಂಗ ಕಾರ್ಯದರ್ಶಿ ಮಿಸ್ರಿ ಬೀಜಿಂಗ್ ಭೇಟಿ: ದ್ವಿಪಕ್ಷೀಯ ಮಾತುಕತೆ ಪುನಾರಂಭ

ನವದೆಹಲಿ: ಭಾರತ ಮತ್ತು ಚೀನಾ ನಡುವಿನ ವಿದೇಶಾಂಗ ಕಾರ್ಯದರ್ಶಿ–ಉಪ ಸಚಿವರ ಕಾರ್ಯವಿಧಾನದ ಸಭೆಯಲ್ಲಿ ಭಾಗವಹಿಸಲು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಜನವರಿ 26–27ರಂದು ಬೀಜಿಂಗ್‌ಗೆ ಭೇಟಿ ನೀಡಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ಪ್ರಕಟಿಸಿದೆ.

"ರಾಜಕೀಯ, ಆರ್ಥಿಕ ಮತ್ತು ಜನರ ನಡುವಿನ ವಿಷಯಗಳು ಸೇರಿದಂತೆ ಭಾರತ–ಚೀನಾ ಸಂಬಂಧಗಳ ಮುಂದಿನ ಹಂತಗಳನ್ನು ಚರ್ಚಿಸಲು ನಾಯಕತ್ವ ಮಟ್ಟದಲ್ಲಾದ ಒಪ್ಪಂದದ ಅನ್ವಯ ಈ ದ್ವಿಪಕ್ಷೀಯ ಕಾರ್ಯವಿಧಾನವು ಪುನರಾರಂಭಗೊಳ್ಳುತ್ತಿದೆ" ಎಂದು ಎಂಇಎ ಬಿಡುಗಡೆ ಮಾಡಿದ ಹೇಳಿಕೆಯಲ್ಲಿ ತಿಳಿಸಲಾಗಿದೆ.



ಕಳೆದ ತಿಂಗಳು ರಾಷ್ಟ್ರೀಯ ಭದ್ರತಾ ಸಲಹೆಗಾರ (ಎನ್‌ಎಸ್‌ಎ) ಅಜಿತ್ ದೋವಲ್ ಚೀನಾದ ಉಪಾಧ್ಯಕ್ಷ ಹಾನ್ ಜೆಂಗ್ ಅವರನ್ನು ಭೇಟಿ ಮಾಡಲು ಬೀಜಿಂಗ್‌ಗೆ ಪ್ರಯಾಣಿಸಿದ್ದರು.

ಅಂದಿನ ಸಭೆಯಲ್ಲಿ ಎನ್‌ಎಸ್‌ಎ ದೋವಲ್ ಅವರು ಐದು ವರ್ಷಗಳ ಅಂತರದ ನಂತರ ಗಡಿ ಪ್ರಶ್ನೆಗಾಗಿ ಉಭಯ ದೇಶಗಳ ವಿಶೇಷ ಪ್ರತಿನಿಧಿಗಳ ನಡುವಿನ ಸಭೆಯನ್ನು ಪುನರಾರಂಭಿಸುವುದು ಉಭಯ ದೇಶಗಳ ನಾಯಕರು ತಲುಪಿದ ಒಮ್ಮತವನ್ನು ಕಾರ್ಯಗತಗೊಳಿಸುವ ಪ್ರಮುಖ ಕ್ರಮವಾಗಿದೆ ಮತ್ತು ಇದು ದ್ವಿಪಕ್ಷೀಯ ಸಂಬಂಧಗಳನ್ನು ಉತ್ತಮಗೊಳಿಸುವಲ್ಲಿ ಬಹಳ ಮಹತ್ವದ್ದಾಗಿದೆ ಎಂದು ಒತ್ತಿ ಹೇಳಿದರು.

ಕೈಲಾಸ ಮಾನಸ ಸರೋವರ ಯಾತ್ರೆ ಪುನಾರಂಭಕ್ಕೆ ವೇದಿಕೆ: ಕೈಲಾಸ ಮಾನಸ ಸರೋವರ ಯಾತ್ರೆಯನ್ನು ಪುನರಾರಂಭಿಸುವುದು, ಗಡಿಯಾಚೆಗಿನ ನದಿಗಳು ಮತ್ತು ಗಡಿ ವ್ಯಾಪಾರದ ದತ್ತಾಂಶ ಹಂಚಿಕೆ ಸೇರಿದಂತೆ ಗಡಿಯಾಚೆಗಿನ ಸಹಕಾರ ಮತ್ತು ವಿನಿಮಯಕ್ಕೆ ಸಕಾರಾತ್ಮಕ ನಿರ್ದೇಶನಗಳನ್ನು ನೀಡಲು ಎನ್‌ಎಸ್‌ಎ ದೋವಲ್ ಮತ್ತು ಚೀನಾದ ವಿದೇಶಾಂಗ ವ್ಯವಹಾರಗಳ ಸಚಿವ ವಾಂಗ್ ಯಿ ಭಾಗವಹಿಸಿದ್ದ ಭಾರತ ಮತ್ತು ಚೀನಾದ ವಿಶೇಷ ಪ್ರತಿನಿಧಿಗಳ (ಎಸ್‌ಆರ್) 23 ನೇ ಸಭೆಯಲ್ಲಿ ಎರಡೂ ದೇಶಗಳು ನಿರ್ಧರಿಸಿದ್ದವು.

ಭಾರತ–ಚೀನಾ ಸಂಬಂಧಗಳು ಸಕಾರಾತ್ಮಕ ಪಥಕ್ಕೆ ಮರಳಬೇಕಾದರೆ ಮತ್ತು ಸುಸ್ಥಿರವಾಗಿ ಉಳಿಯಬೇಕಾದರೆ ಪರಸ್ಪರ ನಂಬಿಕೆ, ಗೌರವ ಮತ್ತು ಸೂಕ್ಷ್ಮತೆ ಎಂಬ ಮೂರು ಪರಸ್ಪರ ಅಂಶಗಳನ್ನು ಆಧರಿಸಿರಬೇಕು ಎಂದು ಪಿಎಂ ಮೋದಿ ಚೀನಾದ ಅಧ್ಯಕ್ಷರಿಗೆ ತಿಳಿಸಿದ್ದರು.

"ಕಳೆದ ನಾಲ್ಕು ವರ್ಷಗಳಲ್ಲಿ ಭಾರತ – ಚೀನಾ ಗಡಿಯಲ್ಲಿ ಉದ್ಭವಿಸಿರುವ ಪರಿಸ್ಥಿತಿಗಳ ಬಗ್ಗೆ ಒಮ್ಮತ ಮೂಡಿರುವುದನ್ನು ನಾವು ಸ್ವಾಗತಿಸುತ್ತೇವೆ. ಗಡಿಯಲ್ಲಿ ಶಾಂತಿ ಮತ್ತು ಸ್ಥಿರತೆಯನ್ನು ಕಾಪಾಡಿಕೊಳ್ಳುವುದು ನಮ್ಮ ಮೊದಲ ಆದ್ಯತೆಯಾಗಿರಬೇಕು. ಪರಸ್ಪರ ನಂಬಿಕೆ, ಪರಸ್ಪರ ಗೌರವ ಮತ್ತು ಪರಸ್ಪರ ಸೂಕ್ಷ್ಮತೆ ನಮ್ಮ ಸಂಬಂಧಗಳ ಆಧಾರವಾಗಿದೆ " ಎಂದು ಕ್ಸಿ ಜಿನ್ ಪಿಂಗ್ ಅವರೊಂದಿಗಿನ ಮಹತ್ವದ ದ್ವಿಪಕ್ಷೀಯ ಸಭೆಯ ನಂತರ ಪ್ರಧಾನಿ ಮೋದಿ ಹೇಳಿದ್ದರು.

## ಮೋದಿ–ಕೇಜ್ರಿವಾಲ್ ಒಂದೇ ನಾಣ್ಯದ ಎರಡು ಮುಖ: ಓವೈಸಿ

**ನವದೆಹಲಿ:** ಎಎಪಿ ರಾಷ್ಟ್ರೀಯ ಸಂಚಾಲಕ ಅರವಿಂದ್ ಕೇಜ್ರಿವಾಲ್ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರು ಒಂದೇ ನಾಣ್ಯದ ಎರಡು ಮುಖವಿದ್ದಂತೆ. ಅವರಲ್ಲಿ ಹೆಚ್ಚಿನ ವ್ಯತ್ಯಾಸವಿಲ್ಲ ಎಂದು ಎಐಎಂಐಎಂ ಅಧ್ಯಕ್ಷ ಅಸಾಸುದ್ದೀನ್ ಓವೈಸಿ ತಿಳಿಸಿದ್ದಾರೆ.

ಮೋದಿ ಮತ್ತು ಕೇಜ್ರಿವಾಲ್ ಸಹೋದರರಿದ್ದಂತೆ, ಒಂದೇ ನಾಣ್ಯದ ಎರಡು ಮುಖ. ಇಬ್ಬರು ಆರ್‌ಎಸ್‌ಎಸ್ ತತ್ವ ಹೊಂದಿರುವವರು. ಒಬ್ಬರು ಶಾಖೆಯಿಂದ ಬಂದರೆ, ಮತ್ತೊಬ್ಬರು ಅದರ ಸಂಸ್ಥೆಯಿಂದ ಹೊರ ಬಂದಿರುವವರು ಎಂದು ಚುನಾವಣಾ ಪ್ರಚಾರದಲ್ಲಿ ಓವೈಸಿ ವಾಗ್ದಾಳಿ ನಡೆಸಿದರು.

ಓಕ್ಲಾದ ತಮ್ಮ ಪಕ್ಷದ ಅಭ್ಯರ್ಥಿ ಶಿಫ–ಉರ್–ರೆಹಮಾನ್ ಪರ ಪ್ರಚಾರ ನಡೆಸಿದ ಬಳಿಕ ಶಹೀನ್ ಬಾಗ್‌ನಲ್ಲಿ ಪಾದಯಾತ್ರೆ ನಡೆಸಿದರು. ಚುನಾವಣೆಯಲ್ಲಿ ಜನರು ಗಾಳಿಪಟದ ಗುರುತಿಗೆ ಮತ ಹಾಕಬೇಕು ಎಂದು ಮನವಿ ಮಾಡಿದರು.

ದೆಹಲಿ ಚುನಾವಣೆಗೆ ಎಐಎಂಐಎಂ ಪಕ್ಷದಿಂದ ಇಬ್ಬರು ಅಭ್ಯರ್ಥಿಗಳನ್ನು ಕಣಕ್ಕೆ ಇಳಿಸಲಾಗಿದ್ದು, ಮುಸ್ತಾಫಾಬಾದ್‌ನಿಂದ ತಹೀರ್ ಹುಸೇನ್ ಮತ್ತು ಓಕ್ಲಾದಿಂದ ಶಿಫ–ಉರ್–ರೆಹಮಾನ್ ಕಣದಲ್ಲಿದ್ದಾರೆ. ಈ ಇಬ್ಬರು ಅಭ್ಯರ್ಥಿಗಳು ಪ್ರಸ್ತುತ ದೆಹಲಿ ಗಲಭೆ ಪ್ರಕರಣದಲ್ಲಿ ಜೈಲಿನಲ್ಲಿದ್ದಾರೆ. ತಹೀರ್ ಹುಸೇನ್ ಎಎಪಿ ಕೌನ್ಸಿಲರ್ ಆದ ಸಂದರ್ಭದಲ್ಲಿ ಜೈಲು ಸೇರಿದ್ದರು. ಇವರು ಕಳೆದ ಡಿಸೆಂಬರ್‌ನಲ್ಲಿ ಎಐಎಂಐಎಂ ಸೇರಿದ್ದರು.

ತಹೀರ್ ಹುಸೇನ್ ಮತ್ತು ಶಿಫ–ಉರ್–ರೆಹಮಾನ್ ಕಳೆದ ಐದು ವರ್ಷದಿಂದ ಇಲ್ಲಿಯವರೆಗೂ ಜೈಲಿನಲ್ಲೇ ಇದ್ದಾರೆ. ಆದರೆ, ಮದ್ಯ ನೀತಿ ಪ್ರಕರಣದಲ್ಲಿ ಕೇಜ್ರಿವಾಲ್, ಸಿಸೋಡಿಯಾ ಮತ್ತು ಸಂಜಯ್ ಸಿಂಗ್ ಅವರಿಗೆ ಹೇಗೆ ಜಾಮೀನು ದೊರಕಿತು ಎಂದು ಪ್ರಶ್ನಿಸಿದರು. ಇನ್ನು ಜೈಲಿನಲ್ಲೇ ಇರುವ ಅವರ ತಪ್ಪಾದರೂ ಏನು ಎಂದರು.

ಓಕ್ಲಾ ಕ್ಷೇತ್ರದಲ್ಲಿ ಅಭಿವೃದ್ಧಿ ಕೊರತೆ ವಿರುದ್ಧ ಟೀಕಿಸಿದ ಅವರು, ಇತರೆ ಕ್ಷೇತ್ರದಲ್ಲಿ ಅಭಿವೃದ್ಧಿಯಾಗಿದ್ದು, ಓಕ್ಲಾವನ್ನು ಕಸದ ರಾಶಿಯಾಗಿ ಎಎಪಿ ಸರ್ಕಾರ ಮಾಡಿದೆ ಎಂದು ವಾಗ್ದಾಳಿ ನಡೆಸಿರು. ಈ ಕ್ಷೇತ್ರದಲ್ಲಿ ಬಿಜೆಪಿ ಗೆಲುವು ಅಸಾಧ್ಯ ಎಂದರು.

## ವಾಂಖೆಡೆ ಸ್ಟೇಡಿಯಂನ 50ನೇ ವರ್ಷಾಚರಣೆ



**ಮುಂಬೈ:** ಇಲ್ಲಿನ ವಾಂಖೆಡೆ ಕ್ರೀಡಾಂಗಣದ 50ನೇ ವಾರ್ಷಿಕೋತ್ಸವದ ಆಚರಣೆ ಭಾಗವಾಗಿ ಮುಂಬೈ ಕ್ರಿಕೆಟ್ ಅಸೋಸಿಯೇಷನ್ (ಎಂಸಿಎ) ಗುರುವಾರ ಸ್ಟೇಡಿಯಂನಲ್ಲಿ 'ಅತಿದೊಡ್ಡ ಕ್ರಿಕೆಟ್ ಬಾಲ್ ವಾಕ್ಯ' ರಚಿಸಿ ಗಿನ್ನೆಸ್ ವಿಶ್ವ ದಾಖಲೆ ಮಾಡುವ ಮೂಲಕ ತನ್ನ ರೋಮಾಂಚಕ ಇತಿಹಾಸದಲ್ಲಿ ಮತ್ತೊಂದು ಮಹತ್ವದ ಅಧ್ಯಾಯ ಸೇರಿಸಿದೆ.

ವಾಂಖೆಡೆ ಕ್ರೀಡಾಂಗಣದಲ್ಲಿ 1975ರಲ್ಲಿ ಆಡಿದ ಕ್ರೀಡಾಂಗಣದ ಮೊದಲ ಅಂತಾರಾಷ್ಟ್ರೀಯ ಪಂದ್ಯದ ವಾರ್ಷಿಕೋತ್ಸವದಂದು ಈ ದಾಖಲೆಯನ್ನು ರಚಿಸಲಾಯಿತು. 1975 ರ ಜನವರಿ 23ರಿಂದ 29 ರವರೆಗೆ ಇಲ್ಲಿ ಆಡಲಾದ ಮೊದಲ ಅಂತಾರಾಷ್ಟ್ರೀಯ ಸ್ಮರಣೀಯ ಟೆಸ್ಟ್ ಪಂದ್ಯದಲ್ಲಿ ಭಾರತವು ವೆಸ್ಟ್ ಇಂಡೀಸ್ ಅನ್ನು ಎದುರಿಸಿತ್ತು.

ಎಂಸಿಎ ಈ ದಾಖಲೆಯನ್ನು ಆ ಪಂದ್ಯದಲ್ಲಿ ಶತಕ ಗಳಿಸಿದ ದಿವಂಗತ ಏಕನಾಥ್ ಸೋಲ್ಕರ್ ಮತ್ತು ಕ್ರೀಡೆಗೆ ಅಸಾಧಾರಣ ಕೊಡುಗೆಗಳನ್ನು ನೀಡಿದ ಮುಂಬೈನ ಇತರ ಅಗಲಿದ ಆಟಗಾರರಿಗೆ ಅರ್ಪಿಸಿದೆ.

Fifty Years of Wankhede Stadium ಎಂಬ ಇಂಗ್ಲಿಷ್ ವಾಕ್ಯವನ್ನು 14,505 ಲೆದರ್ ಬಾಲ್‌ಗಳನ್ನು ಬಳಸಿ ಬರೆಯುವ ಮೂಲಕ ಎಂಸಿಎ ವಿಶಿಷ್ಟ ಗಿನೆಸ್ ದಾಖಲೆಯನ್ನು ಬರೆದಿದೆ. ಎಂಸಿಎ ಅಧ್ಯಕ್ಷ ಅಜಿಂಕ್ಯ ನಾಯಕ್ ಮತ್ತು ಪದಾಧಿಕಾರಿಗಳು ಮತ್ತು ಅಪೆಕ್ಸ್ ಕೌನ್ಸಿಲ್ ಸದಸ್ಯರು ಈ ಸಂದರ್ಭದಲ್ಲಿ ಹಾಜರಿದ್ದರು.

## ವಂದೇ ಭಾರತ್ ರೈಲಿನ ಬಗ್ಗೆ ಹಲವು ದೇಶಗಳು ಆಸಕ್ತಿ: ಸಚಿವ ಅಶ್ವಿನಿ ವೈಷ್ಣವ್

**ದಾವೋಸ್:** ದಾವೋಸ್‌ನಲ್ಲಿ ನಡೆದ ವಿಶ್ವ ಆರ್ಥಿಕ ವೇದಿಕೆ (ಫಇಈ) ಸಂದರ್ಭದಲ್ಲಿ ಮಾತನಾಡಿದ ಕೇಂದ್ರ ಸಚಿವ ಅಶ್ವಿನಿ ವೈಷ್ಣವ್, ಹಲವು ದೇಶಗಳು ವಂದೇ ಭಾರತ್‌ನಲ್ಲಿ ಆಸಕ್ತಿ ತೋರಿಸಿವೆ ಎಂದಿದ್ದಾರೆ.

ವಿಶ್ವ ಆರ್ಥಿಕ ವೇದಿಕೆ ಸಭೆಯಲ್ಲಿ ಭಾರತದ ನಿಯೋಗದ ಭಾಗವಾಗಿ ದಾವೋಸ್‌ನಲ್ಲಿ ಭಾಗವಹಿಸಿರುವ ಕೇಂದ್ರ ಸಚಿವ ಅಶ್ವಿನಿ ವೈಷ್ಣವ್, ಭಾರತದಿಂದ ಅರೆ–ಹೈ–ಸ್ಪೀಡ್ ವಂದೇ ಭಾರತ್ ರೈಲುಗಳನ್ನು ಆಮದು ಮಾಡಿಕೊಳ್ಳಲು ಅನೇಕ ದೇಶಗಳು ಆಸಕ್ತಿ ತೋರಿಸಿವೆ ಎಂದು ಹೇಳಿದ್ದಾರೆ. ದಾವೋಸ್‌ನಲ್ಲಿರುವ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್, ಸೆಮಿಕಂಡಕ್ಟರ್‌ಗಳು, ಆಹಾರ ಸಂಸ್ಕರಣೆ, ಕೈಗಾರಿಕಾ ಸರಕುಗಳು, ಬಂಡವಾಳ ಸರಕುಗಳು ಮತ್ತು ಶುದ್ಧ ಇಂಧನದಂತಹ ಕ್ಷೇತ್ರಗಳಲ್ಲಿ ಬೇರೆ ದೇಶಗಳು ಭಾರತದಲ್ಲಿ ಹೂಡಿಕೆ ಮಾಡಲು ಹೆಚ್ಚಿನ ಆಸಕ್ತಿ ತೋರುತ್ತಿವೆ ಎಂದು ಹೇಳಿದ್ದಾರೆ.

ಭಾರತೀಯ ರೈಲ್ವೆ ಭಾರತದ ಮೊದಲ ಸ್ಥಳೀಯ ಅರೆ–ಹೈ–ಸ್ಪೀಡ್ ರೈಲು ವಂದೇ ಭಾರತ್ ಎಕ್ಸ್‌ಪ್ರೆಸ್ ಅನ್ನು ಪ್ರಾರಂಭಿಸಿತು. ಇದನ್ನು 'ಮೇಕ್ ಇನ್ ಇಂಡಿಯಾ' ಯೋಜನೆಯ ಯಶಸ್ಸಿನ ಕಥೆ ಎಂದು ಪರಿಗಣಿಸಲಾಗಿದೆ. ಮೊದಲ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲನ್ನು 2019ರ ಫೆಬ್ರವರಿ 15ರಂದು ನವದೆಹಲಿ–ಕಾನ್ಪುರ್–



ಅಲಹಾಬಾದ್–ವಾರಣಾಸಿ ಮಾರ್ಗದಲ್ಲಿ ಗಂಟೆಗೆ 160 ಕಿಲೋಮೀಟರ್ ವೇಗದಲ್ಲಿ ಚಲಿಸುವ ಮೂಲಕ ಆರಂಭಿಸಲಾಯಿತು.

2022–23ರ ಆರ್ಥಿಕ ವರ್ಷದಲ್ಲಿ ವಂದೇ ಭಾರತ್ ರೈಲುಗಳಲ್ಲಿ ಪ್ರಯಾಣಿಸಲು ಸುಮಾರು 31.84 ಲಕ್ಷ ಜನ ಬುಕ್ ಮಾಡಿದ್ದಾರೆ. ಈ ಅವಧಿಯಲ್ಲಿ ವಂದೇ ಭಾರತ್ ರೈಲುಗಳ ಒಟ್ಟಾರೆ ಆಕ್ಯುಪೆನ್ಸಿ ಶೇ. 96.62ರಷ್ಟಿದೆ. ವಂದೇ ಭಾರತ್ ರೈಲುಗಳು ಉನ್ನತ ಶ್ರೇಣಿಯ ಸೌಲಭ್ಯಗಳನ್ನು ಹೊಂದಿವೆ. ಉದಾಹರಣೆಗೆ ಕವಚ ತಂತ್ರಜ್ಞಾನ, ದಿವ್ಯಾಂಗರಿಗೆ ಪ್ರವೇಶಿಸಬಹುದಾದ ಶೌಚಾಲಯಗಳು ಮತ್ತು ಸಂಯೋಜಿತ ಬ್ರೈಲ್ ಚಿಹ್ನೆಗಳು ಇತ್ಯಾದಿ.

ಭಾರತದಲ್ಲಿ 4 ಹೊಸ ರೀತಿಯ ರೈಲುಗಳಿವೆ. ವಂದೇ ಭಾರತ್ ಚೇರ್ ಕಾರ್, ವಂದೇ ಭಾರತ್ ಸ್ಲೀಪರ್, ನಮೋ ಭಾರತ್ ರೈಲು ಮತ್ತು ಅಮೃತ್ ಭಾರತ್ ರೈಲು. ವಂದೇ ಭಾರತ್ ಸ್ಲೀಪರ್‌ನ ಪರೀಕ್ಷೆಯು ಬಹುತೇಕ ಪೂರ್ಣಗೊಂಡಿದೆ ಮತ್ತು ಇಂಟಿಗ್ರಲ್ ಕೋಚ್ ಫ್ಯಾಕ್ಟರಿಯಲ್ಲಿ ನಿಜವಾದ ಉತ್ಪಾದನೆಗೆ ಮುಂಚಿತವಾಗಿ ಡೇಟಾವನ್ನು ವಿಶ್ಲೇಷಿಸಲಾಗುತ್ತಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಹೇಳಿದರು.

ಈ ವೇಳೆ ಸಚಿವ ಅಶ್ವಿನಿ ವೈಷ್ಣವ್ ಅಭಿವೃದ್ಧಿ ಹೊಂದಿದ ರಾಷ್ಟ್ರವಾಗಲು ಕೇಂದ್ರ ಸರ್ಕಾರ ರೂಪಿಸಿದ ಕಾರ್ಯತಂತ್ರದ 4 ಸ್ತಂಭಗಳನ್ನು ಪಟ್ಟಿ ಮಾಡಿದರು. ಭಾರತವು ಪ್ರಸ್ತುತ ಉತ್ತಮ ಚಿಂತನೆಯ ಆರ್ಥಿಕ ಕಾರ್ಯತಂತ್ರವನ್ನು ಹೊಂದಿದೆ. ಈ ಕಾರ್ಯತಂತ್ರವು 4 ಸ್ತಂಭಗಳನ್ನು ಆಧರಿಸಿದೆ. ಸಾಮಾಜಿಕ ಮತ್ತು ಭೌತಿಕ ಮೂಲಸೌಕರ್ಯದಲ್ಲಿ ಸಾರ್ವಜನಿಕ ಹೂಡಿಕೆ, ತಂತ್ರಜ್ಞಾನ ಉತ್ಪಾದನೆ ಮತ್ತು ನಾವೀನ್ಯತೆಯ ಮೇಲೆ ಕೇಂದ್ರೀಕರಿಸುವುದು, ಅಂತರ್ಗತ ಬೆಳವಣಿಗೆ ಮತ್ತು ಸರಳೀಕರಣ ಇವೇ ಆ 4 ಸ್ತಂಭಗಳು ಎಂದು ಅಶ್ವಿನಿ ವೈಷ್ಣವ್ ಹೇಳಿದ್ದಾರೆ.

"ನಾವು ಸಾರ್ವಜನಿಕ ಹೂಡಿಕೆಯನ್ನು ನೋಡಿದಾಗ 2021ರ ಬಜೆಟ್, ನಾವು ಸುಮಾರು 40 ಬಿಲಿಯನ್ ಯುಎಸ್ ಡಾಲರ್‌ಗಳಿಂದ ಪ್ರಾರಂಭಿಸಿ ನಂತರ ಅದನ್ನು 60, 80, 100 ಕ್ಕೆ ಹೆಚ್ಚಿಸಿದ್ದೇವೆ. ಈ ವರ್ಷ (2023–24) ಬಜೆಟ್ ಸುಮಾರು 145 ಯುಎಸ್ ಡಾಲರ್‌ಗಳಷ್ಟಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ.

# ಶ್ರೀಕ್ಷೇತ್ರ ಮಲೆ ಮಹದೇಶ್ವರ ಬೆಟ್ಟದ ಹುಂಡಿಯಲ್ಲಿ ಎರಡು ಕೋಟಿ ಸಂಗ್ರಹ

**ಚಾಮರಾಜನಗರ:** ಜಿಲ್ಲೆಯ ಹನೂರು ತಾಲ್ಲೂಕಿನ ಶ್ರೀ ಮಲೆ ಮಹದೇಶ್ವರ ಬೆಟ್ಟದಲ್ಲಿ ಗುರುವಾರ ನಡೆದ ಹುಂಡಿ ಹಣ ಎಣಿಕೆಯಲ್ಲಿ ಈ ಬಾರಿ 30 ದಿನಗಳ ಅವಧಿಯಲ್ಲಿ 2.29 ಕೋಟಿ ರೂ. ಸಂಗ್ರಹವಾಗಿದೆ.

ಚಾಮರಾಜನಗರ ಜಿಲ್ಲೆಯ ಮಹದೇಶ್ವರ ಬೆಟ್ಟದ ಬಸ್ ನಿಲ್ದಾಣದ ಬಳಿಯ ವಾಣಿಜ್ಯ ಸಂಕೀರ್ಣದಲ್ಲಿ ಸಾಲೂರು ಬೃಹನ್ ಮಠದ ಅಧ್ಯಕ್ಷರಾದ ಶ್ರೀ ಶಾಂತ ಮಲ್ಲಿಕಾರ್ಜುನ ಸ್ವಾಮಿರವರ ಸಮ್ಮುಖದಲ್ಲಿ ಹುಂಡಿಗಳನ್ನು ತೆರೆಯಲಾಯಿತು. ಬಳಿಕ ಸಿಸಿ ಕ್ಯಾಮೆರಾ ಕಣ್ಗಾವಲಿನಲ್ಲಿ ಎಣಿಕೆ ಕಾರ್ಯ ಪ್ರಾರಂಭಿಸಲಾಯಿತು. ಎಣಿಕೆ ಕಾರ್ಯವು ಸಂಜೆ 8 ಗಂಟೆಯವರೆಗೂ ನಡೆಯಿತು.

ಅಮಾವಾಸ್ಯೆ ,ಹೊಸವರ್ಷ ಸರ್ಕಾರಿ ರಜಾ ದಿನ, ಶಬರಿಮಲೆ, ಓಂ ಶಕ್ತಿ ಯಾತ್ರಾರ್ಥಿಗಳು ಹಾಗೂ ರಾಜ್ಯ



ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಲ್ಲೊಂದಾದ ಶಕ್ತಿ ಯೋಜನೆಯ ಉಚಿತ ಪ್ರಯಾಣದ ಹಿನ್ನೆಲೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ದೇವಸ್ಥಾನಕ್ಕೆ ಭೇಟಿ ನೀಡಿದ್ದರಿಂದ ಹರಕೆಯ ರೂಪದಲ್ಲಿ 2,29,67,216 ನಗದು 18 ಗ್ರಾಂ ಚಿನ್ನ ಹಾಗೂ 1,200 ಬೆಳ್ಳಿ ಪದಾರ್ಥಗಳನ್ನು ಹುಂಡಿಗೆ ಹಾಕಿದ್ದಾರೆ. ಇದಲ್ಲದೆ ಇ ಹುಂಡಿಯಿಂದ 4,21,505 ವಿದೇಶಿ 19 ನೋಟುಗಳು ಇದಲ್ಲದೆ ಚಲಾವಣೆಯಲ್ಲಿ ಇಲ್ಲದ 2000 ಮುಖಬೆಲೆಯ 17 ನೋಟುಗಳು ಹುಂಡಿಯಲ್ಲಿ ಹಾಕಿದ್ದಾರೆ.

ಶ್ರೀ ಮಲೆ ಮಹದೇಶ್ವರ ಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಎಇ ರಘು,ಉಪ ಕಾರ್ಯದರ್ಶಿ ಚಂದ್ರಶೇಖರ್, ಲೆಕ್ಕಾ ಅಧೀಕ್ಷಕ ಗುರು ಮಲ್ಲಯ್ಯ, ಚಾಮರಾಜನಗರ ಜಿಲ್ಲಾಡಳಿತ ಕಚೇರಿಯ ಶಶಿಕುಮಾರ್, ಬ್ಯಾಂಕ್ ಆಫ್ ಬರೋಡ ನೌಕರರು ಹಾಗೂ ಪ್ರಾಧಿಕಾರದ ಸಿಬ್ಬಂದಿ ಎಣಿಕೆ ಕಾರ್ಯದಲ್ಲಿ ಭಾಗವಹಿಸಿದ್ದರು.

## ಗ್ರಾಮ ಆಡಳಿತ ಅಧಿಕಾರಿಗಳ ಕೇಂದ್ರ ಸಂಘಕ್ಕೆ ಅಧ್ಯಕ್ಷರ ಆಯ್ಕೆ

**ಮಾಲೂರು:** ಗ್ರಾಮ ಆಡಳಿತ ಅಧಿಕಾರಿಗಳ ಕೇಂದ್ರ ಸಂಘದ ತಾಲ್ಲೂಕು ಘಟಕಕ್ಕೆ ನೂತನ ಅಧ್ಯಕ್ಷರಾಗಿ ಸಿ.ವಿ.ಮುನೇಶ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.



ಪಟ್ಟಣದ ತಾಲೂಕು ಆಡಳಿತ ಸೌಧದ ಸಭಾಂಗಣದಲ್ಲಿ ನೆಡೆದ ಗ್ರಾಮದ ಆಡಳಿತ ಅಧಿಕಾರಿಗಳ ಸರ್ವ ಸದಸ್ಯರ ಸಭೆಯಲ್ಲಿ ಗ್ರಾಮದ ಆಡಳಿತ ಅಧಿಕಾರಿಗಳ ಸಂಘಕ್ಕೆ ಆರ್.ಶರತ್ ರಾಜೀನಾಮೆ ನೀಡಿದ್ದರಿಂದ ಎಲ್ಲಾ ಸದಸ್ಯರು ಒಮ್ಮತದಿಂದ ಅಧ್ಯಕ್ಷರನ್ನಾಗಿ ಸಿ.ವಿ.ಮುನೇಶ್ ರನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು.

ಗ್ರಾಮ ಆಡಳಿತ ಅಧಿಕಾರಿಗಳ ಕೇಂದ್ರ ಸಂಘದ ಪದಾಧಿಕಾರಿಗಳಾಗಿ ಗೌರವಾಧ್ಯಕ್ಷರಾಗಿ ಆರ್.ಲೋಕೇಶ್, ಪ್ರಧಾನ ಕಾರ್ಯದರ್ಶಿ ರಾಹುಲ್, ಹಿರಿಯ ಉಪಾಧ್ಯಕ್ಷ ಕೆ.ಎಸ್.ಬಸವರಾಜ, ಉಪಾಧ್ಯಕ್ಷೆ ಕೆ.ಎನ್.ಸ್ವಾತಿ, ಖಜಾಂಚಿ ರಾಹುಲ್, ಸಂಘಟನಾ ಕಾರ್ಯದರ್ಶಿಗಳಾಗಿ ಕಸಬಾ ಸುರೇಶ್, ಲಕ್ಕೂರು ಪ್ರವೀಣ್ ಕುಮಾರ್, ಟೇಕಲ್ ವಂದನಾ, ಮಾಸ್ತಿ ನೂತನ್, ಲೆಕ್ಕಪರಿಶೋಧಕ ವೆಂಕಟೇಶ್, ಕ್ರೀಡಾ ಮತ್ತು ಸಾಂಸ್ಕೃತಿಕ ಕಾರ್ಯದರ್ಶಿ ಮಧು.ಎನ್, ಸಹಕಾರ್ಯದರ್ಶಿಗಳಾಗಿ ಪುಂಡಲೀಕ ಚಲವಾದಿ, ದರ್ಶಿನಿ, ಈ ಎಲ್ಲಾ ಪದಾಧಿಕಾರಿಗಳನ್ನು ಗ್ರಾಮ ಆಡಳಿತ ಅಧಿಕಾರಿಗಳು ಒಮ್ಮತದಿಂದ ಅವಿರೋಧವಾಗಿ ಮಾಡಿದ್ದಾರೆ.

ನೂತನ ಅಧ್ಯಕ್ಷ ಸಿ.ವಿ.ಮುನೇಶ್ ಮಾತನಾಡಿ ಗ್ರಾಮ ಆಡಳಿತ ಅಧಿಕಾರಿಗಳ ಕೇಂದ್ರ ಸಂಘದ ಪದಾಧಿಕಾರಿಗಳನ್ನು ಅವಿರೋಧವಾಗಿ ಆಯ್ಕೆಯಾಗಲು ಸಹಕರಿಸಿದ ತಾಲೂಕಿನ ಎಲ್ಲಾ ಗ್ರಾಮ ಆಡಳಿತ ಅಧಿಕಾರಿಗಳಿಗೆ ಅಭಿನಂದನೆ ಸಲ್ಲಿಸುವುದಾಗಿ ತಿಳಿಸಿದರು.

## ರಸ್ತೆಗೆಗಾಗಿ ರೈತನ ಜಮೀನು ಕಬಳಿಕೆ ಆರೋಪ

**ಕುಕನೂರು:** ಕುಕನೂರು ಪಟ್ಟಣ ಪಂಚಾಯತ್ ವ್ಯಾಪ್ತಿಗೆ ಒಳಪಡುವ ಘನ ತ್ಯಾಜ್ಯ ವಿಲೇವಾರಿ ಘಟಕ ಸಂಪರ್ಕಿಸುವ ರಸ್ತೆಗೆ ತಮ್ಮ ಜಮೀನನ್ನು ಅತೀಕ್ರಮೀಸಲಾಗಿದೆ ಎಂದು ರೈತರೊಬ್ಬರು ಅಳಲು ತೋಡಿಕೊಂಡಿದ್ದಾರೆ.

ಈ ವಿಷಯವಾಗಿ ಪಟ್ಟಣದಲ್ಲಿ ಸುದ್ದಿಗೋಷ್ಠಿ ನಡೆಸಿ ಬಟಪನಹಳ್ಳಿ ಗ್ರಾಮದ ರೈತ ಹನುಮಂತಪ್ಪ, ವಿರೂಪಾಪುರ ಸೀಮಾದ ಸರ್ವೆ ನಂಬರ್ 57/1 ಮತ್ತು 58/1 ರ ತಮ್ಮ ಜಮೀನಿನಲ್ಲಿ ಘನ ತ್ಯಾಜ್ಯ ವಿಲೀವಾರಿ ಘಟಕಕ್ಜೆ ರಸ್ತೆ ನಿರ್ಮಾಣ ನಡೆಯುತ್ತಿದ್ದು ಅದನ್ನು ನಿಲ್ಲಿಸಿ ಸರಿಯಾದ ಮಾರ್ಗದಲ್ಲಿ ರಸ್ತೆ ಕಾಮಗಾರಿ ನಡೆಸಲು ಕುಕನೂರು ಪಟ್ಟಣ ಪಂಚಾಯತ್ ಗೆ ಮನವಿ ಮಾಡಿಕೊಂಡರು ಸಹ ಅಧಿಕಾರಿಗಳು ಸ್ಪಂದನೆ ಮಾಡುತ್ತಿಲ್ಲ ಎಂದಿದ್ದಾರೆ.

ಈ ಮೊದಲು ಸರ್ವೆ ಮಾಡಿದ ಮಾರ್ಗವನ್ನು ಬಿಟ್ಟು ಬೇರೆ ದಾರಿಯಲ್ಲಿ ರಸ್ತೆ ನಿರ್ಮಾಣ ಕಾರ್ಯ ನಡೆಯುತ್ತಿದ್ದು ನ್ಯಾಯ ಒದಗಿಸುವಂತೆ ರೈತ ಹನುಮಂತಪ್ಪ ಮರಿಯಪ್ಪ, ಸುರೇಶ್ ಪೂಜಾರ್, ಕೆಂಚಪ್ಪ ಹರಿಜನ ಕೇಳಿಕೊಂಡಿದ್ದಾರೆ.



## ಅಧಿಕಾರ ಸ್ವೀಕಾರ

**ಕೆ.ಆರ್.ಪೇಟೆ.:** ಹೇಮಾವತಿ ನೀರಾವರಿ ಉಪವಿಭಾಗ–3 ಕಾರ್ಯಪಾಲಕ ಇಂಜಿನಿಯರ್ ಆಗಿ ಡಿ.ಸಿ.ಚಂದ್ರೇಗೌಡ ಅಧಿಕಾರ ಸ್ವೀಕರಿಸಿದರು. ಆನಂದ್ ರವರಿಂದ ತೆರವಾಗಿದ್ದ ಕಾರ್ಯಪಾಲಕ ಇಂಜಿನಿಯರ್ ಸ್ಥಾನಕ್ಕೆ ಸರ್ಕಾರ ಡಿ.ಸಿ.ಚಂದ್ರೇಗೌಡ ರವರನ್ನು ನೇಮಿಸಿದ ಹಿನ್ನೆಲೆಯಲ್ಲಿ ಬುಧವಾರ ಪಟ್ಟಣದ ಕಾರ್ಯಪಾಲಕ ಇಂಜಿನಿಯರ್ ಕಛೇರಿಯಲ್ಲಿ ಕರ್ತವ್ಯಕ್ಕೆ ಹಾಜರಾದರು. ಇದೇ ಸಂದರ್ಭದಲ್ಲಿ ಎಇಇಗಳಾದ ವಿಶ್ವನಾಥ್. ಪಿ. ಸಹಾಯಕ ಇಂಜಿನಿಯರ್ ರಾಖೇಶ್. ಪ್ರಸನ್ನ ಹೆಚ್.ಡಿ.ನಾಯಕ್. ಮೋಹನ್‌ಕುಮಾರ್. ಎಸ್. ಆರ್.ನಂಜೇಗೌಡ. ಅಧಿಕಾರಿಗಳು ಹಾಜರಿದ್ದರು.

ಸದಾ ಒಂದಿಲ್ಲೊಂದು ರೀತಿಯಲ್ಲಿ ಸದ್ದು ಮಾಡುತ್ತಲೇ ಇರುವ ನಟಿ, ನ್ಯಾಷನಲ್ ಕ್ರಷ್ ರಶ್ಮಿಕಾ ಮಂದಣ್ಣ ಅಭಿಮಾನಿಗಳಿಗೆ ಶಾಕ್ ಕೊಟ್ಟಿದ್ದಾರೆ. ಜಿಮ್‌ನಲ್ಲಿ ವರ್ಕೌಟ್ ಮಾಡುವಾಗ ಕಾಲು ಮುರಿದುಕೊಂಡಿರುವ ನಟಿಗೆ ಈಗ ವ್ಹೀಲ್‌ಚೇರ್ ಗತಿಯಾಗಿದೆ.

ಚಿಕ್ಕ ಗಾಯ ಎಂದು ಹೆಚ್ಚು ಗಮನ ಕೊಡದದ್ದೇ ಈ ಪರಿ ವಿಪರೀತಕ್ಕೆ ಹೋಗಿದೆ ಎನ್ನಲಾಗಿದೆ. ಸಿಖಂದರ್ ಚಿತ್ರದ ಚಿತ್ರೀಕರಣದಲ್ಲಿ ನಟಿ ಭಾಗಿಯಾಗಬೇಕಿತ್ತು. ಆದರೆ ಇದರ ಶೂಟಿಂಗ್ ಅನ್ನು ಸ್ಥಗಿತಗೊಳಿಸಲಾಗಿದೆ.

ಶಂಶಾಬಾದ್ ವಿಮಾನ ನಿಲ್ದಾಣದಲ್ಲಿ ಪಾಪರಾಜಿಗಳ ಕಣ್ಣಿಗೆ ಬಿದ್ದಾಗ, ಆಗಿರುವ ಗಾಯ ಗೊತ್ತಾಗಿದೆ. ಕಾರಿನಿಂದ ಇಳಿಯಲು ಆಗದೇ ಕಷ್ಟಪಡುತ್ತಿದ್ದ ನಟಿ ಕೊನೆಗೆ ವ್ಹೀಲ್‌ಚೇರ್‌ನಲ್ಲಿ ಬಂದರು. ಇದನ್ನು ನೋಡಿದ ಫ್ಯಾನ್ಸ್ ಶಾಕ್‌ಗೆ ಒಳಗಾಗಿದ್ದು, ಏನಾಯ್ತು ಎಂದು ಪ್ರಶ್ನಿಸುತ್ತಿದ್ದಾರೆ. ಕೊನೆಗೆ ವಿಷಯ ರಿವೀಲ್ ಆಗಿದೆ.

ಬಲಗಾಲಿಗೆ ತೀವ್ರ ಏಟಾಗಿದೆ ಎನ್ನುವುದು ತಿಳಿಯುತ್ತದೆ. ಆದರೆ ಇಷ್ಟೆಲ್ಲಾ ಸಮಸ್ಯೆ ಇದ್ದರೂ, ತಮ್ಮ ಛಾವಾ ಚಿತ್ರದ ಪ್ರೊಮೋಷನ್‌ಗಾಗಿ ನಟಿ ಹೈದರಾಬಾದ್‌ದಿಂದ ಮುಂಬೈಗೆ ತೆರಳುವ ಸಂದರ್ಭದಲ್ಲಿ, ವಿಷಯ ಬೆಳಕಿಗೆ ಬಂದಿದೆ. ಛಾವಾ ಚಿತ್ರದ ಟ್ರೇಲರ್ ಬಿಡುಗಡೆ ಸಮಾರಂಭದಲ್ಲಿ ಭಾಗಿಯಾಗಲಿದ್ದಾರೆ. ಇದಾಗಲೇ ಸಿಖಂದರ್ ಚಿತ್ರದ ಶೂಟಿಂಗ್ ಮುಂದಕ್ಕೆ ಹೋಗಿರುವುದಕ್ಕೆ ನಟಿ ಕ್ಷಮೆ ಕೋರಿದ್ದಾರೆ.

ಇವೆಲ್ಲವುಗಳ ಮಧ್ಯೆ ಹೈಲೈಟ್ ಆಗ್ತಿರೋದು ನಟ ವಿಜಯ ದೇವರಕೊಂಡ ಅವರು, ರಶ್ಮಿಕಾರ ಕಾಳಜಿ ಮಾಡುತ್ತಿರುವ ರೀತಿಯಿಂದ. ವೇದಿಕೆಯ ಮೇಲೆ ಹಾರುತ್ತಾ ಹಾರುತ್ತಾ ಹೋದ ರಶ್ಮಿಕಾರನ್ನು ವಿಜಯ್ ಅವರು ಕೈ ಹಿಡಿದು ಕರೆತಂದು, ಆಕೆಯನ್ನು ಜೋಪಾನವಾಗಿ ಕರೆದುಕೊಂಡು ಹೋಗುವ ವಿಡಿಯೋ ವೈರಲ್ ಆಗುತ್ತಿವೆ.

ಇನ್ನು ಛಾವಾ ಚಿತ್ರದ ಕುರಿತು ಹೇಳುವುದಾದರೆ, ಇದರಲ್ಲಿ ರಶ್ಮಿಕಾ ಮಂದಣ್ಣ ಜೊತೆ ವಿಕ್ಕಿ ಕೌಶಲ್ ಕಾಣಿಸಿಕೊಂಡಿದ್ದಾರೆ. ಫೆಬ್ರವರಿ 14ರ ಪ್ರೇಮಿಗಳ ದಿನದಂದು ಇದು ಬಿಡುಗಡೆಯಾಗಲಿದೆ. ಈ ಚಿತ್ರದಲ್ಲಿ ಮರಾಠ ಮಹಾರಾಜನ ಮಹಾರಾಣಿಯಾಗಿ ರಶ್ಮಿಕಾ ಕಾಣಿಸಿಕೊಂಡಿದ್ದಾರೆ. ಇದು ಛತ್ರಪತಿ ಶಿವಾಜಿ ಮಹಾರಾಜರ ಉತ್ತರಾಧಿಕಾರಿ ಛತ್ರಪತಿ ಸಾಂಭಾಜಿ ಮಹಾರಾಜ್ ಅವರ ಜೀವನದ ಕಥೆಯನ್ನು ಆಧರಿಸಿದ ಚಿತ್ರವಾಗಿದೆ. ಇದಕ್ಕೆ ಲಕ್ಷ್ಮಣ್ ಉಟೇಕರ್ ನಿರ್ದೇಶನ ಮಾಡಿದ್ದಾರೆ. ದಿನೇಶ್ ವಿಜ್ಜನ್ ಚಿತ್ರವನ್ನು ನಿರ್ಮಾಣ ಮಾಡಿದ್ದಾರೆ. ಇವರ ನಿರ್ಮಾಣದ ಮುಂದಿನ ಚಿತ್ರ ಥಾಮಾದಲ್ಲಿ ಕೂಡ ರಶ್ಮಿಕಾ ಮಂದಣ್ಣ ಅವರೇ ನಾಯಕಿಯಾಗಿರುವುದು ವಿಶೇಷ.

ಇನ್ನು ರಶ್ಮಿಕಾ ಮತ್ತು ವಿಜಯ್ ದೇವರಕೊಂಡ ಅವರ ಈ ಆತ್ಮೀಯ ವಿಡಿಯೋಗೆ ಥಹರೇವಾರಿ ಕಮೆಂಟ್ಸ್ ಸುರಿಮಳೆಯಾಗುತ್ತಿದೆ. ಕಳೆದ ಕೆಲವು ವರ್ಷಗಳಿಂದ ವಿಜಯ್ ದೇವರಕೊಂಡ ಮತ್ತು ರಶ್ಮಿಕಾ ಮಂದಣ್ಣ ಪ್ರೀತಿಯ ಬಗ್ಗೆ ಟಾಲಿವುಡ್‌ನಲ್ಲಿ ಚರ್ಚೆಗಳು ಯಾವಾಗಲೂ ನಡೆಯುತ್ತಿವೆ. ಇಬ್ಬರೂ ಈ ಬಗ್ಗೆ ಸ್ಪಷ್ಟನೆ ನೀಡಿಲ್ಲ. ಇವರಿಬ್ಬರ ಮದುವೆ 6 ತಿಂಗಳಿನಲ್ಲಿ ನಡೆಯಲಿದೆ ಎಂದು ಗುಲ್ಲೆದ್ದಿದೆ. ಅದಕ್ಕಾಗಿ ತಯಾರಿ ನಡೆಯುತ್ತಿದ್ದು, ಸೀಕ್ರೆಟ್ ನಿಶ್ಚಿತಾರ್ಥ ನಡೆಯಲಿದೆ ಎಂದು ಹೇಳಲಾಗಿದೆ.

2025ರ ಫೆಬ್ರವರಿಯಲ್ಲಿ ನಿಶ್ಚಿತಾರ್ಥ ನಡೆಯಲಿದೆ ಎಂದು ತೆಲುಗು ಮಾಧ್ಯಮಗಳಲ್ಲಿ ಸುದ್ದಿಯಾಗುತ್ತಿದೆ. ಇಷ್ಟೆಲ್ಲ ರೂಮರ್ಸ್ ಇದ್ದರೂ ಎಲ್ಲಿ ಕೂಡ ಇಬ್ಬರು ತಮ್ಮ ಪ್ರೀತಿಯ ಬಗ್ಗೆ ಹೇಳಿಕೊಂಡಿಲ್ಲ. ಇತ್ತೀಚೆಗೆ ರೆಸ್ಟೋರೆಂಟ್ ನಲ್ಲಿ ಇಬ್ಬರೂ ಡಿನ್ನರ್ ಡೇಟ್ ನಲ್ಲಿರುವ ಫೋಟೋ ವೈರಲ್ ಆಗಿತ್ತು.ಪುಷ್ಪ 2 ಪ್ರಚಾರದ ವೇಳೆ, ನಿಮ್ಮ ಮದುವೆ ಆಗಲಿರುವವರು ನಟರೇ? ಎಂಬ ಪ್ರಶ್ನೆಗೆ, ರಶ್ಮಿಕಾ ಎಲ್ಲರಿಗೂ ಗೊತ್ತಲ್ಲವೇ ಎಂದಿದ್ದಾರೆ. ವಿಜಯ್ ದೇವರಕೊಂಡ ( ತುರಿಚಿಥಿ ಜಜತಚಿಡಿಚಿಇಾಂಟಿಜಚಿ) 37 ವರ್ಷಕ್ಕೆ ಕಾಲಿಡುತ್ತಿದ್ದಾರೆ. ಶೀಘ್ರದಲ್ಲೇ ಮದುವೆಯಾಗಬಹುದು ಎಂಬ ಊಹಾಪೋಹಗಳಿವೆ. ಆದರೆ, ಈ ಬಗ್ಗೆ ಯಾವುದೇ ಅಧಿಕೃತ ಮಾಹಿತಿ ಇಲ್ಲ. ಈ ವರ್ಷದ ಆರಂಭದಲ್ಲಿ ವಿಜಯ್ ಮುಂದಿನ ವರ್ಷದ ಫೆಬ್ರವರಿಯಲ್ಲಿ ನಿಶ್ಚಿತಾರ್ಥ ಎಂದು ಹೇಳಿದ್ದರು. ಈಗ ಈ ವಿಡಿಯೋ ಸಾಕಷ್ಟು ಚರ್ಚೆಗೆ ಕಾರಣವಾಗಿದೆ.

## ಕುಂಟುತ್ತಾ ನಡೆವ ರಶ್ಮಿಕಾಗೆ ವಿಜಯ್ ಆಸರೆ



# ಗೌರವ ಡಾಕ್ಟರೇಟ್ ಬಂದಿರುವುದು ಖುಷಿಯಿದೆ

ಸ್ಯಾಂಡಲ್‌ವುಡ್ ಪ್ರೇಕ್ಷಕರಿಗಂತೂ ನಟಿ ತಾರಾ ಅನುರಾಧ ಚಿರಪರಿಚಿತ. ಇತ್ತೀಚೆಗೆ ಕಿರುತೆರೆ ಪ್ರೇಕ್ಷಕರಿಗೂ ಬಹಳ ಹತ್ತಿರವಾಗಿರುವ ಈ ನಟಿಗೆ ವಿಜಯಪುರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ ಗೌರವ ಡಾಕ್ಟರೇಟ್ ನೀಡಿ ಪುರಸ್ಕರಿಸಿದೆ.

ಹೌದು, ವಿಜಯಪುರ ಮೂಲದ ಬರಹಗಾರ್ತಿ ಹೋರಾಟಗಾರ್ತಿ ಮೀನಾಕ್ಷಿ ಬಲಿ ಅವರು, ವಿಜಯಪುರ ಮಹಿಳಾ ವಿಶ್ವವಿದ್ಯಾಲಯದ 16ನೇ ಘಟಿಕೋತ್ಸವ ಸಮಾರಂಭದಲ್ಲಿ ನಟಿ ತಾರಾ ಅವರಿಗೆ ಗೌರವ ಡಾಕ್ಟರೇಟ್ ನೀಡಿ ಗೌರವಿಸಿದ್ದಾರೆ. ಕಳೆದ ನಾಲ್ಕು ದಶಕಗಳಿಂದಲೂ ಕಲಾ ಕ್ಷೇತ್ರದಲ್ಲಿ ಸೇವೆ ಹಾಗೂ ಸಾಧನೆಗಳನ್ನು ಮಾಡುತ್ತಿರುವ ನಟಿ ತಾರಾ ಅನುರಾಧ ನಟನೆ ಅಷ್ಟೇ ಅಲ್ಲದೆ ರಾಜಕೀಯ ಹಾಗೂ ಮಹಿಳಾ ಸಬಲೀಕರಣದ ವಿಚಾರವಾಗಿಯೂ ಸದಾ ಆಸಕ್ತಿಯನ್ನು ತೋರಿದ್ದಾರೆ. ಇವರ ಕಲಾ ಸಾಧನೆಗೆ ಹಲವಾರು ಪ್ರಶಸ್ತಿ ಪುರಸ್ಕಾರಗಳು ಸಂದಿದ್ದಲ್ಲದೆ ಇದೀಗ ಗೌರವ ಡಾಕ್ಟರೇಟ್ ಕೂಡ ಸಿಕ್ಕಿದೆ.



ಗೌರವ ಡಾಕ್ಟರೇಟ್ ಪಡೆದ ಸಂತಸದಲ್ಲಿ ಮಾತನಾಡಿದ ನಟಿ ತಾರಾ ಈ ಭಾಗದಲ್ಲಿ ಶೂಟಿಂಗ್‌ಗೆಂದು ಬಂದಾಗಲೇ ನಾನು ತಾಯಿ ಆಗುತ್ತಿದ್ದೇನೆ ಎಂಬ ವಿಚಾರ ತಿಳಿದಿದ್ದು. ವಿಧಾನ ಪರಿಷತ್‌ನ ಸದಸ್ಯೆಯಾಗಿ ಬೆಳಗಾವಿ ಸುವರ್ಣಸೌಧದಲ್ಲಿ ಪ್ರಮಾಣವಚನ ಸ್ವೀಕರಿಸಿದ್ದೇನೆ. ಹಾಗಾಗಿ ಈ ಭಾಗದ ನೆನಪು ನನಗೂ ವಿಶೇಷ ಸಂಬಂಧವಿದೆ ಎಂದೂ ತೀರಿಸಲಾಗದ ಋಣವಂತೂ ಖಂಡಿತಾ ಇದೆ ಎಂದು ಹೇಳಿಕೊಂಡಿದ್ದಾರೆ.

ನಟಿಯಾಗಿ ಕಲಾವಿದೆಯಾಗಿ ಹಲವಾರು ವರ್ಷಗಳಿಂದ ನಾನು ಇದೇ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿದ್ದೇನೆ. ಈವರೆಗೂ ರಾಜ್ಯ, ರಾಷ್ಟ್ರ, ಅಂತರಾಷ್ಟ್ರೀಯ ಮಟ್ಟದಲ್ಲಿ ಹಲವಾರು ಪ್ರಶಸ್ತಿ ಗೌರವಗಳನ್ನು ಪಡೆದುಕೊಂಡಿರಬಹುದು. ಆದರೆ ಈ ರೀತಿಯ ಗೌರವ ಡಾಕ್ಟರೇಟ್ ಪಡೆದುಕೊಂಡಿರುವುದು ನನಗಂತೂ ಬಹಳ ಸಂತೋಷ ಹಾಗೂ ಸಂತೃಪ್ತಿ ನೀಡಿದೆ. ನನ್ನ ಕಲಾ ಸೇವೆಯನ್ನು ಗುರುತಿಸಿ ಈ ಡಾಕ್ಟರೇಟ್ ಅನ್ನು ನೀಡಿರುವ ವಿಶ್ವವಿದ್ಯಾಲಯಕ್ಕೂ ಹಾಗೂ ನನ್ನೆಲ್ಲ ಅಭಿಮಾನಿ ಪ್ರೇಕ್ಷಕರಿಗೂ ನಾನು ಸದಾ ಋಣಿ ಎಂದರು ನಟಿ ತಾರಾ ಅನುರಾಧ.

'ಇಂಗೆಯುಮ್ ಒರು ಗಂಗಾಯ್' ಎಂಬ ತಮಿಳ್ ಚಿತ್ರದ ಮೂಲಕ ನಟನಾ ಕ್ಷೇತ್ರಕ್ಕೆ ಕಾಲಿಟ್ಟ ನಟಿ ತಾರಾ ಅನುರಾಧ, ತುಳಸಿದಳ ಚಿತ್ರದ ಮೂಲಕ ಸ್ಯಾಂಡಲ್‌ವುಡ್‌ಗೆ ಕಾಲಿಟ್ಟರು. 18 ವರ್ಷ ವಯಸ್ಸು ತುಂಬುವುದರೊಳಗೆ ಐವತ್ತಕ್ಕೂ ಹೆಚ್ಚು ಸಿನಿಮಾಗಳಲ್ಲಿ ನಟಿಸಿದ್ದರು ಈಕೆ. 'ಕ್ರಮ', 'ಮುಂಜಾನೆಯ ಮಂಜು', 'ಕಾನೂರು ಹೆಗ್ಗಡತಿ', 'ಮುನ್ನುಡಿ', 'ಹಸೀನಾ', 'ಮತದಾನ', 'ಈ ಬಂಧನ', 'ಶ್ರಾವಣಿ ಸುಬ್ರಮಣ್ಯ', 'ಕೆಂಪೇಗೌಡ', 'ಉಳಿದವರು ಕಂಡಂತೆ', 'ಎಲ್ಲಿದ್ದೆ ಇಲ್ಲಿ ತನಕ', 'ಹೆಬ್ಬೆಟ್ ರಾಮಕ್ಕ', 'ಆದಿಲಕ್ಷ್ಮಿ ಪುರಾಣ', 'ಟಗರು ಪಲ್ಯ', 'ಬಡವ ರಾಸ್ಕಲ್' ಹೀಗೆ ಹಲವು ಚಿತ್ರಗಳಲ್ಲಿ ಪ್ರಮುಖ ಪಾತ್ರದಲ್ಲಿ ನಟಿಸಿ ಹಲವಾರು ಪ್ರಶಸ್ತಿ ಪುರಸ್ಕಾರಗಳನ್ನು ತಮ್ಮ ಮುಡಿಗೇರಿಸಿಕೊಂಡಿದ್ದಾರೆ.

ಪ್ರಸ್ತುತ ಕನ್ನಡ ಕಿರುತೆರೆಯ ಹಲವಾರು ರಿಯಾಲಿಟಿ ಶೋಗಳಲ್ಲಿ ಜಡ್ಜ್ ಆಗಿ ಕಾಣಿಸಿಕೊಳ್ಳುತ್ತಿರುವ ನಟಿ ತಾರಾ ಅನುರಾಧ 'ರಾಜ ರಾಣಿ', 'ನನ್ನಮ್ಮ ಸೂಪರ್ ಸ್ಟಾರ್' ಸೇರಿದಂತೆ ಹಲವು ಕಾರ್ಯಕ್ರಮಗಳಲ್ಲಿ ಸಕ್ರಿಯವಾಗಿ ಕಾಣಿಸಿಕೊಳ್ಳುತ್ತಿದ್ದಾರೆ. ಇತ್ತೀಚೆಗೆ ಬಿಗ್ ಬಾಸ್ ಸೀಸನ್ 11ರಲ್ಲಿ ಸಹ ಅತಿಥಿಯಾಗಿ ಕಾಣಿಸಿಕೊಂಡಿದ್ದರು.

ಇದೀಗ ವಿಜಯಪುರದ ವಿಶ್ವವಿದ್ಯಾಲಯದಿಂದ ಗೌರವ ಡಾಕ್ಟರೇಟ್ ಪಡೆದಿರುವ ಸಂಭ್ರಮವನ್ನು ತಮ್ಮವರೊಂದಿಗೆ ಹಂಚಿಕೊಳ್ಳುವ ಸಲುವಾಗಿ ನಟಿ ತಾರಾ ಅನುರಾಧ ಮನೆಯಲ್ಲಿ ಪೂಜಾ ಕಾರ್ಯವೂ ನಡೆದಿದೆ.

ಈ ಕಾರ್ಯಕ್ರಮದಲ್ಲಿ ಸ್ಯಾಂಡಲ್‌ವುಡ್ ನಟಿಯರಾದ ಭಾರತಿ ವಿಷ್ಣುವರ್ಧನ್, ಹೇಮಾ ಚೌಧರಿ, ಪೂಜಾ ಗಾಂಧಿ, ಕಾರುಣ್ಯ, ಅನುಪ್ರಭಾಕರ್, ಭಾವನ ರಾವ್ ಸೋನು ಗೌಡ, ಸುಧಾರಾಣಿ, ಶ್ರುತಿ, ಅಶ್ವಿನಿ ಪುನೀತ್ ರಾಜಕುಮಾರ್ ಮುಂತಾದವರು ಪಾಲ್ಗೊಂಡಿದ್ದರು. ಈ ಕಾರ್ಯಕ್ರಮದ ಒಂದಷ್ಟು ವಿಡಿಯೋ ತುಣುಕುಗಳು ಈಗಾಗಲೇ ಸೋಶಿಯಲ್ ಮೀಡಿಯಾದಲ್ಲಿ ಬಹಳಷ್ಟು ವೈರಲ್ ಆಗಿವೆ.

## ಆರ್‌ಎಕ್ಸ್ 100 ಚೆಲುವೆಯ ಸೌಂದರ್ಯದ ಕಲೆ ಬಲೆ!

ಸಿನಿಲೋಕದ ಸುಂದರಿಯರ ಸೌಂದರ್ಯದ ಸೀಕ್ರೆಟ್ಟು.. ಬಳುಕುವ ಬಾಲೆಯರ ಜಿಮ್ ವರ್ಕೌಟು.. ಮಲ್ಲಿಗೆ ತೂಕದ ಚೆಲುವೆಯರ ಮೈಮಾಟದ ಗುಟ್ಟು..

ಆರ್‌ಎಕ್ಸ್ 100 ಸಿನಿಮಾದಲ್ಲಿ ಹಸಿಬಿಸಿಯಾಗಿ ನಟಿಸಿ ಪಡ್ಡೆ ಹೈಕಳ ನಿದ್ದೆಗೆಡಿಸಿದ್ದು ದೆಹಲಿ ಬ್ಯೂಟಿ ಪಾಯಲ್ ರಜಪೂತ್. ಪಾಯಲ್ ನೀಳಕಾಯ, ಮಾದಕ ಮೈಮಾಟ ನೋಡಿದವರು ಈಕೆಯ ಫ್ಯಾನ್ ಆಗೋದ್ರು. ಸ್ನಿಗ್ಧ ಸೌಂದರ್ಯದ ಈ ನಾರ್ತ್ ಬ್ಯೂಟಿ ಸವಾಲಿನ ನಟನೆಗೂ ಸೈ.. ಬೋಲ್ಡ್ ಆಗಿ ಕಾಣಿಸಿಕೊಳ್ಳೋದ್ರಲ್ಲೂ ಎತ್ತಿದ ಕೈ. ಕನ್ನಡದ ಹೆಡ್ ಬುಷ್ ಸಿನಿಮಾದಲ್ಲೂ ನಟಿಸಿರೋ ಈ ಬೆಡಗಿ , ಸೋಷಿಯಲ್ ಮಿಡಿಯಾದಲ್ಲೂ ಸಖತ್ ಅಕ್ಟಿವ್ ಆಗಿರ್ತಾಳೆ. ತನ್ನ ಹಸಿ ಬಿಸಿ ಸ್ಟೈಲಿಶ್ ಫೋಟೋಸ್ ಪೋಸ್ಟ್ ಮಾಡಿ ಪಡ್ಡೆ ಹುಡುಗರ ಹಾರ್ಟ್‌ಬೀಟ್ ಹೆಚ್ಚಿಸ್ತಾ ಇರ್ತಾಳೆ. ಇನ್ನೂ ಎಲ್ಲಾ ಚೆಲುವೆಯರೂ ಹೇಳುವಂತೆ ಪಾಯಲ್ ಕೂಡ ತನ್ನ ಸೌಂದರ್ಯ ಗುಟ್ಟು ಕಸರತ್ತು ಅಂತಾಳೆ. ಈ ಮೋಹನಾಂಗಿ ಅನುದಿನವೂ ಜಿಮ್‌ನಲ್ಲಿ ಸುಸ್ತ್ ಆಗುವಂತೆ ಮಸ್ತ್ ವರ್ಕೌಟ್ ಮಾಡ್ತಾಳೆ. ಪಾಯಲ್ ವರ್ಕೌಟ್ ವಿಡಿಯೋಸ್ ಸೋಷಿಯಲ್ ಮಿಡಿಯಾದಲ್ಲಿ ಕಿಚ್ಚು ಹಚ್ತಾ ಇರ್ತಾವೆ.





## ನಟಿ ಪ್ರೆಗ್ನೆಂಟ್ ಇದ್ದಾಗ ಇನ್ನೊಬ್ಬಳ ಹಿಂದೆ ಹೋಗಿದ್ದ ಈಕೆ ಗಂಡ!

ಬಾಲಿವುಡ್ ಹಿರಿಯ ನಟಿ ಜೀನತ್ ಅಮನ್ ವೈಯಕ್ತಿಕ ಜೀವನದಲ್ಲಿ ಸಾಕಷ್ಟು ಸವಾಲು ಎದುರಿಸಿದ್ದಾರೆ. ಪತಿಯ ಅಕ್ರಮ ಸಂಬಂಧ, ಅನಾರೋಗ್ಯ ಸೇರಿದಂತೆ ಅನೇಕ ನೋವನ್ನು ಅನುಭವಿಸಿರುವ ಅವರು ಆ ದಿನಗಳನ್ನು ನೆನಪಿಸಿಕೊಂಡಿದ್ದಾರೆ. ಪತ್ನಿ ಗರ್ಭಧರಿಸಿದಾಗ ಪತಿ ದಾರಿ ತಪ್ಪಿದ ಅನೇಕ ಉದಾಹರಣೆ ಇದೆ. ಪತಿಯ ಮೋಸಕ್ಕೆ ಸಾಮಾನ್ಯರು ಮಾತ್ರವಲ್ಲ ಆಕ್ಟರ್ಸ್ ಕೂಡ ಬಲಿಯಾಗಿದ್ದಾರೆ. ಇದಕ್ಕೆ ಜೀನತ್ ಅಮನ್ ಕೂಡ ಸೇರಿದ್ದಾರೆ. ಬಾಲಿವುಡ್‌ನ ಹಿರಿಯ ನಟಿ ಜೀನತ್ ಅಮನ್ ನಟನೆ ಜೊತೆ ತಮ್ಮ ಸ್ಟೈಲ್ ನಿಂದ ಈಗ್ಲೂ ಅಭಿಮಾನಿಗಳ ಗಮನ ಸೆಳೆಯುತ್ತಾರೆ. ತೆರೆ ಮೇಲೆ ಅದ್ಭುತವಾಗಿ ಕಾಣಿಸಿಕೊಳ್ಳುವ ಜೀನತ್ ಅಮನ್ ವೈಯಕ್ತಿಕ ಜೀವನ ಚೆನ್ನಾಗಿರಲಿಲ್ಲ. ಅವರು ಸಾಕಷ್ಟು ನೋವು ತಿಂದಿದ್ದಾರೆ. ಈಗ ಜೀವನದಲ್ಲಿ ಖುಷಿಯಾಗಿದ್ರೂ ಅವರ ಹಿಂದಿನ ದಿನಗಳು ಸಾಕಷ್ಟು ಏರುಪೇರುಗಳಿಂದ ಕೂಡಿದ್ದವು. ಅವರು ಒಂಟಿಯಾಗಿ ಹೋರಾಟ ನಡೆಸಿದ್ರು. ಆ ದಿನಗಳನ್ನು ಜೀನತ್ ಅಮನ್ ನೆನಪಿಸಿಕೊಂಡಿದ್ದಾರೆ. ದಾಂಪತ್ಯ ಜೀವನದಲ್ಲಿ ಏನೆಲ್ಲ ಸವಾಲುಗಳನ್ನು ಎದುರಿಸಬೇಕಾಯ್ತು ಎಂಬುದನ್ನು ಅವರು ಹೇಳಿದ್ದಾರೆ.


ಜೀನತ್ ಅಮನ್, ಮಜನ್ ಖಾನ್ ಅವರನ್ನು ಮದುವೆಯಾಗಿದ್ದರು. ಮದುವೆ ಆದ್ಮೇಲೆ ಅವರ ಜೀವನ ನರಕವಾಗಿತ್ತು. ಪತಿಯನ್ನು ಸುಧಾರಿಸಲು ಸಾಕಷ್ಟು ಪ್ರಯತ್ನ ನಡೆಸಿದ್ದರು ಜೀನತ್. ಆದ್ರೆ ಅದು ಸಾಧ್ಯವಾಗ್ಲಿಲ್ಲ. ಇಬ್ಬರು ಮಕ್ಕಳ ತಾಯಿಯಾಗಿರುವ ಜೀನತ್, ತಮ್ಮ ಮಕ್ಕಳಿಗಾಗಿ ಮಜಹರ್ ಖಾನ್ ಜೊತೆ ಇರುವ ನಿರ್ಧಾರ ತೆಗೆದುಕೊಂಡಿದ್ದರು. 12 ವರ್ಷಗಳ ಕಾಲ ಉಸಿರು ಬಿಗಿ ಹಿಡಿದು ಜೀವನ ನಡೆಸಿದ್ದರು ಜೀನತ್.

ಮಜಹರ್ ಖಾನ್ ಅವರನ್ನು ಮದುವೆಯಾಗುವ ನಿರ್ಧಾರ ಜೀನತ್ ಅವರದ್ದೇ ಆಗಿತ್ತು. ಹಾಗಾಗಿ ಕೊನೆ ಉಸಿರಿರುವರೆಗೂ ಸಂಬಂಧ ಉಳಿಸಿಕೊಳ್ಳುವ ತೀರ್ಮಾನವನ್ನು ಅವರು ಕೈಗೊಂಡಿದ್ದರು. ಜೀನತ್ ಗರ್ಭಿಣಿಯಾಗಿದ್ದಾಗ ಅವರ ಪತಿ ಮಜಹರ್ ಖಾನ್ ಜೊತೆಗಿರಲಿಲ್ಲ. ಪತ್ರಿಕೆಯೊಂದರಲ್ಲಿ ಮಜಹರ್ ಖಾನ್ ಬೇರೆ ಮಹಿಳೆ ಜೊತೆ ವಾಸಮಾಡ್ತಿದ್ದಾರೆ ಎಂಬ ಸುದ್ದಿ ಬಂದಿತ್ತು. ಅದು ಸತ್ಯ ಕೂಡ ಆಗಿತ್ತು. ಗರ್ಭಿಣಿ ಪತ್ನಿ ಜೊತೆಗಿರುವ ಬದಲು ಬೇರೆ ಮಹಿಳೆ ಜೊತೆ ಪತಿ ಇದ್ದ ಎಂಬುದನ್ನು ತಿಳಿದಿದ್ದರೂ ಜೀನತ್ ಯಾವುದೇ ಮಾತನಾಡಿರಲಿಲ್ಲ. ಎಲ್ಲ ನೋವುಗಳನ್ನು ನುಂಗಿ ಜೀವನ ಮುಂದುವರೆಸಿದ್ದರು.

ಮಗುವಾದ್ಮೇಲೆ ಮದುವೆ ಮುರಿದುಕೊಳ್ಳುವ ಆಲೋಚನೆಯನ್ನೂ ಜೀನತ್ ಒಮ್ಮೆ ಮಾಡಿದ್ದರು. ಆದ್ರೆ ಮಕ್ಕಳ ಮುಖ ನೋಡಿ ತಮ್ಮ ತೀರ್ಮಾನದಿಂದ ಹಿಂದೆ ಸರಿದಿದ್ದರು. ಎರಡನೇ ಮಗುವಿಗೆ ಐದು ವರ್ಷವಾಗ್ತಿದ್ದಂತೆ ಕೆಲಸವೊಂದನ್ನು ಜೀನತ್ ಹುಡುಕಿಕೊಂಡಿದ್ದರು. ಆದ್ರೆ ಈ ಕೆಲಸವನ್ನೂ ಜೀನತ್ ಗೆ ಸರಿಯಾಗಿ ಮಾಡಲು ಸಾಧ್ಯವಾಗ್ಲಿಲ್ಲ. ಅದಕ್ಕೆ ಕಾರಣ ಅವರ ಪತಿ ಮಜಹರ್ ಖಾನ್ ಅನಾರೋಗ್ಯ. ಮೋಸ ಮಾಡಿದ್ದ ಪತಿಯನ್ನು ಯಾವುದೇ ಫಲಾಪೇಕ್ಷೆಯಿಲ್ಲದೆ ಆರೈಕೆ ಮಾಡಿದ್ದರು ಜೀನತ್. ಇಡೀ ದಿನ ಪತಿಯನ್ನು ನೋಡಿಕೊಳ್ಳೋದ್ರಲ್ಲಿಯೇ ಜೀನತ್ ಜೀವನ ಕಳೆದಿದ್ದರು. ಮಜಹರ್ ಖಾನ್ ಗೆ ಇಂಜೆಕ್ಷನ್ ನೀಡೋದ್ರಿಂದ ಹಿಡಿದು ಡ್ರೆಸ್ಸಿಂಗ್ ಮಾಡುವವರೆಗೆ ಎಲ್ಲವನ್ನೂ ಕಲಿತಿದ್ದರು ನಟಿ. ಮಜಹರ್ ಖಾನ್ ಪ್ರತಿಯೊಂದು ಕೆಲಸವನ್ನು ಮಾಡ್ತಿದ್ದ ಜೀನತ್ ಅವರ ಜೊತೆ 18 ತಿಂಗಳು ಇದ್ರು. ಆ ಸಮಯದಲ್ಲಿ ನಾನು ಸಂಪೂರ್ಣ ಕುಸಿದುಹೋಗಿದ್ದೆ. ಆಗ ನನ್ನ ಜೊತೆ ಯಾರೂ ಇರಲಿಲ್ಲ. ಮಜಹರ್ ಖಾನ್ ಜೊತೆ ಓಡಾಡ್ತಿದ್ದ ಒಬ್ಬರೂ ಆ ಸಮಯದಲ್ಲಿ ಬರಲಿಲ್ಲ. ವರ್ಷಗಳ ಕಾಲ, ನೀನು ಹೇಗಿದ್ದೀಯಾ ಎಂದು ನನ್ನನ್ನು ಯಾರೂ ಕೇಳಿರಲಿಲ್ಲ ಎಂದು ಜೀನತ್ ಹೇಳಿದ್ದಾರೆ.

1970 ರಿಂದ 80ರವರೆಗೆ ಸಿನಿಮಾದಲ್ಲಿ ನಟಿಸಿದ್ದ ಜೀನತ್ ಸಿಜ್ಲಿಂಗ್ ನಟಿ ಎಂದೇ ಪ್ರಸಿದ್ಧಿ ಪಡೆದಿದ್ದರು. ಸೋಶಿಯಲ್ ಮೀಡಿಯಾದಲ್ಲಿ ಸಕ್ರಿಯವಾಗಿರುವ ಅವರು ಆಗಾಗ ತಮ್ಮ ಹಳೆ ದಿನಗಳನ್ನು ನೆನಪಿಸಿಕೊಂಡು ವಿಡಿಯೋ ಹಂಚಿಕೊಳ್ತಿರುತ್ತಾರೆ.

## ರಾಜಕೀಯಕ್ಕೆ ನಟಿ ತ್ರಿಷಾ ಎಂಟ್ರಿ ?



ತಮಿಳು ಚಿತ್ರರಂಗದಲ್ಲಿ ಬ್ಯುಸಿಯಾಗಿರುವ ನಟಿ ತ್ರಿಷಾ. 40 ವರ್ಷ ದಾಟಿದ್ರೂ ಅವರ ಕೈಯಲ್ಲಿ ಈಗ ಅರ್ಧ ಡಜನ್‌ಗಿಂತ ಹೆಚ್ಚು ಸಿನಿಮಾಗಳಿವೆ. ಈ ವರ್ಷದ ಮೊದಲ ಗೆಲುವು ದಾಖಲಿಸಿದ್ದು ತ್ರಿಷಾ ನಟಿಸಿರುವ ಐಡೆಂಟಿಟಿ ಚಿತ್ರ. ಆ ಸಿನಿಮಾದಲ್ಲಿ ಮಲಯಾಳಂ ನಟ ಟೊವಿನೊ ಥಾಮಸ್‌ಗೆ ಜೋಡಿಯಾಗಿ ನಟಿಸಿದ್ದಾರೆ ತ್ರಿಷಾ. ಆ ಸಿನಿಮಾ ಗೆಲುವಿನ ನಂತರ ಅವರು ನಟಿಸಿರುವ ವಿಡಮುಯರ್ಚಿ ಚಿತ್ರ ಫೆಬ್ರವರಿ 6 ರಂದು ಬಿಡುಗಡೆಯಾಗಲಿದೆ. ಈ ಚಿತ್ರದಲ್ಲಿ ಅಜಿತ್‌ಗೆ ಜೋಡಿಯಾಗಿ ನಟಿಸಿದ್ದಾರೆ ತ್ರಿಷಾ.

ಇದಲ್ಲದೆ ಅಜಿತ್ ಜೊತೆ ನಟಿಸಿರುವ ಮತ್ತೊಂದು ಚಿತ್ರ ಗುಡ್ ಬ್ಯಾಡ್ ಅಗ್ಲಿ ಏಪ್ರಿಲ್ 10 ರಂದು ಬಿಡುಗಡೆಯಾಗಲಿದೆ. ಈ ಚಿತ್ರಕ್ಕೆ ಆದಿಕ್ ರವಿಚಂದ್ರನ್ ನಿರ್ದೇಶನ ಮಾಡಿದ್ದಾರೆ. ಈ ಚಿತ್ರದ ನಂತರ ಮಣಿರತ್ನಂ ನಿರ್ದೇಶನದ ಥಗ್ ಲೈಫ್ ಚಿತ್ರದಲ್ಲೂ ನಟಿಸಿ ಮುಗಿಸಿದ್ದಾರೆ ತ್ರಿಷಾ. ಈ ಚಿತ್ರದಲ್ಲಿ ಸಿಂಬುಗೆ ಜೋಡಿಯಾಗಿ ನಟಿಸಿದ್ದಾರೆ. ಈ ಚಿತ್ರದಲ್ಲಿ ಕಮಲ್ ಹಾಸನ್ ಕೂಡ ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ. ಥಗ್ ಲೈಫ್ ಚಿತ್ರ ಜೂನ್‌ನಲ್ಲಿ ಬಿಡುಗಡೆಯಾಗಲಿದೆ.

ಪ್ರಸ್ತುತ ನಟಿ ತ್ರಿಷಾ ನಟಿಸಿರುವ ಸೂರ್ಯ 45 ಚಿತ್ರ ನಿರ್ಮಾಣ ಹಂತದಲ್ಲಿದೆ. ಆರ್. ಜೆ.ಬಾಲಾಜಿ ನಿರ್ದೇಶನದ ಈ ಚಿತ್ರದಲ್ಲಿ ನಟ ಸೂರ್ಯಗೆ ಜೋಡಿಯಾಗಿ ನಟಿಸುತ್ತಿದ್ದಾರೆ. ಈ ಚಿತ್ರದ ನಂತರ ಆರ್.ಜೆ.ಬಾಲಾಜಿ ನಿರ್ದೇಶನ ಮಾಡಲಿರುವ ಮಾಸಾನಿ ಅಮ್ಮನ್ ಚಿತ್ರದಲ್ಲೂ ತ್ರಿಷಾ ಅವರೇ ನಾಯಕಿ ಎನ್ನಲಾಗಿದೆ. ಅವರ ಕೈಯಲ್ಲಿ ತಮಿಳು ಮಾತ್ರವಲ್ಲದೆ ತೆಲುಗು ಸಿನಿಮಾ ಕೂಡ ಇದೆ. ಅದರಂತೆ ತೆಲುಗಿನಲ್ಲಿ ಚಿರಂಜೀವಿಗೆ ಜೋಡಿಯಾಗಿ ವಿಶ್ವಂಭರ ಚಿತ್ರದಲ್ಲಿ ನಟಿಸಿದ್ದಾರೆ. ಈ ಚಿತ್ರ ಕೂಡ ಶೀಘ್ರದಲ್ಲೇ ಬಿಡುಗಡೆಯಾಗಲಿದೆ.

ಇಷ್ಟು ಬ್ಯುಸಿಯಾಗಿರುವ ನಟಿ ತ್ರಿಷಾ ಶೀಘ್ರದಲ್ಲೇ ಸಿನಿಮಾದಿಂದ ದೂರ ಸರಿಯಲು ನಿರ್ಧರಿಸಿದ್ದಾರೆ ಎಂಬ ಮಾಹಿತಿ ಹೊರಬಿದ್ದಿದೆ. ಈ ಮಾಹಿತಿಯನ್ನು ವಲೈಪೇಚು ಅಂತಣನ್ ಇತ್ತೀಚಿನ ಸಂದರ್ಶನವೊಂದರಲ್ಲಿ ಬಹಿರಂಗಪಡಿಸಿದ್ದಾರೆ. ಈ ಬಗ್ಗೆ ಮಾತನಾಡಿರುವ ಅವರು, ತ್ರಿಷಾಗೆ ಸಿನಿಮಾಗಳಲ್ಲಿ ನಟಿಸುವುದು ಬೋರ್ ಎನಿಸುತ್ತಿದ್ದು, ಅವರಿಗೆ ಮಾನಸಿಕ ಒತ್ತಡ ಕೂಡ ಉಂಟಾಗಿದೆ ಎಂದು ಹೇಳಿದ್ದಾರೆ. ಇದರಿಂದಾಗಿ ಅವರು ಇನ್ನು ಮುಂದೆ ಸಿನಿಮಾಗಳಲ್ಲಿ ನಟಿಸಬಾರದು ಎಂದು ನಿರ್ಧರಿಸಿದ್ದಾರಂತೆ.

ತ್ರಿಷಾ ಸಿನಿಮಾದಿಂದ ದೂರ ಸರಿಯುವ ನಿರ್ಧಾರದ ಬಗ್ಗೆ ಅವರ ತಾಯಿಗೆ ತಿಳಿಸಿದಾಗ ಅವರು ಒಪ್ಪಿಕೊಂಡಿಲ್ಲವಂತೆ. ಈ ವಿಷಯದಲ್ಲಿ ಇಬ್ಬರ ನಡುವೆ ವಾಗ್ವಾದವೂ ನಡೆದಿದೆ ಎಂದು ಹೇಳಿರುವ ಅಂತಣನ್, ಅವರ ಮದುವೆಯ ಬಗ್ಗೆ ಈಗ ಯಾವ ಮಾಹಿತಿಯೂ ಇಲ್ಲದ ಕಾರಣ, ಅವರು ರಾಜಕೀಯಕ್ಕೆ ಪ್ರವೇಶಿಸಲು ನಿರ್ಧರಿಸಿದ್ದಾರೆಯೇ ಎಂಬುದನ್ನು ಕಾದು ನೋಡಬೇಕಿದೆ. ಆದರೆ ಅವರು ಸಿನಿಮಾದಿಂದ ದೂರ ಸರಿಯುವ ನಿರ್ಧಾರದಲ್ಲಿ ದೃಢವಾಗಿದ್ದಾರೆ ಎಂದು ಅಂತಣನ್ ಹೇಳಿದ್ದಾರೆ.

ಪ್ರಕಾಶಕ– ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು–560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು–562123 ಇಲ್ಲಿ ಮುದ್ರಿಸಲ್ಪಟ್ಟಿದೆ. **RNI.KAR/KAN/2009/31934,** ದೂರವಾಣಿ: **9448074878**
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
**RNI.KAR/KAN/2009/31934.**VOLUME-16/ISSUE-**58** Email-mussanje2010@gmail.com, Phone: **9448074878**